ಸಂಪುಟ: ೦೬/ ಸಂಚಿಕೆ: ೨೯೨/ಮಂಗಳವಾರ ದಿನಾಂಕ : ೨೧-೦೧-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 292/ TUESDAY Date : 21-01-2025/ RNI No. KARKAN/2019/77640/ Postal Reg No. PMG/KA/NK/BM/135/25-26 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಹಿಡ್ಕಲ್: ಕೇವಲ ಅರ್ಧ ಟಿಎಂಸಿ ನೀರು ಬಳಕೆ: ಎಂ ಬಿ ಪಾಟೀಲ

ಬೆಂಗಳೂರು: ಬೆಳಗಾವಿ ಜಿಲ್ಲೆಯಲ್ಲಿರುವ ಹಿಡಕಲ್ ಅಣೆಕಟ್ಟೆಯಿಂದ ಪಕ್ಕದ ಹುಬ್ಬಳ್ಳಿ-ಧಾರವಾಡದ ಕೈಗಾರಿಕಾ ಪ್ರದೇಶಗಳಿಗೆ ನಾವು ಬಳಸುತ್ತಿರುವುದು ಕೇವಲ 0.58 ಟಿಎಂಸಿ ಅಡಿ ನೀರಷ್ಟೆ. ಈ ವಿಚಾರದಲ್ಲಿ ವಿರೋಧ ಸರಿಯಲ್ಲ. ಕೈಗಾರಿಕೆಗಳು ಬೆಳೆಯಬೇಕು ಎಂದರೆ ನೀರನ್ನು ಕೊಡಬೇಕಾದ್ದು ಸರಕಾರದ ಮೂಲಭೂತ ಕರ್ತವ್ಯ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಸೋಮವಾರ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, 'ಕೃಷ್ಣಾ ನದಿ ನೀರು ಹಂಚಿಕೆಗೆ ಸಂಬಂಧಿಸಿದ ನ್ಯಾಯಾಧೀಕರಣ ತೀರ್ಪಿನಲ್ಲಿ ಕೈಗಾರಿಕಾ ಬೆಳವಣಿಗೆ ಸಲುವಾಗಿಯೇ ಹಿಡಕಲ್ ಜಲಾಶಯದಿಂದ 4 ಟಿಎಂಸಿ ಅಡಿ ನೀರು ಹಂಚಿಕೆ ಮಾಡಲಾಗಿದೆ. ಇದರಲ್ಲಿ ನಾವು ಕೇವಲ ಪ್ರತಿ ನಿತ್ಯ 45 ದಶ ಲಕ್ಷ ಲೀಟರ್ (0.58 ಟಿಎಂಸಿ) ನೀರು ಮಾತ್ರ ಬಳಸಲು ತೀರ್ಮಾನಿಸಿದ್ದೇವೆ. ಇದರಲ್ಲಿ ಬೆಳಗಾವಿ ಜಿಲ್ಲೆಯ ಜನರಿಗೆ ತೊಂದರೆ ಆಗುವಂಥ ಯಾವ ಅಂಶವೂ ಇಲ್ಲ' ಎಂದು ಸ್ಪಷ್ಟಪಡಿಸಿದ್ದಾರೆ.

ಸರಕಾರವೇನೂ ಹಿಡಕಲ್ ಅಣೆಕಟ್ಟೆಯಿಂದ ನೀರು ಕೊಡಲು ಮುಂದಾಗಿಲ್ಲ. ಕೆಳಭಾಗದ ನದಿಯಿಂದ ಈ ನೀರನ್ನು ಹುಬ್ಬಳ್ಳಿ-ಧಾರವಾಡದ ಕೈಗಾರಿಕಾ ಪ್ರದೇಶಗಳಿಗೆ ಪೂರೈಸುತ್ತೇವೆ. ನೆರೆಹೊರೆಯ ಜಿಲ್ಲೆಗಳ ಜನರ ನಡುವೆ ಪರಸ್ಪರ ಅನ್ಯೋನ್ಯತೆ ಇರಬೇಕು ಎಂದು ಅವರು ಹೇಳಿದ್ದಾರೆ.

ಹಿಡಕಲ್ ಜಲಾಶಯದಿಂದ ಈಗ ಕೃಷಿ ಭೂಮಿಗೆ ಹರಿಸುತ್ತಿರುವ ನೀರಿನ ಪ್ರಮಾಣ ಅಬಾಧಿತವಾಗಿ ಇರಲಿದೆ. ಕುಡಿಯುವ ನೀರಿಗೂ ತೊಂದರೆ ಆಗುವುದಿಲ್ಲ. ಯೋಜನೆಯ ವಿರುದ್ಧ ಮಾತನಾಡುತ್ತಿರುವವರು ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಸಚಿವರು ಹೇಳಿದ್ದಾರೆ.

****

### ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಸವಿನೆನಪು

## ಸುವರ್ಣ ವಿಧಾನಸೌಧ ಆವರಣದಲ್ಲಿ ಇಂದು ಮಹಾತ್ಮಾ ಗಾಂಧೀಜಿ ಪ್ರತಿಮೆ ಅನಾವರಣ



ಬೆಳಗಾವಿ, : ಮಹಾತ್ಮಾ ಗಾಂಧೀ-ಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ಜರುಗಿದ ಕಾಂಗ್ರೆಸ್ ಅಧೀವೇಶನದ ಶತಮಾನೋತ್ಸವದ ಸವಿನೆನಪಿಗಾಗಿ ಬೆಳಗಾವಿಯ ಸುವರ್ಣ ವಿಧಾನಸೌಧದ ಆವರಣದಲ್ಲಿ ಮಹಾತ್ಮಾ ಗಾಂಧೀಜಿಯವರ ಬೃಹತ್ ಪ್ರತಿಮೆಯನ್ನು ಮಂಗಳವಾರ (ಜ.21) ಬೆಳಿಗ್ಗೆ 10.30 ಗಂಟೆಗೆ ಅನಾವರಣಗೊಳಿಸಲಾಗುತ್ತಿದೆ.

ಬೆಳಗಾವಿಯ ಸುವರ್ಣ ವಿಧಾನಸೌಧದ ಉತ್ತರ ಪ್ರವೇಶ ದ್ವಾರದ ಎದುರಿನಲ್ಲಿ ಮಹಾತ್ಮಾ ಗಾಂಧೀಜಿಯವರ ಪ್ರತಿಮೆಯನ್ನು ರಾಜ್ಯಸಭೆ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರು ಅನಾವರಣಗೊಳಿಸಲಿದ್ದಾರೆ.

ಲೋಕಸಭೆ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಕರ್ನಾಟಕದ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್, ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಪಾಲ್ಗೊಳ್ಳುವರು.

ಪ್ರವಾಸೋದ್ಯಮ ಇಲಾಖೆ ಸಚಿವರಾದ ಎಚ್.ಕೆ.ಪಾಟೀಲ, ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ, ಕರ್ನಾಟಕ ವಿಧಾನ ಸಭೆ ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ , ಕರ್ನಾಟಕ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ, ಸಂಸದರಾದ ಜಗದೀಶ ಶೆಟ್ಟರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಪ್ರಿಯಾಂಕಾ ಜಾರಕಿಹೊಳಿ ಗೌರವಾನ್ವಿತ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ.

ಎಲ್ಲ ಸಂಸದರು, ಶಾಸಕರುಗಳು, ಸ್ವಾತಂತ್ರ್ಯ ಯೋಧರು ಹಾಗೂ ಅವರ ಕುಟುಂಬಸ್ಥರು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

**ಗಾಂಧಿ ಭಾರತ ಪುಸ್ತಕ ಬಿಡುಗಡೆ:**

ಇದೇ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಪ್ರಕಟಿತ 1924 ರ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದ ಮಹಾತ್ಮಾ ಗಾಂಧೀ-ಜಿಯವರು ಮಾಡಿದ ಭಾಷಣ ಮತ್ತು ನಿರ್ಣಯಗಳಿಂದ ಕೂಡಿದ ಕನ್ನಡ ಹಾಗೂ ಆಂಗ್ಲ ಭಾಷೆಯ "ಗಾಂಧಿ ಭಾರತ-ಮರುನಿರ್ಮಾಣ" ಪುಸ್ತಕಗಳನ್ನು ಗಣ್ಯರು ಬಿಡುಗಡೆಗೊಳಿಸಲಿದ್ದಾರೆ.

**ಮಹಾತ್ಮಾ ಗಾಂಧೀಜಿ ಬೃಹತ ಪ್ರತಿಮೆಯ ವಿವರ:**

ಬೆಳಗಾವಿಯ ಸುವರ್ಣ ವಿಧಾನಸೌಧದ ಉತ್ತರ ಪ್ರವೇಶ ದ್ವಾರದ ಬಳಿ ನಿರ್ಮಿಸಲಾದ ಮಹಾತ್ಮಾ ಗಾಂಧೀ-ಜಿಯವರ ಪ್ರತಿಮೆಯು 25 ಅಡಿ ಎತ್ತರ ಮತ್ತು 20 ಟನ್ ತೂಕ ಹೊಂದಿರುತ್ತದೆ.

ಗಾಂಧೀಜಿಯವರ ಪ್ರತಿಮೆಯು ಒಟ್ಟು 4.83 ಕೋಟಿ ರೂಪಾಯಿ ವೆಚ್ಚದಲ್ಲಿ ಪಂಚಲೋಹದಿಂದ ನಿರ್ಮಾಣಗೊಂಡಿರುತ್ತದೆ.

ಮೈಸೂರಿನ ಕಲಾವಿದರಾದ ಅರುಣ ಯೋಗಿರಾಜ ಅವರು ಮಹಾತ್ಮಾ ಗಾಂಧೀಜಿಯವರ ಪ್ರತಿಮೆಯನ್ನು ನಿರ್ಮಿಸಿರುತ್ತಾರೆ.

## ನಾವು ಸುರ್ಜೇವಾಲ ವಿರುದ್ಧ ದೂರು ಕೊಟ್ಟಿಲ್ಲ

### ಅವರೊಂದಿಗೆ ಒಳ್ಳೆ ಸಂಬಂಧ ಇದೆ: ಸಚಿವ ಸತೀಶ್ ಜಾರಕಿಹೊಳಿ



ಚಿಕ್ಕೋಡಿ (ಬೆಳಗಾವಿ): "ಕೆಲವು ಸಚಿವರು ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲ ವಿಚಾರದಲ್ಲಿ ಅಸಮಾಧಾನ ವ್ಯಕ್ತಪಡಿಸಿ ಪಕ್ಷದ ವರಿಷ್ಠರಿಗೆ ದೂರು ನೀಡಿರುವ ವಿಚಾರ ನನಗೆ ಗೊತ್ತಿಲ್ಲ. ನಾವು ಅವರ ವಿಚಾರದಲ್ಲಿ ಯಾವುದೇ ದೂರು ಕೊಟ್ಟಿಲ್ಲ, ಇದರ ಬಗ್ಗೆ ದೂರು ಕೊಟ್ಟವರನ್ನೇ ಕೇಳಬೇಕು. ಸುರ್ಜೇವಾಲ ಅವರೊಂದಿಗೆ ನಮ್ಮ ಸಂಬಂಧ ಚೆನ್ನಾಗಿದೆ" ಎಂದು ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ಹುಕ್ಕೇರಿ ತಾಲೂಕಿನ ಹಿಡಕಲ್ ಜಲಾಶಯದ ಉದ್ಯಾನಕಾಶಿಯಲ್ಲಿ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವ ಎಸ್. ಎನ್. ಬೋಸರಾಜು ಅವರೊಂದಿಗೆ 15 ಕೋಟಿ ರೂ. ವೆಚ್ಚದ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ಮಿನಿ ಕಾರ್ಯಾಲಯ ಕಾಮಗಾರಿಗೆ ಶಂಕು ಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಅಂಬೇಡ್ಕರ್ ಅವರಿಗೆ ಗೌರವ ಕೊಡದವರು ಅವರ ಹೆಸರು ಇಟ್ಟುಕೊಂಡು ಕಾರ್ಯಕ್ರಮ ಮಾಡುತ್ತಿದ್ದಾರೆ ಎಂಬ ಯತ್ನಾಳ್? ಹೇಳಿಕೆ ಬಗ್ಗೆ ಪ್ರತಿಕಿಯಿಸಿ, "ಇತ್ತೀಚಿಗೆ ಕೇಂದ್ರ ಸಚಿವ ಅಮಿತ್ ಶಾ ಅಂಬೇಡ್ಕರ್ ಬಗ್ಗೆ ಹೇಳಿಕೆ ನೀಡಿದ್ದರು. ಹೀಗಾಗಿ ಯತ್ನಾಳ್‌ಗೆ ಈ ಬಗ್ಗೆ ಮತನಾಡುವ ನೈತಿಕತೆ ಇಲ್ಲ" ಎಂದರು.

ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಹಾಗೂ ನಿಮ್ಮ ನಡುವೆ ಶೀತಲಸಮರ ನಡೆಯುತ್ತಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿ, "ಮುಸುಕಿನ ಗುದ್ದಾಟ, ಕೋಲ್ಡ್‌ವಾರ್ ಎಲ್ಲಿ ನಡೆಯುತ್ತಿದೆ, ನನಗೆ ಗೊತ್ತಿಲ್ಲ" ಎಂದು ಹೇಳಿದರು.

ಬೆಳಗಾವಿಯಲ್ಲಿ ಡರ್ಟಿ ಪಾಲಿಟಿಕ್ಸ್ ಬಗ್ಗೆ ಮಾತನಾಡಲ್ಲ ಎಂಬ ಹೇಳಿಕೆ ಬಗ್ಗೆ ಉತ್ತರಿಸಿ, "ಯಾವ ಉದ್ದೇಶಕ್ಕೆ ಈ ರೀತಿ ಹೇಳಿದ್ದಾರೆ ಅನ್ನೋದು ನನಗೆ ಗೊತ್ತಿಲ್ಲ. ನಮ್ಮ ಉದ್ದೇಶ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವುದಷ್ಟೇ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವಿಚಾರವಾಗಿ ಮಾತನಾಡಿ, ಬದಲಾವಣೆ ಮಾಡುವ ಶಕ್ತಿ ನನ್ನ ಬಳಿ ಇಲ್ಲ, ಅದಕ್ಕೆ ಪಕ್ಷದ ಹೈಕಮಾಂಡ್? ಇದೆ" ಎಂದರು. ಡಿ.ಕೆ. ಶಿವಕುಮಾರ್‌ರನ್ನು ಭೇಟಿಯಾಗದ ವಿಚಾರವಾಗಿ ಮಾತನಾಡಿ, "ನಾನೇನು ಖಾಲಿ ಇಲ್ಲ, ನಿನ್ನೆ, ಮೊನ್ನೆ ಮತ್ತು ಇವತ್ತು ಕಾರ್ಯಕ್ರಮ ಇತ್ತು. ಹಾಗಾಗಿ ಹೊರಗಡೆ ಇದ್ದೆ, ಎಲ್ಲವನ್ನೂ ಬ್ಯಾಲೆನ್ಸ್ ಮಾಡಬೇಕು. ಅಧ್ಯಕ್ಷರಿದ್ದಾರೆ ಅವರ ಜೊತೆಗೆ ಬಹಳಷ್ಟು ಟೀಮ್?ಗಳು ಕೆಲಸ ಮಾಡುತ್ತಿವೆ. ನಮಗೆ ಕೊಟ್ಟ ಜವಾಬ್ದಾರಿಯನ್ನು ನಾವು ಮಾಡುತ್ತೇವೆ" ಎಂದು ಹೇಳಿದರು.

ಕಾಂಗ್ರೆಸ್ ಶಾಸಕರು ಬಿಜೆಪಿಗೆ ಬರ್ತಾರೆ ಎಂಬ ಯತ್ನಾಳ್ ಹೇಳಿಕೆ ವಿಚಾರ ಬಗ್ಗೆ ಮಾತನಾಡಿ, "ಯಾವ ಶಾಸಕರು ಎಲ್ಲೂ ಹೋಗಲ್ಲ. ಕಾಂಗ್ರೆಸ್ ಶಾಸಕರು ಬಿಜೆಪಿಗೆ ಹೋಗಲ್ಲ, ಬಿಜೆಪಿಯವರು ಕಾಂಗ್ರೆಸ್‌ಗೆ ಬರಲ್ಲ" ಎಂದು ಸಚಿವರು ಸ್ಪಷ್ಟಪಡಿಸಿದರು.

**ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಇತ್ತೀಚೆಗೆ ನಡೆದ ಅಪಘಾತದಲ್ಲಿ ಗಾಯಗೊಂಡು ಬೆಳಗಾವಿಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಸೋಮವಾರ ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು. ಸಚಿವರಾದ ಜಿ.ಪರಮೇಶ್ವರ, ಎಚ್.ಸಿ.ಮಹದೇವಪ್ಪ ಮತ್ತಿತರರು ಉಪಸ್ಥಿತರಿದ್ದರು.**





# ಸಾಂಕ್ರಾಮಿಕ ರೋಗಗಳ ಕುರಿತು ಅರಿವು ಕಾರ್ಯಕ್ರಮ



ಯರಗಟ್ಟಿ : ತಾಲೂಕಿನ ಕಿಟದಾಳದ ರಾಣಿ ಚೆನ್ನಮ್ಮ ಬಾಲಕಿಯರ ವಸತಿ ಶಾಲೆಯಲ್ಲಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

100 ದಿನಗಳ ಟಿಬಿ ಮುಕ್ತ ಭಾರತ ಅಭಿಯಾನವು ದಿನಾಂಕ-07-12-2024 ರಿಂದ 17-03-2024 ರವರೆಗೆ ಜರುಗಲಿದೆ. ಕ್ಷಯರೋಗದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ

ಕ್ಷಯರೋಗ ಪತ್ತೆ ತೀವ್ರ ಗೊಳಿಸುವದು

ಕ್ಷಯರೋದಿಂದಾಗುವ ಮರಣದ ಪ್ರಮಾಣವನ್ನು ಕಡಿಮೆ ಮಾಡುವದು ಅಭಿಯಾನದ ಉದ್ದೇಶ ವಾಗಿದೆ.

60 ವರ್ಷ ಮೇಲ್ಪಟ್ಟವರಿಗೆ ಮಧುಮೇಹ ಇದ್ದವರಿಗೆ, ಎಚ್ಐವಿ ಏಡ್ಸ್ ಇದ್ದವ-ರಿಗೆ, ಅಪೌಷ್ಟಿಕತೆಯಿಂದ ಬಳಲುತ್ತಿರುವವ-ರಿಗೆ,ಕ್ಷಯರೋಗಿಗಳ ಸಂಪರ್ಕದಲ್ಲಿದ್ದವರಿಗೆ ಈ ರೋಗವು ತೀವ್ರವಾಗಿ ಹರಡುವ ಸಾಧ್ಯತೆ ಇರುವುದು.

ಆದ್ದರಿಂದ ಎರಡು ವಾರಕ್ಕಿಂತ ಹೆಚ್ಚಿಗೆ ಕೆಮ್ಮಿನೊಂದಿಗೆ ಕಫ, ಕಫದಲ್ಲಿ ರಕ್ತ ಬೀಳುವುದು ಎದೆ ನೋವು ಸಾಯಂಕಾಲ ಜ್ವರ ತೂಕ ಕಡಿಮೆಯಾಗುವುದು ಹಸಿವಾಗದೆ ಇರುವದು ಇಂತಹ ಲಕ್ಷಣಗಳನ್ನು ಹೊಂದಿದವರು ಕಫ, ಸಿಬಿ ನೆಟ್, ಮಾಂಟೋ, ಎಕ್ಸರೇ ಪರೀಕ್ಷೆಗಳ ಮೂಲಕ ಕ್ಷಯರೋಗವನ್ನು ಖಚಿತ ಪಡಿಸಿಕೊಳ್ಳುವದು ನಂತರ

ಆರು ತಿಂಗಳ ಚಿಕಿತ್ಸೆ ಪಡೆದಲ್ಲಿ ಕ್ಷಯ ರೋಗ ಸಂಪೂರ್ಣ ಗುಣವಾಗುವುದು ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀ ಆಯ್ ಆರ್ ಗಂಜಿ ಹೇಳಿದರು.

ಬಾಲಕಿಯರ ವೈಯಕ್ತಿಕ ಆರೋಗ್ಯ ಮುಟ್ಟಿನ ಶುಚಿತ್ವ ಸ್ಯಾನಿಟರಿ ಪ್ಯಾಡ ಬಲಕೆಯ ಬಗ್ಗೆ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಯಾದ ಸಮಿತ್ರಾ ಪೂಜೇರ ಮಾಹಿತಿ ನೀಡಿದರು.

ಸಮುದಾಯ ಆರೋಗ್ಯಾಧಿಕಾರಿಯಾದ ಮಹಾಲಿಂಗ ತರಗೋಲ ಇವರು ಕುಷ್ಠರೋಗ ಸಾಂಕ್ರಾಮಿಕ ರೋಗ ವಾಗಿದ್ದು ತಿಳಿಬಿಳಿ ತಾಮ್ರ ವರ್ಣದ ಸ್ಪರ್ಶ ಜ್ಞಾನವಿಲ್ಲದ ಕಲೆಗಳು ಕೈ ಕಾಲು ಜೋಮು ಹಿಡಿದಲ್ಲಿ ಅದು ಕುಷ್ಠರೋಗ ವಾಗಿರಬಹುದು ಆರೋಗ್ಯ ಸಿಬ್ಬಂದಿಯ ವರಲ್ಲಿ ತೋರಿಸಿ ಚಿಕಿತ್ಸೆ ಪಡೆಯಲು ತಿಳಿಸಿದರು.

ಈ ವೇಳೆ ಮುಖ್ಯ ಗುರುಗಳಾದ ಆರ್. ಎಸ್. ತಳವಾರ, ಮೇಲ್ವಿಚಾರಕಿಯಾದ ಲಕ್ಷ್ಮಿ ಪಾಟೀಲ, ಶಾಲಾ ಶಿಕ್ಷಕರು ಅಂಗನವಾಡಿ-ಆಶಾಕಾರ್ಯಕರ್ತೆಯರು ವಿದ್ಯಾರ್ಥಿಗಳು ಹಾಜರಿದ್ದರು.

# 21ನೇ ಸತೀಶ ಶುಗರ್ಸ ಅವಾರ್ಡ್ಸನ ಅಂತಿಮ ದಿನದ ಸಮಾರೋಪ ಸಮಾರಂಭ



ಗೋಕಾಕ: ಗೋಕಾಕ ನಗರವನ್ನು ದೆಹಲಿಯಲ್ಲಿ ಗುರುತಿಸುವ ಕಾಲ ಬರುತ್ತದೆ ಎಂದು 35 ವರ್ಷಗಳ ಹಿಂದೆ ನಾವು ಹೇಳಿದ ಹೇಳಿಕೆ ನಿಮ್ಮೆಲ್ಲರ ಆಶೀರ್ವಾಧದಿಂದ ನನಸಾಗಿದೆ ಎಂದು ಸತೀಶ ಶುಗರ್ಸ ಅವಾರ್ಡ್ಸನ ರೂವಾರಿ, ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಅವರು, ರವಿವಾರದಂದು ನಗರದ ಶ್ರೀ ಮಹರ್ಷಿ ವಾಲ್ಮೀಕಿ ಕ್ರೀಡಾಂಗಣದಲ್ಲಿ ನಡೆದ 21ನೇ ಸತೀಶ ಶುಗರ್ಸ ಅವಾರ್ಡ್ಸನ ಅಂತಿಮ ದಿನದ ಸಮಾರೋಪ ಸಮಾರಂಭದಲ್ಲಿ ಅಧ್ಯಕ್ಷೀಯ ಭಾಷಣ ಮಾಡಿದರು.

ಈ ವೇದಿಕೆಯಲ್ಲಿ ಅರಳಿದ ಪ್ರತಿಭೆಗಳು ಇಂದು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಗೋಕಾಕ ಕೀರ್ತಿಯನ್ನು ಹರಡುತ್ತಿದ್ದಾರೆ. ರಾಜ-ಕೀಯವಾಗಿ, ಆರ್ಥಿಕವಾಗಿ, ಸಮಾಜಾಕಿವಾಗಿ ಹಾಗೂ ಸಾಂಸ್ಕೃತಿಕವಾಗಿ ಇಂದು ಗೋಕಾಕ ನಗರ ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಂಡಿದೆ. ಸಮಾಜ ಸೇವೆಯೊಂದಿಗೆ ಸಾಂಸ್ಕೃತಿ-ಕವಾಗಿ ಶ್ರೀಮಂತಗೊಳಿಸುವದೇ ನಮ್ಮ ಗು-ರಿಯಾಗಿದೆ. ನಿಮ್ಮೆಲ್ಲರ ಸಹಕಾರದಿಂದ ಈ ಕಾರ್ಯಕ್ರಮ ಯಶಸ್ವಿಯಾಗುತ್ತಿದ್ದು ಈ ಬಾರಿ ಚಿಕ್ಕೋಡಿಯಲ್ಲೂ ಪ್ರಾರಂಭಿಸಿ ಆ ಭಾಗದ ಪ್ರತಿಭೆಗಳನ್ನು ಪ್ರೋತ್ಸಾಹಿಸಲಾಗುತ್ತಿದೆ. ರಾಜ್ಯದ ಕೆಲವೇ ನಗರಗಳಲ್ಲಿ ಇಂತಹ ಕಾರ್ಯಕ್ರಮಗಳು ಜರುಗುತ್ತಿದ್ದು ಅದರಲ್ಲಿ ಗೋಕಾಕ ಒಂದಾಗಿದೆ. ನಿಮ್ಮ ಸಹಕಾರ ಸದಾ ಹೀಗೆ ಇರಲಿ ಎಂದರು.

ಗೋಕಾಕ ತಾಲೂಕಿನ ಅಭಿವೃದ್ಧಿಗಾಗಿ ಹಲವಾರು ಅಭಿವೃದ್ಧಿಪರ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. 40ಕೋಟಿ ರೂ ವೆಚ್ಚದ ಲೋಳಸೂರ ಸೇತುವೆ, ರಸ್ತೆಗಳ ದುರಸ್ಥಿಕರಣ ಹಾಗೂ ವಾಲ್ಮೀಕಿ ಕ್ರೀಡಾಂಗಣಕ್ಕೆ ಹೊನಲು ಬೆಳಕಿನ ಸೌಲಭ್ಯವನ್ನು ಕಲ್ಪಿಸಲಾಗಿದೆ. ಇನ್ನೂ ಹಲವು ಬೃಹತ್ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವದು. ನಿಮ್ಮೆಲ್ಲರ ಸಹಕಾರದಿಂದ ಗೋಕಾಕ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದ್ದು ಇನ್ನೂ ಹೆಚ್ಚಿನ ಅಭಿವೃದ್ಧಿಗಾಗಿ ಆಶೀರ್ವಧಿಸುವಂತೆ ಕೋರಿದರು.

ವೇದಿಕೆಯಲ್ಲಿ ಸಂಸದೆ ಪ್ರೀಯಾಂಕಾ ಜಾರಕಿಹೊಳಿ, ಕಾಂಗ್ರೇಸ್ ಯುವ ಪ್ರಧಾನ ಕಾರ್ಯದರ್ಶಿ ರಾಹುಲ ಜಾರಕಿಹೊಳಿ, ಎಸ್ಎಸ್ಎ ಕಾಲೇಜಿನ ಪ್ರಾಚಾರ್ಯ ಪ್ರಕಾಶ ಲಕ್ಷೇಟ್ಟಿ, ರಿಯಾಜ ಚೌಗಲಾ ಇದ್ದರು.

# ಕಬ್ಬು ಹಾನಿಗೆ ಪರಿಹಾರ ನೀಡಲು ನಿಧಿ ಸ್ಥಾಪನೆ

## ಈ ವರ್ಷದಿಂದ ಪ್ರತಿ ವರ್ಷ 50 ಲಕ್ಷ ರೂ. ನಿಧಿ; ಕಬ್ಬು ಅಭಿವೃದ್ಧಿ ಸಚಿವ ಶಿವಾನಂದ ಪಾಟೀಲ ಭರವಸೆ

ಬೆಳಗಾವಿ, : ಅಗ್ನಿ ದುರಂತದಲ್ಲಿ ಸಂಭವಿಸುವ ಕಬ್ಬಿನ ಹಾನಿಗೆ ಪರಿಹಾರ ನೀಡಲು ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದ ನಿಧಿ ಸ್ಥಾಪಿಸಲಿದ್ದು, ಈ ವರ್ಷದಿಂದಲೇ 50 ಲಕ್ಷ ರೂ. ತೆಗೆದಿರಿಸಲಾಗುವುದು ಎಂದು ಸಕ್ಕರೆ ಮತ್ತು ಕಬ್ಬು ಅಭಿವೃದ್ಧಿ ಸಚಿವ ಶಿವಾನಂದ ಪಾಟೀಲ ಘೋಷಣೆ ಮಾಡಿದರು

ಇಲ್ಲಿನ ಪ್ರವಾಸಿ ಮಂದಿರ (ವಿಜಯಪುರ) ದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ರಾಜ್ಯಾಧ್ಯಕ್ಷ ಚುನ್ನಪ್ಪ ಪೂಜೇರಿ ನೇತೃತ್ವದ ರೈತ ಮುಖಂಡರೊಂದಿಗೆ ಕಬ್ಬು ಬೆಳೆಗಾರರ ಸಮಸ್ಯೆ ಬಗ್ಗೆ ಚರ್ಚಿಸಿದ ಸಚಿವರು, ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ ನೀಡುವ ಪರಿಹಾರ ಅತ್ಯಲ್ಪ ಎಂಬ ಕಾರಣ-ಕ್ಕೆ ನಿಜಲಿಂಗಪ್ಪ ಸಂಸ್ಥೆಯಿಂದಲೂ ಪರಿಹಾರ ನೀಡುವ ನಿರ್ಧಾರ ಕೈ ಗೊಳ್ಳಲಾಗಿದೆ ಎಂದು ಹೇಳಿದರು.

ಆರಂಭದಲ್ಲಿ ಗರಿಷ್ಠ ಐದು ಎಕರೆ ಮಿತಿಯಲ್ಲಿ ಪರಿಹಾರ ನೀಡಲಿದ್ದು, ನಂತರ ಈ ಪರಿಹಾರ ಯೋಜನೆಯನ್ನು ವಿಸ್ತರಣೆ ಮಾಡುವ ಬಗ್ಗೆ ಚಿಂತನೆ ಮಾಡಲಾಗುವುದು. ವಿದ್ಯುತ್ ಷಾರ್ಟ್ ಸರ್ಕ್ಯೂಟ್ ಮತ್ತಿತರ ಕಾರಣಗಳಿಂದ ಕಬ್ಬು ಹಾನಿಗೀಡಾದರೂ ಸಕ್ಕರೆ ಕಾರ್ಖಾನೆಗಳು ಈ ಕಬ್ಬನ್ನು ನು-ರಿಸಲಿವೆ. ಆದರೂ ಸರ್ಕಾರ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಪರಿಹಾರ ನೀಡುವ



ನಿರ್ಧಾರ ಕೈಗೊಂಡಿದೆ ಎಂದು ತಿಳಿಸಿದರು.

ಬಹುಮಾನದ ಮೊತ್ತ ಹೆಚ್ಚಳ: ತೂಕದಲ್ಲಿ ವಂಚನೆ ಮಾಡುವ ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿ ವಿರುದ್ಧ ಸೂಕ್ತ ದಾಖಲೆಗಳೊಂದಿಗೆ ದೂರು ನೀಡುವ ರೈತ-ರಿಗೆ ಒಂದು ಲಕ್ಷ ರೂ. ನಗದು ಬಹುಮಾನ ನೀಡಲಾಗುವುದು ಎಂದು ಬೆಳಗಾವಿ ಅಧಿವೇಶನದ ವೇಳೆ ಘೋಷಣೆ ಮಾಡಲಾಗಿ-ತ್ತು.ಈ ಬಹುಮಾನದ ಮೊತ್ತವನ್ನು 2.5 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗಿದ್ದು, ದೂರು ನೀಡುವ ಕಬ್ಬು ಬೆಳೆಗಾರರಿಗೆ ಯಾವುದೇ ಸಮಸ್ಯೆಯಾಗದಂತೆ ಸರ್ಕಾರ ಜವಾಬ್ದಾರಿ ತೆಗೆದುಕೊಳ್ಳಲಿದೆ.

ಅವರ ಕಬ್ಬನ್ನು ನುರಿಸುವ ಹೊಣೆಯನ್ನೂ ಸರ್ಕಾರ ಹೊರಲಿದೆ ಎಂದು ಭರವಸೆ ನೀಡಿದರು.

ರಾಜ್ಯದಲ್ಲಿ ಒಟ್ಟು 80 ಸಕ್ಕರೆ ಕಾರ್ಖಾನೆಗಳಿದ್ದು, ಅವುಗಳಲ್ಲಿ 72 ಕಾರ್ಖಾನೆಗಳಲ್ಲಿ ಹಳೆ ಪದ್ಧತಿಯ ಅನಲಾಗ್ ಯಂತ್ರಗಳ ಬದಲಿಗೆ ಡಿಜಿಟಲ್ ತೂಕದ ಯಂತ್ರಗಳನ್ನು ಹಾಕಲಾಗಿದೆ.

ಐದು ಕಾರ್ಖಾನೆಗಳ ಮಾಲೀಕರು ನ್ಯಾಯಾಲಯಕ್ಕೆ ಹೋಗಿರುವುದರಿಂದ ವಿಳಂಭವಾಗಿದೆ. ಇತರ ಕಾರ್ಖಾನೆಗಳಲ್ಲಿ ಡಿಜಿಟಲ್ ತೂಕದ ಯಂತ್ರ ಅಳವಡಿಕೆ ಪ್ರಗತಿಯಲ್ಲಿದೆ. ಬೆಳಗಾವಿಯಲ್ಲಿ ಮೂರು, ಬಾಗಲಕೋಟ ಜಿಲ್ಲೆಯಲ್ಲಿ ಎರಡು ಸೇ-ರಿದಂತೆ ರಾಜ್ಯಾದ್ಯಂತ ಎಪಿಎಂಸಿಯಿಂದ 12 ಡಿಜಿಟಲ್ ತೂಕದ ಯಂತ್ರಗಳನ್ನು ಹಾಕಲಿದ್ದು, ರೈತ ಸಂಘಗಳು ಮುಂದೆ ಬಂದರೆ ನಿರ್ವಹಣೆ ಜವಾಬ್ದಾರಿಯನ್ನು ನೀಡಲಾಗುವುದು. ತೂಕ ಮತ್ತು ಅಳತೆ ನಮ್ಮ ಇಲಾಖೆ ವ್ಯಾಪ್ತಿಗೊಳಪಡದಿದ್ದರೂ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಈ ನಿರ್ಧಾರ ಮಾಡಲಾಗಿದೆ.

ಎಫ್ಆರ್ಪಿ ದರ ಹೆಚ್ಚಳ ಮಾಡುವ ದೃಷ್ಟಿಯಿಂದ 2025-26ನೇ ಸಾಲಿಗೆ ಪ್ರತಿ ಟನ್ಗೆ 4440 ನಿಗಧಿಪಡಿಸುವಂತೆ ರಾಜ್ಯ ಸರ್ಕಾರವೇ ಸ್ವಪ್ರೇರಣೆಯಿಂದ ಸಿಎಸಿಪಿಗೆ ಶಿಫಾರಸ್ಸು ಮಾಡಿದೆ. ಕಬ್ಬಿನ ಬೆಲೆಯನ್ನು ಕೇಂದ್ರ ಸರ್ಕಾರವೇ ನಿಗದಿಪಡಿಸಲಿದ್ದು, ಇದರಲ್ಲಿ ರಾಜ್ಯ ಸರ್ಕಾರದ ಪಾತ್ರ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಅಧ್ಯಕ್ಷ ಚೂನಪ್ಪ ಪೂಜೇರಿ, ವಿಜಯಪುರ ಜಿಲ್ಲಾ ಅಧ್ಯಕ್ಷ ಸಂಗಮೇಶ ಸಗರ, ರಾಜ್ಯ ಗೌರವಾಧ್ಯಕ್ಷ ಶಶಿಕಾಂತ ಪಡಸಲಗಿ, ಮಹೇಶ್ ಗೌಡ ಸುಬೇದಾರ್, ಶರಣಪ್ಪ ದೊಡ್ಡಮನಿ, ರಾಮನಗೌಡ ಪಾಟೀಲ, ಸೋಮು ವಿಜಯಪುರ, ಈರಪ್ಪ ಕುಳೇಕುಮಟಗಿ, ಮಾಳು ಪೂಜಾರ, ಅಪರ ಜಿಲ್ಲಾಧಿಕಾರಿ ಸೋಮನಿಂಗ ಗೆನ್ನೂರ, ಎಸ್ಪಿ ಲಕ್ಷ್ಮಣ ನಿಂಬರಗಿ, ಕೃಷಿ ಇಲಾಖೆ ಜಂಟಿ ನಿರ್ದೇಶಕಿ ರೂಪಾ, ಕೃಷಿ ಮಾರಾಟ ಮಂಡಳಿ ಸಿಜಿಎಂ ಚಂದ್ರಕಾಂತ ಪಾಟೀಲ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

*********

# ವಿವಿಧ ಕಾಮಗಾರಿ ಪರಿಶೀಲಿಸಿದ ಸಿಇಓ ಕುರೇರ



ಬಾಗಲಕೋಟೆ : ಹುಗುಂದ ಮತ್ತು ಇಲಕಲ್ಲ ತಾಲೂಕಾ ವ್ಯಾಪ್ತಿಯಲ್ಲಿ ಬರುವ ಜಾಕ್‌ವೆಲ್, ಅಂಗನವಾಡಿ ಕಟ್ಟಡ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಪರಿಶೀಲನೆ ನಡೆಸಿದರು.

ಸೋಮವಾರ ನವಲಿ ಜಾಕ್‌ವೆಲ್ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ವೀಕ್ಷಣೆ ಮಾಡಿದರು. ಕೋಡಿಹಾಳ ನೀರಿನ ಸಂರಕ್ಷಣಾ ಘಟಕದ ಕಾಮಗಾರಿ ಸ್ಥಳ ಪರಿಶೀಲಿಸಿದರು. ಬಲಕುಂದಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಫ್.ಎಸ್.ಟಿ.ಪಿ ಕಾಮಗಾರಿಗಳ ಸ್ಥಳಕ್ಕೆ ಭೇಟಿ ನೀಡಿ ವೀಕ್ಷಣೆ ಮಾಡಿದರು. ಗೋನಾಳ ಎಸ್.ಬಿ.ಅಂಗನವಾಡಿ ಕಟ್ಟಡ ಕಾಮಗಾರಿ ವೀಕ್ಷಣೆ ಮಾಡಿ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಸೂಚಿಸಿದರು.

ಭೇಟಿ ಸಮಯದಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ ಕಾರ್ಯನಿರ್ವಾಹಕ ಅಭಿಯಂತರ ಆಕಾಶ, ಹುನಗುಂದ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮುರಳಿಧರ ದೇಶಪಾಂಡೆ, ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಕೆ.ಡಿ.ನಾಯ್ಕ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗೋಡಂಬಿ ಉತ್ಪಾದನೆ ತಾಂತ್ರಿಕತೆ ಕುರಿತು ಕಾರ್ಯಾಗಾರ

ಬಾಗಲಕೋಟೆ: ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ತೋಟಗಾರಿಕೆ ಇಲಾಖೆ ಸಹಯೋಗದಲ್ಲಿ ಜನೇವರಿ 23 ರಂದು ತೋವಿವಿಯ ಆವರಣದಲ್ಲಿರುವ ರೈತ ವಿಕಾಸ ಭವನದಲ್ಲಿ ಗೋಡಂಬಿ ಉತ್ಪಾನೆ ತಾಂತ್ರಿಕತೆ ಕುರಿತು ಒಂದು ದಿನದ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಕಡಿಮೆ ನೀರಿನಲ್ಲಿ ಹಾಗೂ ಜಿಲ್ಲೆಯ ವಾತವರಣದಲ್ಲಿ ಗೋಡಂಬಿಯನ್ನು ಉತ್ಕೃಷ್ಟವಾಗಿ ಬೆಳೆಯಬಹುದಾಗಿದೆ. ಈಗಾಗಲೇ ರೈತರು ಗೋಡಂಬಿ ಗಿಡಗಳನ್ನು ತಮ್ಮ ಕೆಲವು ಪ್ರದೇಶಗಳಲ್ಲಿ ಬೆಳೆದಿದ್ದಾರೆ. ಇನ್ನೂ ಕೆಲವು ರೈತರು ಬೆಳೆಯುವ ಉತ್ಸಾಹದಲ್ಲಿ ಇದ್ದಾರೆ ಈ ವಾತವರಣಕ್ಕೆ ಗೋಡಂಬಿಯನ್ನು ಬೆಳೆಯಬಹುದು ಹಾಗೂ ಇದರ ವಿವಿಧ ತಳಿಗಳ ಪರಿಚಯ, ಉತ್ಪಾದನಾ ತಾಂತ್ರಿಕತೆ ಹಾಗೂ ಗೋಡಂಬಿ ಬೇಡಿಕೆಯಿರುವ ವಿವಿಧ ಮೌಲ್ಯವರ್ಧನಾ ಪದಾರ್ಥಗಳನ್ನು ತಯಾರಿಸಬಹುದಾಗಿದೆ.

ಆಸಕ್ತಿವುಳ್ಳ ರೈತರು ತೋವಿವಿಯ ಪ್ರಾಧ್ಯಾಪಕರು ಹಾಗೂ ರೈತ ಹಗೂ ಸಿಬ್ಬಂದಿ ತರಬೇತಿ ಕೇಂದ್ರದ ಮುಖ್ಯಸ್ಥ ಡಾ.ವಸಂತ ಎಂ. ಗಾಣಿಗೇರ (9900221631) ಇವರಿಗೆ ಕರೆ ಮಾಡಿ ಸಂಪರ್ಕಿ ಭಾಗವಹಿಸುವ ಕುರಿತು ದೃಢೀಕರಿಸಬೇಕೆಂದು ತೋಟಗಾರಿಕೆ ವಿಶ್ವವಿದ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

## ಗೂಗಲ್ ಮೀಟ್ ಮೂಲಕ ರೈತರಿಗೆ ತರಬೇತಿ

ಬಾಗಲಕೋಟೆ: ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ರೈತರ ಅನುಕೂಲಕ್ಕಾಗಿ ಜನೇವರಿ 21 ರಂದು ಮಧ್ಯಾಹ್ನ 12.30 ರಿಂದ 1.30 ವರೆಗೆ ಕಬ್ಬಿನಲ್ಲಿ ಗೊಣ್ಣೆಹುಳು (https://meet.google.com/tve-aqkq-yvt) ಹಾಗೂ ಕೈಗಾ ನಿರ್ವಹಣೆ (https://meet.google.com/gag-phtf-ims) ಕುರಿತು ಮಧ್ಯಾಹ್ನ 3.30 ರಿಂದ ಸಂಜೆ 4.30 ವರೆಗೆ ಕೈತೋಟ ಕುರಿತು ಗೂಗಲ್ ಮೀಟ್ ಮೂಲಕ ತರಬೇತಿಗಳನ್ನು ಹಮ್ಮಿಕೊಳ್ಳಲಾಗಿದೆ. ತರಬೇತಿಯಲ್ಲಿ ಭಾಗವಹಿಸಲು ಇಚ್ಛಿಸುವ ರೈತರು ಗೂಗಲ್ ಮೀಟ್ ಲಿಂಕ್‌ನ್ನು ಒತ್ತಿ ತರಬೇತಿಗೆ ಹಾಜರಾಗುವಂತೆ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಮಗಾರಿಗಳ ನಿಗದಿತ ಸಮಯದಲ್ಲಿ ಮುಗಿಸಲು ಕ್ರಮ ಕೈಗೊಳ್ಳಿ: ಸಚಿವ ಎನ್. ಎಸ್ ಭೋಸರಾಜು ಸೂಚನೆ



**ಕಾಮಗಾರಿಗಳ ವಿಳಂಬಕ್ಕೆ ಕಾರಣರಾದವರ ಮೇಲೆ ಕ್ರಮಕ್ಕೆ ಸೂಚನೆ**

**ಬೆಳಗಾವಿ ವಿಭಾಗದ ಏತ ನೀರಾವರಿ, ಬ್ಯಾರೇಜ್ ಹಾಗೂ ಚೆಕ್‌ಡ್ಯಾಂಗಳ ಪ್ರಗತಿ ಪರಿಶೀಲನೆ**

**ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ಸೂಚನೆ**

ಬೆಳಗಾವಿ, : ಗುಣಮಟ್ಟ ಕಾಯ್ದುಕೊಂಡು, ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಿ ರೈತರಿಗೆ ಅನುಕೂಲ ಮಾಡಿಕೊಡಲು ಕ್ರಮ ಕೈಗೊಳ್ಳುವಂತೆ *ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇಂದು ಲೋಕೋಪಯೋಗಿ ಮತ್ತು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೋಳಿ, ಶಾಸಕರಾದ ನಿಖಿಲ್ ಕತ್ತಿ ಅವರೊಂದಿಗೆ ಬೆಳಗಾವಿ ವಿಭಾಗದ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಕಾಮಗಾರಿಗಳ ಪರಿಶೀಲನೆ

ನಡೆಸಿ ಮಾತನಾಡಿದರು. ಸುಲ್ತಾನಪುರ ಏತ ನೀರಾವರಿ ಯೋಜನೆಯ ಮೂಲಕ 19 ಕೆರೆಗಳನ್ನು ತುಂಬುವ ಕಾಮಗಾರಿ, ಯರನಾಳದಲ್ಲಿನ ಬ್ರಿಡ್ಜ್ ಕಂ ಬ್ಯಾರೇಜ್‌ನ ಪರಿವೀಕ್ಷಣೆ ನಡೆಸಿದ ನಂತರ ಹುನ್ನೂರು ಪ್ರವಾಸಿ ಮಂದಿರಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಬೆಳಗಾವಿ ವಿಭಾಗದ ಅಡಿಯಲ್ಲಿ ಕೈಗೊಳ್ಳಲಾಗುತ್ತಿರುವ ಏತ ನೀರಾವರಿ, ಬ್ರಿಡ್ಜ್ ಕಂ ಬ್ಯಾರೇಜ್ ಹಾಗೂ ಚೆಕ್ ಡ್ಯಾಂ ಕಾಮಗಾರಿಗಳ ಪ್ರಗತಿಯ ಬಗ್ಗೆ ಸಮಗ್ರ ಮಾಹಿತಿಯನ್ನು ಸಚಿವರು ಪಡೆದುಕೊಂಡರು. ಅನಗತ್ಯ ವಿಳಂಬವಾಗುತ್ತಿರುವ ಯೋಜನೆಗಳ ಬಗ್ಗೆ ಮಾಹಿತ ಪಡೆದುಕೊಂಡ ಸಚಿವರು ಇದಕ್ಕೆ ಕಾರಣರಾದ ಅಧಿಕಾರಿಗಳನ್ನು ತರಾಟೆಗೆ ತಗೆದುಕೊಂಡರು.

ಗುಣಮಟ್ಟವನ್ನು ಕಾಯ್ದುಕೊಂಡು ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕು. ಯಾವ ಕಾಮಗಾರಿಗಳಲ್ಲಿ ಅನಗತ್ಯ ವಿಳಂಬವಾಗುತ್ತಿದಿಯೋ ಅಂತಹ ಕಡೆಗಳಲ್ಲಿ ಟೆಂಡರ್‌ಗಳನ್ನು ರದ್ದುಗೊಳಿಸಿ ರಿ ಟೆಂಡರ್ ಪ್ರಕ್ರಿಯೆ ಪ್ರಾರಂಭಗೊಳಿಸುವಂತೆ ಇದೇ ಸಂಧರ್ಭದಲ್ಲಿ ಅಧಿಕಾರಿಗಳಿಗೆ ಸಚಿವರಾದ ಭೋಸರಾಜು ಸೂಚನೆ ನೀಡಿದರು.

# ರಾಯಣ್ಣ ಮೂರ್ತಿ ಪ್ರತಿಷ್ಠಾಪನೆ



ರಬಕವಿ-ಬನಹಟ್ಟಿ,ಜ20: ಬನಹಟ್ಟಿಯ ಸೋಮವಾರ ಪೇಟೆ ವೃತ್ತದಲ್ಲಿ ಸೋಮವಾರ ಬೆಳಿಗ್ಗೆ ಸಂಗೊಳ್ಳಿ ರಾಯಣ್ಣನ ಮೂರ್ತಿಯ ಪ್ರತಿಷ್ಠಾಪನೆ ಹಾಗು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

ನ್ಯಾಯವಾದಿ ಅರ್ಜುನ ಜಿಡ್ಡಿಮನಿ ಮಾತನಾಡಿ, ರಾಯಣ್ಣನವರ ವ್ಯಕ್ತಿತ್ವದ ಬಗ್ಗೆ ಹೆಚ್ಚಿನ ಅಧ್ಯಯನ ನಡೆಸಿ ಅವರಂತೆ ನಾವು ಉತ್ತಮ ವ್ಯಕ್ತಿತ್ವವನ್ನು ಬೆಳೆಸಿಕೊಂಡಾಗ ಮಾತ್ರ ರಾಯಣ್ಣನವರಿಗೆ ವಿಶೇಷ ಗೌರವ ಸಲ್ಲಿಸಿದಂತಾಗುತ್ತದೆ. ದೇಶ ಪ್ರೇಮಿಯಾಗಿ ದೇಶಕ್ಕೆ ತಮ್ಮನ್ನು ಸಮರ್ಪಿಸಿಕೊಂಡಿದ್ದ ರಾಯಣ್ಣ ನಿಯತ್ತು ಮತ್ತು ಕ್ರಾಂತಿಕಾರಕ ಧೋರಣೆಗೆ ಹೆಸರಾಗಿದ್ದವರು. ಅವರ ವ್ಯಕ್ತಿತ್ವವು ಪ್ರತಿಯೊಬ್ಬರಿಗೂ ಮಾದರಿಯೆಂದರು.

ಕರೆಪ್ಪ ಭುಜಿಂಗ ಮಾತನಾಡಿ, ಬ್ರಿಟಿಷರ ಪಾಲಿಗೆ ಸಿಂಹ ಸ್ವಪ್ನರಾಗಿದ್ದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಆದರ್ಶಗಳು ಇಂದಿಗೂ ದಾ-ರಿದೀಪವಾಗಿವೆ ಎಂದರು.

ಭೀರಪ್ಪ ಜಿಡ್ಡಿಮನಿ, ಶೇಖರ ಮಹಿಷವಾಡಗಿ, ಕರೆಪ್ಪ ಗಡದಿ, ದೇವಪ್ಪ ಮಹಿಷವಾಡಗಿ, ರಮೇಶ ಜಿಡ್ಡಿಮನಿ, ಪರಸಪ್ಪ ಜಂಗನ್ನವರ, ಮಾಳಪ್ಪ ಕ-ರಿಗಾರ, ಮಾಳಪ್ಪ ಆಲಕನೂರ, ಕಾಡಪ್ಪ ಆಲಕನೂರ ಸೇರಿದಂತೆ ಅನೇಕರಿದ್ದರು.

*********

# ಮಿನಿ ತಾರಾಲಯ ಶೀಘ್ರದಲ್ಲಿ ಲೋಕಾರ್ಪಣೆ ಭರವಸೆ

ಬೆಳಗಾವಿ: ರಾಜ್ಯ ಸರ್ಕಾರ ಮಕ್ಕಳಲ್ಲಿ ವಿಜ್ಞಾನ, ತಂತ್ರಜ್ಞಾನದ ಕುರಿತು ಆಸಕ್ತಿ ಹಾಗೂ ಹೆಚ್ಚಿನ ಜ್ಞಾನ ಒದಗಿಸುವ ಹಿನ್ನಲೆಯಲ್ಲಿ ರಾಜ್ಯದಲ್ಲಿ ವಿವಿಧ ಭಾಗಗಳಲ್ಲಿ ವಿಜ್ಞಾನ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಹಿಡಕಲ್ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ಮಿನಿ ತಾರಾಲಯ ಕಾಮಗಾರಿಯನ್ನು ಶೀಘ್ರವೇ ಪೂರ್ಣಗೊಳಿಸಲು ಸಚಿವರಾದ ಎನ್.ಎಸ್.ಭೋಸರಾಜು ಅವರು ಹೇಳಿದರು.

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ಜಲಸಂಪನ್ಮೂಲ ಇಲಾಖೆ ಇವರ ಸಂಂ-ಮುಕ್ತಾಶ್ರಯದಲ್ಲಿ ಹಿಡಕಲ್ ಉದ್ಯಾನಕಾಶಿಯಲ್ಲಿ ಸೋಮವಾರ(ಜ.20) ರಾಜಾ ಲಖಮಗೌಡ ಉದ್ಯಾನಕಾಶಿ ಅಭಿವೃದ್ಧಿ ಯೋಜನೆಯಡಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ಮಿನಿ ತಾರಾಲಯ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ 8 ರಿಂದ 9 ಜಿಲ್ಲೆಗಳಲ್ಲಿ ವಿಜ್ಞಾನ ಕೇಂದ್ರಗಳನ್ನು ಸ್ಥಾಪನೆಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ವಿಜ್ಞಾನದ ಬಗ್ಗೆ ಆಸಕ್ತಿ ಬೆಳೆಸುವುದರ ಜೊತೆಯಲ್ಲೇ, ವಿಜ್ಞಾನ ಅಧ್ಯಯನ ಹಾಗೂ ಸಂಶೋಧನೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ರಾಜ್ಯ ಸರಕಾರವು ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿದೆ ಎಂದು ಹೇಳಿದರು.

ಬೆಂಗಳೂರಿನ ಹೆಬ್ಬಾಳದಲ್ಲಿ ಏಷಿಯಾ ಖಂಡದಲ್ಲಿ ನಂಬರ್ ಒನ್ ಮಾದರಿಯಲ್ಲಿ ಸೈನ್ಸ್ ಗ್ಯಾಲರಿ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ. ರಾಜ್ಯದ ನಾಲ್ಕು ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ ಜಿಲ್ಲೆಗಳಲ್ಲಿ ತಾರಾಲಯ ನಿರ್ಮಾಣಕ್ಕೆ ಅನುದಾನ ಒದಗಿಸಲಾಗಿದೆ. ಮಂಗಳೂರ ಜಿಲ್ಲೆಯ ಪಿಲಕುಳಿಯಲ್ಲಿ 350 ಎಕರೆ ಪ್ರದೇಶದಲ್ಲಿ ದೇಶದಲ್ಲಿಯೇ ಅತಿ ದೊಡ್ಡ ತಾರಾಲಯವನ್ನು ಸ್ಥಾಪಿಸಲಾಗಿದೆ. ಸರಕಾರದ ವತಿಯಿಂದ ರಾಜ್ಯದ 833 ವಸತಿ ಶಾಲೆಗಳಿಗೆ



ಟೆಲಿಸ್ಕೋಪ್ ವಿತರಣೆ ಹಾಗೂ ಲ್ಯಾಬರೋಟ-ರಿಗಳನ್ನು ಸ್ಥಾಪಿಸಲಾಗುವದು. ಇಂದು ತಾರಾಲಯ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಸಲಾದ ಕಾಮಗಾರಿಯನ್ನು ಒಂದು ವರ್ಷದೊಳಗೆ ಪೂರ್ಣಗೊಳಿಸದ್ದಲ್ಲಿ ಈ ತಾರಾಲಯವನ್ನು ಇನ್ನೂ ಮೇಲ್ದರ್ಜೆಗೆ ಏರಿಸಲು ಕ್ರಮವಹಿಸಲಾಗುವುದು ಎಂದು

ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಮಾತನಾಡಿ ವಿಜ್ಞಾನ ಕೇಂದ್ರದ ನಿರ್ಮಾಣಕ್ಕೆ ಮೊದಲ ಹಂತದಲ್ಲಿ ಈಗಾಗಲೇ 13 ಕೋಟಿ ವೆಚ್ಚದಲ್ಲಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಈ ಭಾಗದ ವಿದ್ಯಾರ್ಥಿಗಳಿಗೆ ತಾರಾಲಯ ಉಪಯೋಗವಾಗಲಿದೆ ಎಂದರು.

ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ಹಾಗೂ ಪ್ರವಾಸಿಗ-ರಿಗೆ ಅನುಕೂಲವಾಗುವಂತೆ ಪ್ರವಾಸಿ ಸರ್ಕಿಟ್ ನಿರ್ಮಿಸಲು ಗೋಕಾಕ ಫಾಲ್ಸ್, ಬೆಳಗಾವಿಯ ರಾಣಿ ಚನ್ನಮ್ಮ ಮೃಗಾಲಯ ಹಾಗೂ ಹಿಡಕಲ್ ಡ್ಯಾಂ ಯೋಜನೆಯೊಂದಿಗೆ ಪ್ರವಾಸಿ ಸರ್ಕಿಟ್ ನಿರ್ಮಿಸುವ ಯೋಜನೆ ಸರಕಾರದ್ದಾಗಿದೆ. ಹಿಡಕಲ್ ಡ್ಯಾಂ ಹಿನ್ನೀರಿನಲ್ಲಿ ಜಲಕ್ರೀಡೆಗಳಿಗೂ ಪ್ರಾಶಸ್ತ್ಯವಾಗಿದ್ದು ಈ ನಿಟ್ಟಿನಲ್ಲಿ ಯೋಜನೆ ರೂಪಿಸಲಾಗುವುದು.

ಪ್ರೇಕ್ಷಕರನ್ನು ಸೆಳೆಯುವ ಉದ್ದೇಶದಿಂದ ಜಿಲ್ಲೆಯ ವಿವಿಧೆಡೆ ಬಹಳಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಗೊಳಗಿದೆ. ಆದ-ಷ್ಟು ಬೇಗ ವಿದ್ಯಾರ್ಥಿಗಳಿಗೆ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ಮಿನಿ ತಾರಾಲಯ ಶೀಘ್ರದಲ್ಲಿ ಲೋಕಾರ್ಪಣೆಗೊಳ್ಳಲಿದೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ತಿಳಿಸಿದರು.

ಹುಕ್ಕೇರಿ ಶಾಸಕ ನಿಖಿಲ್ ಕತ್ತಿ ಅವರು ಮಾತನಾಡಿ, ಬೆಳಗಾವಿ ಜಿಲ್ಲೆಯಲ್ಲಿ ವಿಜ್ಞಾನಕ್ಕೆ ಸಂಬಂಧಿಸಿದ ಮೊದಲ ಯೋಜನೆ ಇದಾಗಿದೆ. ನೀರಾವರಿ ಇಲಾಖೆಯಿಂದ 35 ಎಂ.ಐ ಟ್ಯಾಂಕ್, ಹನಿ ನೀರಾವರಿ, 19 ಕೆರೆಗಳ ತುಂಬುವ ಯೋಜನೆ ಸೇರಿದಂತೆ ಹುಕ್ಕೇರಿ ತಾಲೂಕಿನ ಅಭಿವೃದ್ಧಿಗೆ 30 ಕೋಟಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳು ಚಾಲನೆಯಲ್ಲಿವೆ ಎಂದು ಮಾಹಿತಿ ನೀಡಿದರು.

ಹುಕ್ಕೇರಿ ತಹಶೀಲ್ದಾರ್ ಮಂಜುಳಾ ನಾಯಕ, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಳಗಾವಿ ಉತ್ತರ ವಲಯದ ಮುಖ್ಯ ಇಂಜಿನಿಯರ್ ಬಿ.ಆರ್ ರಾಠೋಡ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ್ ಕಲಾದಗಿ, ನೀರಾವರಿ ಇಲಾಖೆ ಅಧಿಕಾರಿಗಳು ಸೇರಿದಂತೆ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಶಿಕ್ಷಕ ಸಂತೋಷ ಬಂಡೆಗೆ ರಾಜ್ಯ ಪ್ರಶಸ್ತಿ ಪ್ರದಾನ



ಇಂಡಿ: ಬೆಂಗಳೂರಿನ ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ, ಜಿಲ್ಲಾ ಘಟಕದ ವತಿಯಿಂದ ವಿಜಯಪುರದ ಎಕ್ಸ್ ಲಂಟ್ ವಿಜ್ಞಾನ ಪದವಿಪೂರ್ವ ಕಾಲೇಜಿನಲ್ಲಿ ರವಿವಾರದಂದು ಹಮ್ಮಿಕೊಂಡ ಸಾವಿತ್ರಿಬಾಯಿ ಫುಲೆ ಜನ್ಮ ದಿನಾಚರಣೆ ಹಾಗೂ ಜಿಲ್ಲಾ ಶೈಕ್ಷಣಿಕ ಸಮ್ಮೇಳನದಲ್ಲಿ ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯ ಇಂಗ್ಲೀಷ್ ಶಿಕ್ಷಕ ಸಂತೋಷ ಬಂಡೆ ಅವರಿಗೆ 'ಜ್ಯೋತಿಬಾ ಫುಲೆ ರಾಜ್ಯ ಆದರ್ಶ ಶಿಕ್ಷಕ ಪ್ರಶಸ್ತಿ'ಯನ್ನು ಪ್ರದಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಜಿ ಎಸ್ ಕಾಂಬಳೆ,

ಗೌರವಾಧ್ಯಕ್ಷ ಪ್ರಭುಗೌಡ ಪಾಟೀಲ, ಶಿವಾನಂದ ಕಲ್ಯಾಣಿ, ಅನ್ನಪೂರ್ಣ ಬೆಳ್ಳೆನ್ನವರ, ಬಿ ಎಚ್ ನಾಡಗೀರ, ಡಾ ಸಿದ್ದಣ್ಣ ಬಾಡಗಿ, ಕಲ್ಲಪ್ಪ ತೊರವಿ, ಬಸವರಾಜ ಪೂಜಾರ, ಸಂಜಯ ನಡುವಿನಮನಿ, ಡಾ ನಂದಾ ತಿಕೋಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಇಟ್ಟಿಗೆ ಭಟ್ಟಿಯಲ್ಲಿ ಮಾರಣಾಂತಿಕ ಹಲ್ಲೆಗೆ ಸಿಎಂ ಖಂಡನೆ ಐವರ ಬಂಧನ



ವಿಜಯಪುರ: ಹಣ ಪಡೆದು ಕೆಲಸಕ್ಕೆ ಬರಲು ವಿಳಂಬ ಮಾಡಿದ್ದಕ್ಕೆ ಮೂವರು ಕಾರ್ಮಿಕರ ಮೇಲೆ ಮನಸೋಇಚ್ಛೆ ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದವರ ಪೈಕಿ ಇಟ್ಟಿಗೆ ಕಾರ್ಖಾನೆ ಮಾಲೀಕ ಖೇಮು ರಾಠೋಡ್, ವಿಶಾಲ ಜುಮನಾಳ ಹಾಗೂ ಸಚಿವ ಮಾನವರ ಅನ್ನು ಪೊಲೀಸರು ಗಾಂಧಿನಗರದ ಖೇಮು ನಿವಾಸದಲ್ಲಿ ಬಂಧಿಸಿದ್ದಾರೆ. ಪರಾರಿಯಾದ ಇಬ್ಬರಿಗಾಗಿ ಶೋಧ ನಡೆಸಿದ್ದಾರೆ. ವಿಜಯಪುರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಹಲ್ಲೆ ನಡೆಸಿದವರ ವಿರುದ್ಧ ಕಾನೂನು ಪ್ರಕಾರ ಕ್ರಮವೆಂದ ಲಕ್ಷ್ಮಣ ನಿಂಬರಗಿ

ವಿಜಯಪುರ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಮಾಧ್ಯಮದವರೊಂದಿಗೆ ಮಾತನಾಡಿದ್ದು, ಜನವರಿ 18ರಂದು ಮಾಲೀಕ ಖೇಮು ರಾಥೋಡ್, ಸಹಚರರಿಂದ ವಿಜಯಪುರ ಹೊರವಲಯದ ಇಟ್ಟಿಗೆ ಕಾರ್ಖಾನೆಯಲ್ಲಿ ಬಾಗಲಕೋಟೆ ಜಿಲ್ಲೆಯ ಜಮಖಂಡಿ ಚಿಕ್ಕಲಕಿ ಗ್ರಾಮದ ಕಾರ್ಮಿಕರ ಮೇಲೆ ಹಲ್ಲೆ ಮಾಡಲಾಗಿದೆ. ಮುಂಗಡ ಹಣ, ಕೆಲಸ ಮಾಡುವ ವಿಚಾರವಾಗಿ ಹಲ್ಲೆ ನಡೆದಿದೆ ಎಂದರು.

ಸಂಕ್ರಾಂತಿ ಹಬ್ಬಕ್ಕೆ ಹೋಗಿದ್ದವರು ಹಿಂದಿರುಗುವುದು ತಡವಾಗಿದ್ದಕ್ಕೆ ಮೂವರು ಕಾರ್ಮಿಕರ ಪಾದಗಳಿಗೆ ಕಟ್ಟಿಗೆ, ಪೈಪ್‌ಗಳಿಂದ ಹೊಡೆದಿದ್ದಾರೆ. ಕಾರ್ಮಿಕರ ಮೇಲೆ ಹಲ್ಲೆ ವಿಡಿಯೋ ಜಾಲತಾಣದಲ್ಲಿ ವೈರಲ್ ಆಗಿತ್ತು. ಅಮಾನವೀಯ ಹಲ್ಲೆ ಸಂಬಂಧ ಪ್ರಕರಣ ದಾಖಲಿಸಿ ಮೂವರನ್ನು ಬಂಧಿಸಲಾಗಿದೆ. ಪರಾರಿಯಾಗಿರುವ ರೋಹನ್ ಗಾಂಧಿನಗರ, ಕನಕಮೂರ್ತಿ ಗೊಂದಳಿ ಎಂಬ ಆರೋಪಿಗಳನ್ನು ಬಂಧಿಸಲಾಗಿದೆ. ಕಾರ್ಮಿಕರ ಮೇಲೆ ಹಲ್ಲೆ ನಡೆಸಿದವರ ವಿರುದ್ಧ ಕಾನೂನು ಪ್ರಕಾರ ಕ್ರಮಕೈಗೊಳ್ಳಲಾಗುವುದು. ಹಲ್ಲೆಗೊಳಗಾದ ಕಾರ್ಮಿಕರು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ತಿಳಿಸಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

ಯಾರೇ ತಪ್ಪು ಮಾಡಿದರೂ ಅವರನ್ನು ಸುಮ್ಮನೆ ಬಿಡುವುದಿಲ್ಲ: ಸಿಎಂ

ಪ್ರಕರಣ ಬಗ್ಗೆ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ ನೀಡಿದ್ದು, ಹಲ್ಲೆ ಮಾಡಿದವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುತ್ತೇವೆ. ಯಾರೇ ತಪ್ಪು ಮಾಡಿದರೂ ಅವರನ್ನು ಸುಮ್ಮನೆ ಬಿಡುವುದಿಲ್ಲ ಎಂದಿದ್ದಾರೆ.

ಇದು ಎಲ್ಲರೂ ತಲೆತಗ್ಗಿಸುವಂತ ಅಮಾನವೀಯ ಘಟನೆ: ಸಚಿವ ಸಂತೋಷ್ ಲಾಡ್

ರಾಯಚೂರಿನಲ್ಲಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಮಾತನಾಡಿ, ಎಲ್ಲರೂ ತಲೆತಗ್ಗಿಸುವಂತ ಅಮಾನವೀಯ ಘಟನೆ ಇದು. ಲೇಬರ್, ಪೊಲೀಸ್ ಕೇಸ್ ಎಲ್ಲಾ ಸೆಕೆಂಡರಿ. ಈ ತರ ಮನಸ್ಥಿತಿ ಇರುವಂತದ್ದು ನಮ್ಮ ರಾಜ್ಯದಲ್ಲಿ ನಡೆದಿದೆ ಅಂದರೆ ನನಗೆ ವೈಯಕ್ತಿಕವಾಗಿ ತಲೆತಗ್ಗಿಸುವಂತದ್ದು. ಕಾರ್ಮಿಕರನ್ನ ಹಿಗ್ಗಾ ಮುಗ್ಗಾ ಹೊಡೆದಿರುವುದನ್ನ ನಾನು ಮಾಧ್ಯಮಗಳ ಮುಖಾಂತರ ನೋಡಿದ್ದೇನೆ. ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಹೇಳಿದ್ದಾರೆ. ಕಾನೂನಿನ ಕಠಿಣ ಕ್ರಮ ಪರಿಹಾರ ಅಲ್ಲಾ ಮನಸ್ಥಿತಿಗಳು ಬದಲಾಗಬೇಕು. ಬಾಲಕಾರ್ಮಿಕ ಪದ್ಧತಿ ಕೂಡ ಬದಲಾಗಬೇಕು. ಸಾರ್ವಜನಿಕರಲ್ಲಿ ಮನವಿ ಮಾಡಿಕೊಳ್ಳುತ್ತೇನೆ ಈ ರೀತಿಯ ಮನಸ್ಥಿತಿ ಬದಲಾಗಬೇಕು. ಇದಕ್ಕೆ ನನ್ನ ಸಮ್ಮತಿಯಿದೆ. ಕಾರ್ಮಿಕ ಅಂತ ಅಲ್ಲಾ ಯಾರ ಮೇಲೂ ಇಂತಹ ಘಟನೆ ನಡೆಯಬಹುದು. ಕಾರ್ಮಿಕ ಅಂತ ಪದ ತೆಗೆದರು ಈ ರೀತಿ ಹೊಡಿಬಹುದಾ, ಇದು ಮನಸ್ಥಿತಿ. ಇಂತಹ ಮನಸ್ಥಿತಿಯನ್ನ ನಾವು ವಿರೋಧಿಸಬೇಕು ಎಂದಿದ್ದಾರೆ.

# ರಾಷ್ಟ್ರ ಮಟ್ಟದಲ್ಲಿ ಬೆಳಗಾವಿ ವಿದ್ಯಾರ್ಥಿಗಳ ವಿಶಿಷ್ಟ ಸಾಧನೆ



ಬೆಳಗಾವಿ : ಇತ್ತೀಚಿಗೆ ಬೆಂಗಳೂರಿನ ವಾಗ್ದೇವಿ ವಿಲಾಸ ಅಂತರಾಷ್ಟ್ರೀಯ ಶಾಲೆಯಲ್ಲಿ ಜರುಗಿದ ಇಂಡಿಯನ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ಫೇರ್ ನಲ್ಲಿ ಬೆಳಗಾವಿಯ ಮಹಿಳಾ ವಿದ್ಯಾಲಯದ ವಿದ್ಯಾರ್ಥಿಗಳಾದ ಓಂಕಾರ ವಿರಕ್ತಮಠ ಹಾಗೂ ಶುಭಂ ಸಾಳುಂಕೆ ಇವರು ಭಾಗವಹಿಸಿ ರಾಷ್ಟ್ರಮಟ್ಟದಲ್ಲಿ ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಇವರು ಕೃಷಿ ಕ್ಷೇತ್ರದಲ್ಲಿ ರಾಸಾಯನಿಕ ಸಿಂಪಡಣೆಗಾಗಿ ರೋಬೋಟಿಕ್ ಬಳಕೆ ಕುರಿತು ಮಾದರಿ ಹಾಗೂ ಯೋಜನಾ ವರದಿ ಮಂಡಿಸಿದ್ದರು. ಇವರ ಈ ಸಾಧನೆಗೆ ಗದುಗಿನ ಜಗದ್ಗುರು ತೋಂಟದಾರ್ಯ ಮಠದ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ಹಾಗೂ ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಮಹಾ ಸ್ವಾಮಿಗಳು ಸೇರಿದಂತೆ ಶಾಲೆಯ ಪ್ರಾಚಾರ್ಯ ಹಾಗೂ ಶಿಕ್ಷಕರು ಅಭಿನಂದಿಸಿ ಮೆಚ್ಚುಗೆ ವ್ಯಕ್ತಪಡಿಸಿದ್ದಾ

********

# ಇಂದು ಸಾರಿಗೆ ವ್ಯತ್ಯಯ

ಹಾವೇರಿ:ಬೆಳಗಾವಿಯಲ್ಲಿ ನಡೆಯಲಿರುವ ಗಾಂಧೀಜಿ ಶತಮಾನೋತ್ಸವ ಕಾರ್ಯಕ್ರಮಕ್ಕೆ ಜನವರಿ 21 ರಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾವೇರಿ ವಿಭಾಗದಿಂದ 125 ವಾಹನಗಳನ್ನು ಪೂರೈಸಲಾಗುತ್ತಿದ್ದು, ಅಂದು ವಿವಿಧ ಮಾರ್ಗಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗಲಿದ್ದು, ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳು ಸಂಸ್ಥೆಯೊಂದಿಗೆ ಸಹಕರಿಸುವಂತೆ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ಹಾವೇರಿ: ಮಡಿವಾಳ ಮಾಚಿದೇವ ಹಾಗೂ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮ ಪೂರ್ವಸಿದ್ಧತಾ ಸಭೆ ಜನವರಿ 21 ರಂದು ಮಧ್ಯಾಹ್ನ 11-30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಾಯೋಗಿ ವೇಮನ ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಆಚರಣೆ

ಹಾವೇರಿ: ಮಹಾಯೋಗಿ ವೇಮನ ಹಾಗೂ ನಿಜಶರಣ ಅಂಬಿಗೌರ ಚೌಡಯ್ಯ ಜಯಂತಿ ಕಾರ್ಯಕ್ರಮ ಜನವರಿ 21 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಾಯೋಗಿ ವೇಮನ ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಹುದ್ದೆಗಳ ತಾತ್ಕಾಲಿಕ ಪಟ್ಟಿ ಪ್ರಕಟ

ಹಾವೇರಿ: ಭಾರತೀಯ ರೆಡ್ ಕ್ರಾಸ್ ಸಂಸ್ಥೆವತಿಯಿಂದ ಕಾರ್ಯನಿರ್ವಹಿಸುತ್ತಿರುವ ಹಾವೇರಿ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕಚೇರಿ ಸೂಚನಾ ಫಲಕದಲ್ಲಿ ಹಾಗೂ ಹಾವೇರಿ ಜಿಲ್ಲಾ ಜಾಲತಾಣ www.haveri.nic.in ದಲ್ಲಿ ಪ್ರಕಟಿಸಲಾಗಿದೆ.

ಈ ಕುರಿತು ಆಕ್ಷೇಪಣೆಗಳಿದ್ದಲ್ಲಿ ಜನವರಿ 29ರ ಸಂಜೆ 5-30ರೊಳಗಾಗಿ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ, ಹಾವೇರಿ ಈ ವಿಳಾಸಕ್ಕೆ ಸಲ್ಲಿಸಬೇಕು ಎಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಹಾಗೂ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ಗೌರವ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಹಾವೇರಿ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ಸಂಪರ್ಕಿಸಲು ಕೋರಲಾಗಿದೆ.

## ಜ.23 ರಂದು ಶಿಗ್ಗಾಂವಿಯಲ್ಲಿ ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ ಸಭೆ

ಹಾವೇರಿ: ಹಾವೇರಿ ಲೋಕಾಯುಕ್ತ ಅಧಿಕಾರಿಗಳಿಂದ ಜನವರಿ 23 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆವರೆಗೆ ಶಿಗ್ಗಾಂವ ತಹಶೀಲ್ದಾರ ಕಚೇರಿಯಲ್ಲಿ ಸಾರ್ವಜನಿಕ ಕುಂದುಕೊರತೆಗಳ ಸಭೆ ಹಾಗೂ ಸಾರ್ವಜನಿಕರ ಅಹವಾಲು ಸ್ವೀಕಾರ ಜರುಗಲಿದೆ.

ಸರ್ಕಾರಿ ಕಚೇರಿಗಳಲ್ಲಿ ದುರಾಡಳಿತ, ಸಾರ್ವಜನಿಕ ಕೆಲಸ ಕಾರ್ಯಗಳ ವಿಳಂಬ, ಕಳಪೆಕಾಮಗಾರಿ, ಸರ್ಕಾರಿ ನೌಕರರ ಅಕ್ರಮ ಆಸ್ತಿಗಳಿಕೆ, ಸರ್ಕಾರಿ ಹಣ ದುರುಪಯೋಗ, ಸಾರ್ವಜನಿಕ ಕೆಲಸಗಳಿಗೆ ಅಧಿಕಾರಿ, ನೌಕರರಿಂದ ಲಂಚ ಕೇಳುವ ದೂರುಗಳಿದ್ದರೆ ಲೋಕಾಯುಕ್ತ ನಡೆಸುವ ಸಾರ್ವಜನಿಕ ಕುಂದುಕೊರತೆ ಸಭೆಯಲ್ಲಿ ಭಾಗವಹಿಸಿ ದೂರುಗಳನ್ನು ಸಲ್ಲಿಸಬಹುದಾಗಿದೆ.

ಮಾನ್ಯ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿ ಇರುವ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ. ಸಭೆಯ ನಂತರ ವಿವಿಧ ಇಲಾಖೆಯ ಕಚೇರಿಗಳಿಗೆ ಅಧಿಕಾರಿಗಳು ಭೇಟಿ ನೀಡಲಿದ್ದಾರೆ.

ಕರ್ನಾಟಕ ಲೋಕಾಯುಕ್ತ ಡಿಎಸ್‌ಪಿ ಬಿ.ಪಿ.ಚಂದ್ರಶೇಖರ, ಪೊಲೀಸ್ ನಿರೀಕ್ಷಕರಾದ ಮುಸ್ತಾಕ ಅಹ್ಮದ, ಮಂಜುನಾಥ್ ಪಂಡಿತ ಹಾಗೂ ದಾದಾವಲಿ ಕೆ.ಎಚ್. ಅವರು ಅಹವಾಲು ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಲೋಕಾಯುಕ್ತ ಕಚೇರಿ ಪ್ರಕಟಣೆ ತಿಳಿಸಿದೆ.

# ಅಂಬೇಡ್ಕರ ಪ್ರತಿಮೆ ಅನಾವರಣ ಸಮಾವೇಶದ ಪ್ರಚಾರ ಸಾಮಗ್ರಿ ಬಿಡುಗಡೆ



ಹುಕ್ಕೇರಿ : ಪಟ್ಟಣದಲ್ಲಿ ಪ್ರತಿಷ್ಠಾಪಿಸಿದ ಭಾರತದ ಭಾಗ್ಯವಿಧಾತ ಡಾ.ಬಿ.ಆರ್.ಅಂಬೇಡ್ಕರ ಅವರ ಕಂಚಿನ ಪ್ರತಿಮೆ ಅನಾವರಣ ಸಮಾರಂಭದ ಪ್ರಚಾರ ಸಾಮಗ್ರಿಗಳನ್ನು ಸೋಮವಾರ ಬಿಡುಗಡೆಗೊಳಿಸಲಾಯಿತು.

ಇಲ್ಲಿನ ಕೋರ್ಟ್ ಸರ್ಕಲ್ ಬಳಿ ಸ್ಥಾಪಿಸಿರುವ ಅಂಬೇಡ್ಕರ ಪ್ರತಿಮೆ ಸಭಾಂಗಣದಲ್ಲಿ ಇದೇ ತಿಂಗಳು ಜ. 25 ರಂದು ನಡೆಯುವ ಪ್ರತಿಮೆ ಅನಾವರಣ ಸಮಾವೇಶದ ಬ್ಯಾನರ್, ಕರಪತ್ರ, ಬಂಟಿಂಗ್ಸ್ ಸೇರಿದಂತೆ ಪ್ರಚಾರ ಸಾಮಗ್ರಿಗಳನ್ನು ತಾಲೂಕಿನ ವಿವಿಧ ದಲಿತ ಮುಖಂಡರು ಬಿಡುಗಡೆಗೊಳಿಸಿದರು.

ಈ ವೇಳೆ ಮುಖಂಡರಾದ ಸುರೇಶ ತಳವಾರ, ಮಲ್ಲಿಕಾರ್ಜುನ ರಾಶಿಂಗೆ ಮಾತನಾಡಿ, ಅಂಬೇಡ್ಕರ ಪ್ರತಿಮೆ ಅನಾವರಣ ಸಮಾವೇಶವನ್ನು ಅತ್ಯಂತ ಸಡಗರ-ಸಂಭ್ರಮದಿಂದ ಆಯೋಜಿಸುವ ಮೂಲಕ ಹುಕ್ಕೇರಿ ಇತಿಹಾಸದಲ್ಲಿಯೇ ಚಾರಿತ್ರಿಕ ಕಾರ್ಯಕ್ರಮಕ್ಕೆ ಎಲ್ಲ ಸಿದ್ಧತೆಗಳು ಭರದಿಂದ ಸಾಗಿವೆ. ಬೆಳಗ್ಗೆ ಅಡವಿಸಿದ್ದೇಶ್ವರ ಮಠದಿಂದ ಸುಮಾರು 15ಕ್ಕೂ ಹೆಚ್ಚು ವಿವಿಧ ಕಲಾ ತಂಡಗಳ ಭವ್ಯ ಮೆರವಣಿಗೆ, ಮಧ್ಯಾಹ್ನ ಪ್ರತಿಮೆ ಅನಾವರಣ, ಬಳಿಕ ಚಿಕ್ಕೋಡಿ ರಸ್ತೆಗೆ ಹೊಂದಿಕೊಂಡಿರುವ ಕತ್ತಿ ಲೇಔಟ್‌ನಲ್ಲಿ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

ಪುರಸಭೆ ಮಾಜಿ ಅಧ್ಯಕ್ಷ ಉದಯ ಹುಕ್ಕೇರಿ, ಸದಸ್ಯ ದಿಲೀಪ ಹೊಸಮನಿ ಮಾತನಾಡಿ, ಪಟ್ಟಣದ ಪ್ರಮುಖ ಬೀದಿ ಮತ್ತು ವೃತ್ತಗಳಲ್ಲಿ ಅಂಬೇಡ್ಕರ ಜೀವನಾಧಾರಿತ ಗೋಡೆ ಬರಹಗಳನ್ನು ಬರೆಯಿಸುವದು, ಅಲಂಕಾರಿಕ ದೀಪಗಳಿಂದ ಸಿಂಗರಿಸುವುದು ಇಡೀ ಪಟ್ಟಣವನ್ನು ನೀಲಿಮಯಗೊಳಿಸಲಾಗುವುದು. ಖ್ಯಾತ ವಿಚಾರವಾದಿಗಳಿಂದ ವಿಶೇಷ ಉಪನ್ಯಾಸ, ಪ್ರಮುಖ ಮಾರ್ಗಗಳಲ್ಲಿ ಸ್ವಾಗತ ಕೋರುವ ಕಮಾನ್ ಮತ್ತು ಬ್ಯಾನರ್‌ಗಳ ಅಳವಡಿಸಲಾಗುತ್ತಿದೆ ಎಂದರು.

ಮುಖಂಡರಾದ ಉದಯ ಹುಕ್ಕೇರಿ, ಸುರೇಶ ತಳವಾರ, ಮಲ್ಲಿಕಾರ್ಜುನ ರಾಶಿಂಗೆ, ಬಸವರಾಜ ಕೋಳಿ, ದಿಲೀಪ ಹೊಸಮನಿ, ರಮೇಶ ಹುಂಜಿ, ಸದಾಶಿವ ಕಾಂಬಳೆ, ಕೆಂಪಣ್ಣಾ ಶಿರಹಟ್ಟಿ, ರವಿ ಕಾಂಬಳೆ, ಪ್ರಮೋದ ಕೂಗೆ, ಅಪ್ಪಣ್ಣಾ ಖಾತೇದಾರ, ಮಾರುತಿ ತಳವಾರ, ಶ್ರೀನಿವಾಸ ವ್ಯಾಪಾರಿ, ಶಂಕರ ತಿಪ್ಪನಾಯಿಕ, ಶಿವಾನಂದ ಮರಿನಾಯಿಕ, ಲಖನ್ ಶಿಂಧೆ, ನಿಖಿಲ್ ಹಾದಿಮನಿ, ಸಂಜು ಜೀವನ್ನವರ, ಲಗಮಣ್ಣ ಕಣಗಲಿ, ರವಿ ಸನದಿ, ಮುತ್ತು ಕಾಂಬಳೆ, ರೋಹಿತ ತಳವಾರ, ಮಾರುತಿ ಚಿಕ್ಕೋಡಿ, ಗೋಪಾಲ ತಳವಾರ ಮತ್ತಿತರರು ಉಪಸ್ಥಿತರಿದ್ದರು.

*****

## ತಾಲೂಕಾ ಮಟ್ಟದಲ್ಲಿ ಜಾಗೃತಿಗಾಗಿ ಪಥ ಸಂಚಲನ

# ವಿವಿಧ ಸ್ಪರ್ಧೆ ರಾಷ್ಟ್ರೀಯ ಮತದಾರರ ದಿನ ಕಾರ್ಯಕ್ರಮ ಸಿದ್ದತೆಗೆ ಸೂಚನೆ



ಬಾಗಲಕೋಟೆ: ಯುವಜನರಲ್ಲಿ ಮತದಾನದ ಮಹತ್ವ ಸಾರುವ ಉದ್ದೇಶದಿಂದ ಜನವರಿ 24 ರಂದು ರಾಷ್ಟ್ರೀಯ ಮತದಾರರ ದಿನ ಕಾರ್ಯಕ್ರಮಕ್ಕೆ ಅಗತ್ಯ ಸಿದ್ದತೆ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ ಸೂಚಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ನಡೆದ 15ನೇ ರಾಷ್ಟ್ರೀಯ ಮತದಾರರ ದಿನ ಆಚರಿಸುವ ಕುರಿತ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಪ್ರತಿ ವರ್ಷ ಜನೇವರಿ 25 ರಂದು ರಾಷ್ಟ್ರೀಯ ಮತದಾರರ ದಿನವನ್ನಾಗಿ ಆಚರಿಸಲಾಗುತ್ತಿದ್ದು, ಈ ವರ್ಷ ಜನೇವರಿ 25 ರಂದು ಸರ್ಕಾರಿ ರಜೆ ಇರುವ ಹಿನ್ನಲೆಯಲ್ಲಿ ಚುನಾವಣಾ ಆಯೋಗದ ನಿರ್ದೇಶನದಂತೆ ಜನೇವರಿ 24 ರಂದು ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡುವೆ ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುವುದೆಂದು ತಿಳಿಸಿದರು.

ತಾಲೂಕಾ, ಮತಗಟ್ಟೆ ಮಟ್ಟದಲ್ಲಿ ಹಾಗೂ ಕಾಲೇಜುಗಳಲ್ಲಿ ವ್ಯಾಪಕವಾಗಿ, ಪರಿಣಾಮಕಾರಿಯಾಗಿ ಹಬ್ಬದ ವಾತಾವರಣ ಮೂಡುವ ರೀತಿಯಲ್ಲಿ ಕಾರ್ಯಕ್ರಮ ಆಯೋಜನೆಗೆ ಕ್ರಮಕೈಗೊಳ್ಳಬೇಕು. ಅಲ್ಲದೇ ಸ್ವೀಪ್‌ಅಡಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲು ಸೂಚಿಸಿದರು. ನಗರ ಸ್ಥಳೀಯ ಹಾಗೂ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಸ್ವಚ್ಚವಾಹಿನಿಯಲ್ಲಿ ಕಡ್ಡಾಯ ಮತದಾನದ ಮಹತ್ವವನ್ನು ಧ್ವನಿವರ್ಧಕಗಳ ಮೂಲಕ ಸಾರಬೇಕು ಎಂದರು. ಅಲ್ಲದೇ ಎಲ್ಲ ತಾಲೂಕಾ ಕೇಂದ್ರಗಳಲ್ಲಿ ಮತದಾರರ ಮಹತ್ವ ಸಾರಲು ಪಥ ಸಂಚಲನ ನಡೆಸಲು ತಿಳಿಸಿದರು.

ಮತದಾನದ ಮಹತ್ವ ಸಾರಲು ಬ್ಯಾನರ್, ಫ್ಲೆಕ್ಸ್ ಅಳವಡಿಸುವ ಜೊತೆಗೆ ಗೋಡೆ ಬರಹದ ಮೂಲಕ ಮತದಾನದ ಮಹತ್ವವದ ಅರಿವು ಮೂಡಿಸಲು ಸೂಚಿಸಿದರು. ಜನತಂತ್ರ ವ್ಯವಸ್ಥೆ ಬಲಪಡಿಸಲು ಜನರು ಸಕ್ರಿಯವಾಗಿ ಕಾರ್ಯಕ್ರಮದಲ್ಲಿ ತೊಡಗಬೇಕಿದೆ. ಪ್ರತಿ ಅರ್ಹ ಮತದಾರರ ಹೆಸರು ಮತದಾರರ ಪಟ್ಟಿಯಲ್ಲಿ ಇರಬೇಕು ಎಂಬುದು ಚುನಾವಣಾ ಆಯೋಗದ ನಿರ್ದೇಶನವಾಗಿದೆ ಎಂದರು.

ಹೊಸದಾಗಿ ನೊಂದಣಿಯಾದ ಯುವ ಮತದಾರರಿಗೆ ಕಾರ್ಯಕ್ರಮದಂದು ಎಪಿಕ್ ಕಾರ್ಡ ವಿತರಿಸಬೇಕು. ತಾಲೂಕಾ ಮಟ್ಟದಲ್ಲಿ ಪೂರ್ವಭಾವಿ ಸಭೆ ನಡೆಸಿ ರಾಷ್ಟ್ರೀಯ ಮತದಾರರ ದಿನವನ್ನು ಯಶಸ್ವಿಯಾಗಿ ಆಚರಿಸಲು ಅಗತ್ಯ ಇರುವ ಎಲ್ಲ ರೂಪರೇಷೆಗಳನ್ನು ಸಿದ್ದಪಡಿಸಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಜಿಲ್ಲಾ ಮಟ್ಟದಲ್ಲಿ ಕಾರ್ಯಕ್ರಮದ ಪೂರ್ವದಲ್ಲಿ ಪಥ ಸಂಚಲನ ಹಮ್ಮಿಕೊಳ್ಳಲು ತೀರ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಓಟರ್ ಆಪ್ ಬಗ್ಗೆ ಕಾಲೇಜು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಯೋಜನೆನಾಧಿಕಾರಿ ಪುನಿತ್ ಬಿ.ಆರ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ರಾಜಶೇಖರ ಪಟ್ಟಣಶೆಟ್ಟಿ, ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಗಾಳಿ, ಜಿ.ಪಂ ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಪರಿಕ್ಷೆ: ನಿಷೇಧಾಜ್ಞೆ ಜಾರಿ

ಬೆಳಗಾವಿ, : ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಇವರ ವತಿಯಿಂದ ಬೆಳಗಾವಿ ಜಿಲ್ಲೆಯಲ್ಲಿ ಜನವರಿ-2025 ರ ಮಾಹೆಯಲ್ಲಿ ವಾಣಿಜ್ಯ ಪರೀಕ್ಷೆಯು ದಿನಾಂಕ:20.01.2025 ರಿಂದ 27.01.2025 ರವರೆಗೆ ಹಾಗೂ ಜನವರಿ/ಫೆಬ್ರುವರಿ-2025 ರ ಮಾಹೆಯಲ್ಲಿ ಅರೇಬಿಕ್ ಪರೀಕ್ಷೆಯು ದಿನಾಂಕ:27.01.2025 ರಿಂದ 01.02.2025 ರವರೆಗೆ ಜರುಗಲಿದ್ದು ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತ ದೃಷ್ಟಿಯಿಂದ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಮೊಹಮ್ಮದ ರೋಷನ್ ನಿಷೇಧಾಜ್ಞೆ ಜಾರಿಗೊಳಿಸಿ ಆದೇಶ ಹೊರಡಿಸಿರುತ್ತಾರೆ.

ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200ಮೀ. ವ್ಯಾಪ್ತಿಯಲ್ಲಿ ಮುಂಜಾಗ್ರತಾ ಕ್ರಮವಾಗಿ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ.

ಈ ವೇಳೆ ಕಾನೂನು ಭಂಗ ಉಂಟು ಮಾಡುವ ಉದ್ದೇಶದಿಂದ ಐದು ಅಥವಾ ಐದಕ್ಕಿಂತ ಹೆಚ್ಚು ಜನರು ಗುಂಪು ಸೇರಿ ತಿರುಗಾಡಬಾರದು. ಪರೀಕ್ಷೆಯಲ್ಲಿ ಭಾಗವಹಿಸುತ್ತಿರುವ ವಿದ್ಯಾರ್ಥಿಗಳಿಗೆ ನಕಲು ಮಾಡಲು ಸಹಾಯ ಮಾಡುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ಹತ್ತಿರ ಬರಬಾರದು.

ಸಾರ್ವಜನಿಕ ಸಭೆ, ಮೆರವಣಿಗೆ ಮಾಡುವುದನ್ನು (ಶವ ಸಂಸ್ಕಾರ ಮತ್ತು ಮದುವೆ ಮೆರವಣಿಗೆಗಳನ್ನು ಹೊರತುಪಡಿಸಿ) ನಿಷೇಧಿಸಲಾದೆ. ಆಯುಧ, ಮಾರಕಾಸ್ತ್ರ, ಸ್ಫೋಟಕ ವಸ್ತುಗಳನ್ನು ತೆಗೆದುಕೊಂಡು ತಿರುಗಾಡುವುದು, ಯಾವುದೇ ರೀತಿಯ ಫಟಾಕಿ/ಸಿಡಿಮದ್ದು ಸಿಡಿಸುವುದು ಹಾಗೂ ಸರ್ಕಾರಿ ಬಸ್ಸು ಹಾಗೂ ಇತರೆ ವಾಹನಗಳಿಗೆ ಅಡೆತಡೆ ಮಾಡಬಾರದು.

ಸದರೀ ಪರೀಕ್ಷಾ ಕೇಂದ್ರಗಳ 200ಮೀ. ಒಳಗಿನ ಝೆರಾಕ್ಸ್ ಅಂಗಡಿಗಳನ್ನು ಕಡ್ಡಾಯವಾಗಿ ಬಂದ ಇಡತಕ್ಕದ್ದು.

ವಿದ್ಯಾರ್ಥಿಗಳು, ಸಿಬ್ಬಂದಿಗಳು, ಸರ್ಕಾರದಿಂದ ನೇಮಿಸಿದ ಅಧಿಕಾರಿಗಳು ಹಾಗೂ ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಿದ ಆರಕ್ಷಕ ಸಿಬ್ಬಂದಿಗಳನ್ನು ಹೊರತುಪಡಿಸಿ ಉಳಿದವರಿಗೆ ಶಾಲಾ ಆವರಣದಲ್ಲಿ ಪ್ರವೇಶವನ್ನು ನಿರ್ಬಂಧಿಸಿದೆ.

ಒಂದು ವೇಳೆ ಸದರಿ ಆದೇಶ ಉಲ್ಲಂಘಿಸಿದವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಮೊಹಮ್ಮದ ರೋಷನ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ತತ್ವಜ್ಞಾನಿ ಮಹಾಯೋಗಿ ವೇಮನರ 613ನೇ ಜಯಂತಿ

# ಮಹಾಯೋಗಿ ವೇಮನರ ತತ್ವ ಸಿದ್ಧಾಂತಗಳನ್ನು ಎಲ್ಲರು ಅಳವಡಿಸಿಕೊಂಡು ಜಾಗೃತ ಸಮಾಜ ನಿರ್ಮಿಸೋಣ :ಎಚ್ ಕೆ ಪಾಟೀಲ

ಗದಗ: ಮಹಾಯೋಗಿ ವೇಮನ ಮತ್ತು ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರುಗಳ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಜಾಗೃತ ಸಮಾಜ ನಿರ್ಮಾಣವಾಗಬೇಕು ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಅವರು ಹೇಳಿದರು.

ನಗರದ ಶಿವಾನಂದ ಕಲ್ಯಾಣ ಮಂಟಪದಲ್ಲಿ ರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಗದಗ ಜಿಲ್ಲಾ ರೆಡ್ಡಿ ಸಮಾಜ ಸಂಘ ಇವರುಗಳ ಸಹಯೋಗದಲ್ಲಿ ಜರುಗಿದ ಮಹಾಯೋಗಿ ವೇಮನರ 613ನೇ ಜಯಂತಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೇಮನರ ಜಯಂತಿಯನ್ನು ಕರ್ನಾಟಕ ತುಂಬೆಲ್ಲಾ ಆಚರಣೆ ಮಾಡಬೇಕು ಎಂದು ವಿಶೇಷ ಪ್ರೇರಣೆ ನೀಡಿದವರಲ್ಲಿ ಗದಗ ಜಿಲ್ಲೆಯವರ ಪಾತ್ರ ಅಪಾರವಿದೆ, ವೇಮನ ಸಾಹಿತ್ಯ ಹಾಗು ಅವರ ಇತಿಹಾಸ ದಕ್ಷಿಣ ಕರ್ನಾಟಕದ ಭಾಗದವರಿಗೆ ಪರಿಚಯವೇ ಇಲ್ಲದಂತ ಸಂದರ್ಭದಲ್ಲಿ ಸಹಕಾರಿ ಭೀಷ್ಮ ಕೆ.ಎಚ್.ಪಾಟೀಲ ಹಾಗು ಹಲವಾರು ಅನೇಕ ಹಿರಿಯರು ಇತಿಹಾಸವನ್ನು ಹೆಕ್ಕಿ ತೆಗೆದು ವೇಮನ ಅವರ ಇತಿಹಾಸ ಸಾಹಿತ್ಯವನ್ನು ಪರಿಚಯಿಸಿ ಜನೇವರಿ 19 ನ್ನು ವೇಮನ ಜಯಂತಿ ಆಚರಣೆ ಮಾಡಿ ಕರ್ನಾಟಕ ತುಂಬಾ ಅವರ ಸಿದ್ಧಾಂತವನ್ನು ತಲುಪಿಸೇಕು ಎಂದು ನಿರ್ಣಯ ಮಾಡಿದರು.

ಬೆಂಗಳೂರಿನಲ್ಲಿ ಅರಮನೆ ಮೈದಾನದಲ್ಲಿ ರೆಡ್ಡಿ ಭಾಂದವರು ವಿಶೇಷವಾಗಿ ಗದಗ, ಕೊಪ್ಪಳ, ಬಾಗಲಕೋಟಿ ಜಿಲ್ಲೆ ಸೇರಿದಂತೆ ಅನೇಕ ಜನರು ಪಾಲ್ಗೊಂಡು ವೇಮನ ಹಾಗು ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿ ಒಳಗೊಂಡಂತೆ ಇತರೆ ಬೇಡಿಕೆಗಳನ್ನು ಇಟ್ಟಾಗ ಮುಖ್ಯ ಮಂತ್ರಿ ಸಿದ್ಧರಾಮಯ್ಯ ಅವರು ಅವುಗಳನ್ನು ಕೆಲವೇ ತಿಂಗಳುಗಳಲ್ಲಿ ಅನುಷ್ಠಾನ ಮಾಡಿದರು ಎಂದರು.

ರೆಡ್ಡಿ ಸಮಾಜದವರು ಎಲ್ಲಾ ಪಕ್ಷಗಳಲ್ಲಿದ್ದು ಜಾತಿ ಆಧಾರದ ಮೇಲೆ ರಾಜಕೀಯ ಮಾಡದೇ ಯೋಗ್ಯತೆ ಸೇವೆ ಸಾಮರ್ಥ್ಯ ತಕ್ಕಂತೆ ಗೌರವವನ್ನು ಪಡೆದು ಎಲ್ಲಾ ಸಮಾಜದವರನ್ನು ಅಪ್ಪುಕೊಳ್ಳುವ ಮನಸ್ಥಿತಿ ಹೊಂದಿ ,ಶೋಷಣೆ ವಿರುದ್ದ ನ್ಯಾಯಕ್ಕಾಗಿ ಹೋರಾಟ ಮಾಡುವ ಮನಸ್ಸನ್ನು ಹೊಂದಿದವರಾಗಿದ್ದಾರೆ ಎಂದು ಹೇಳಿದರು



ವೇಮನರು ಕೃಷಿಕರ ಮತ್ತು ಗೇಣುದಾರರ ಪರವಾಗಿ ಹೋರಾಟ ಮಾಡಿದ್ದಾರೆ ಇಂದು ಸಂವಿಧಾನದಲ್ಲಿರುವ ಸಮಾನತೆಗಳಂತ ಮೌಲ್ಯಗಳನ್ನು ಅಂದೇ ಅಳವಡಿಸಿ ಸಮಾಜದಲ್ಲಿ ಒಗ್ಗಟ್ಟನ್ನು ತಂದಿದ್ದಾರೇ ಎಂದು ಹೇಳಿದರು

ಮಹಾಯೋಗಿ ವೇಮನ ಅವರ ಜಯಂತಿಯನ್ನು ಎಲ್ಲರು ಸಂಘಟಿತರಾಗಿ ಸುಂದರವಾಗಿ ವಿಶೇಷವಾಗಿ ಆಯೋಜಿಸಲಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಸಂತಸ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಶಾಸಕ ಎಸ್. ವಿ. ಸಂಕನೂರ ಮಾತನಾಡಿ, ಸಮಾಜ ಮನುಕುಲದ ಉದ್ದಾರಕ್ಕಾಗಿ ಜೀವನವನ್ನು ತ್ಯಾಗ ಮಾಡಿದ್ದಕ್ಕಾಗಿ ಮಹಾಯೋಗಿ ವೇಮನರ ಜಯಂತಿಯನ್ನು ಆಚರಣೆ ಮಾಡಲಾಗುತ್ತಿದೆ. ವೇಮನರು 15 ನೇ ಶತಮಾನದಲ್ಲಿ ಕವಿತೆಗಳನ್ನು ರಚಿಸಿದರು. ಅವುಗಳಲ್ಲಿ ಅಪಾರ ಪ್ರಮಾಣದಲ್ಲಿ ನಶಿಸಿ ಹೋಗಿವೆ. ಒಬ್ಬ ಬ್ರಿಟೀಷ್ ಅಧಿಕಾರಿ ತಾಳೆಗರಿಯಲ್ಲಿ ಬರೆದ ಕವಿತೆಗಳನ್ನು ಪುಸ್ತಕ ರೂಪದಲ್ಲಿ ಪ್ರಕಟಿಸಿದರು ಎಂದರು.

ವೇಮನರು ದುಷ್ಟಟಕ್ಕೆದಾಸರಾಗಿರುತ್ತಾರೆ, ಅವರನ್ನು ಸರಿದಾರಿಗೆ ತಂದವರು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರು. ಅವರಿಂದ ವೇಮನರು ಪರಿವರ್ತನೆ ಹೊಂದಿ, ಸಮಾಜ ಸುದಾರಣೆಯಲ್ಲಿ ತಮ್ಮನ್ನು ತೊಡಗಿಸಿಕೊಂಡು ಅಗಾಧ ಸಾಧನೆ ಮಾಡಿದ್ದಾರೆ ಎಂದು ಮಹಾಯೋಗಿ ವೇಮನರು ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜೀವನ ಸಾಧನೆಗಳನ್ನು ಕೊಂಡಾಡಿದರು.

ರೆಡ್ಡಿ ಸಮಾಜದ ಅಭಿವೃದ್ಧಿಗಾಗಿ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಅನುದಾನ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಶೇಖಣ್ಣ ಅವರು ಪ್ರಾಸ್ತವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಯಲ್ಲಿ ಉತ್ತಮ ಅಂಕಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನಿಯರಿಗೆ ಸತ್ಕರಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ ಎಸ್ ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಮಾಜಿ ಸಚಿವ ಬಿ ಆರ್ ಯಾವಗಲ, ಕೆ ವಿ ಹಂಚಿನಾಳ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ ಎಸ್ ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಎಸಿ ಗಂಗಪ್ಪ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಶಿವನಗೌಡರ ಸ್ವಾಗತಿಸಿದರು, ಬಾಹುಬಲಿ ಜೈನ್ ನಿರೂಪಿಸಿದರು.

# ಗಾಂಧೀಜಿ ತತ್ವ- ಸಿದ್ಧಾಂತಗಳೇ ಕಾಂಗ್ರೆಸ್ ಆಶಯ

ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕಿ 78 ವರ್ಷ, ಸ್ವಾತಂತ್ರ್ಯ ಹೋರಾಟದ ರೂವಾರಿ ಮಹಾತ್ಮಾ ಗಾಂಧೀಜಿ ಅಧ್ಯಕ್ಷತೆಯಲ್ಲಿ ನಡೆದ ಏಕೈಕ ಕಾಂಗ್ರೆಸ್ ಅಧಿವೇಶನಕ್ಕೆ 100 ವರ್ಷಗಳಾಗಿವೆ. ಪುಣ್ಯದ ನೆಲ ಬೆಳಗಾವಿಯಲ್ಲಿ ನಡೆದ ಈ ಐತಿಹಾಸಿಕ ಅಧಿವೇಶನದ ಶತಮಾನೋತ್ಸವವನ್ನು ರಾಷ್ಟ್ರೀಯ ಕಾಂಗ್ರೆಸ್ ಪಕ್ಷ ಮತ್ತು ರಾಜ್ಯದ ಕಾಂಗ್ರೆಸ್ ಸರಕಾರ ಅತ್ಯಂತ ಶ್ರದ್ಧೆಯಿಂದ ಆಚರಿಸುತ್ತಿದೆ.

ಈಗಾಗಲೆ ಎಐಸಿಸಿ ಅಧಿವೇಶನ ನಡೆಸಲಾಗಿದೆ. ಕಾಂಗ್ರೆಸ್ ಬಾವಿ ಬಳಿ ಮಹಾತ್ಮಾ ಗಾಂಧೀಜಿಯವರ ಪುತ್ಥಳಿ ಸ್ಥಾಪಿಸಲಾಗಿದೆ. ಸುವರ್ಣ ವಿಧಾನಸೌಧದ ಎದುರು ಮಂಗಳವಾರ ಮಹಾತ್ಮಾ ಗಾಂಧೀ-ಜಿಯವರ ಪುತ್ಥಳಿ ಅನಾವರಣಗೊಳ್ಳಲಿದೆ. ಜೊತೆಗೆ ಬೃಹತ್ ಸಮಾವೇಶವೂ ಆಯೋಜನೆಯಾಗಿದೆ. ಇದು ಮತ್ತೊಂದು ಐತಿಹಾಸಿಕ ಘಟನೆಯಾಗಬೇಕೆನ್ನುವ ಉದ್ದೇಶವನ್ನಿಟ್ಟುಕೊಂಡು ಅರ್ಥಪೂರ್ಣವಾಗಿ ಇಡೀ ಕಾರ್ಯಕ್ರಮ ನಡೆಸಲಾಗುತ್ತಿದೆ.

ಕಾಂಗ್ರೆಸ್ ಪಕ್ಷ ಹಿಂದೆ, ಇಂದು ಹಾಗೂ ಮುಂದೆ ಕೂಡ ಗಾಂಧೀಜಿಯವರ ತತ್ವ, ಸಿದ್ಧಾಂತ, ಆಶಯಗಳ ತಳಹದಿಯ ಮೇಲೆಯೇ ನಡೆಯುತ್ತಿರುವ, ನಡೆಯುವ ಪಕ್ಷ. ಸತ್ಯ, ಅಹಿಂಸೆ, ಸ್ವಾವಲಂಬನೆ, ಸರಳ ಬದುಕು ಮತ್ತು ಧಾರ್ಮಿಕ ಸಾಮರಸ್ಯ ಸೇರಿದಂತೆ ಗಾಂಧೀ-ಜಿಯವರ ಆಶಯಗಳನ್ನು ಚಾಚೂ ತಪ್ಪದೆ ಅನುಸರಿಸುತ್ತಿರುವ ಪಕ್ಷ ಕಾಂಗ್ರೆಸ್. ಗಾಂಧೀಜಿ, ಡಾ.ಬಾಬಾಸಾಹೇಬ ಅಂಬೇಡ್ಕರ್ ಸೇರಿದಂತೆ ಮಹಾನ್ ನಾಯಕರು ಕಂಡ ಕನಸುಗಳನ್ನು ಅನುಷ್ಠಾನಗೊಳಿಸುವ ಕೆಲಸವನ್ನು ಅತ್ಯಂತ ಶ್ರದ್ಧೆಯಿಂದ ಕಾಂಗ್ರೆಸ್ ಸರಕಾರ ಮಾಡಿಕೊಂಡು ಬರುತ್ತಿದೆ.

ತತ್ವರಹಿತ ರಾಜಕಾರಣ, ದುಡಿಮೆಯಿಲ್ಲದ ಸಂಪತ್ತು, ಆತ್ಮಸಾಕ್ಷಿ ಇಲ್ಲದ ಸಂತೋಷ, ಚಾ-ರಿತ್ರ್ಯವಿಲ್ಲದ ಶಿಕ್ಷಣ, ನೀತಿ ಇಲ್ಲದ ವ್ಯಾಪಾರ, ಮಾನವೀಯತೆ ಇಲ್ಲದ ಜ್ಞಾನ ಮತ್ತು ತ್ಯಾಗವಿಲ್ಲದ ಪೂಜೆ ಇವುಗಳಿಂದ ದೂರವಿರಬೇಕೆನ್ನುವುದು ಗಾಂಧೀಜಿಯವರ ಸಂದೇಶವಾಗಿದೆ. ಅಸ್ಪೃಶ್ಯತೆ, ಬಾಲ್ಯ ವಿವಾಹ ಮೊದಲಾದ ಅನಿಷ್ಠ ಪದ್ಧತಿಗಳನ್ನು ಹೋಗಲಾಡಿಸಬೇಕೆನ್ನುವುದು ಅವರ ಆಶಯವಾಗಿತ್ತು. ಈ ಎಲ್ಲ ಮಾರ್ಗದಲ್ಲಿ ಕಾಂಗ್ರೆಸ್ ನಿರಂತರವಾಗಿ ಕೆಲಸ ಮಾಡುತ್ತ ಬಂದಿದೆ.

ಬೆಳಗಾವಿಯಲ್ಲಿ 1924ರಲ್ಲಿ ಮಹಾತ್ಮಾ ಗಾಂಧೀ-ಜಿಯವರ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಸ್ಥಳದಲ್ಲಿರುವ ಬಾವಿಯ ನೀರನ್ನು ತಂದು ಸಾಂಕೇತಿಕವಾಗಿ ಸ್ವಚ್ಛಗೊಳಿಸುವ ಮೂಲಕ ಕಾಂಗ್ರೆಸ್ ಪಕ್ಷ 2023ರಲ್ಲಿ ನಡೆದ ಕರ್ನಾಟಕ ವಿಧಾನಸಭೆ ಚುನಾವಣೆ ಪ್ರಚಾರ ಕಾರ್ಯವನ್ನು ಅಧಿಕೃತವಾಗಿ ಆರಂಭಿಸಿತು. ಅಲ್ಲಿ ಆರಂಭಿಸಿದ ಪ್ರಜಾಧ್ವನಿ ಯಾತ್ರೆಯ ಮೂಲಕ ಇಡೀ ರಾಜ್ಯದಲ್ಲಿ ಸಂಚರಿಸಿ ಜನ ಬೆಂಬಲ ಕೇಳಿತು. ಜನರು ಅಭೂತಪೂರ್ವವಾಗಿ ಬೆಂಬಲಿಸಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದರು. ಜನರ ಆಶಯದಂತೆ ಪಕ್ಷ, ಸರಕಾರ ಮುನ್ನಡೆಯುತ್ತಿದೆ.

ಗಾಂಧೀಜಿಯವರ ತತ್ವಗಳು ಸಾರ್ವಕಾಲಿಕವಾದವು. ಅವುಗಳನ್ನು ಆಳುವವರು ಮತ್ತು ಪ್ರಜೆಗಳು ಅಳವಡಿಸಿಕೊಂಡಾಗ, ಜಾರಿಗೊಳಿಸಿದಾಗ ಗಾಂಧೀಜಿ ಕಂಡ ರಾಮರಾಜ್ಯದ ಕನಸು ನನಸಾಗಲಿದೆ. ಅಂತಹ ಕೆಲಸವನ್ನು ಕಾಂಗ್ರೆಸ್ ಸರಕಾರ ಮಾಡಿಕೊಂಡು ಬರುತ್ತಿದೆ. ಗಾಂಧೀಜಿಯವರ ತತ್ವದ ಮೇಲೆಯೇ ಆಡಳಿತ ನಡೆಸುತ್ತಿದೆ. ಜಾತೀಯತೆಯನ್ನು ಹೋಗಲಾಡಿಸಲು, ಶ್ರೀಮಂತರು ಮತ್ತು ಬಡವರ ಮಧ್ಯೆ ಇರುವ ಅಂತರವನ್ನು ಕಡಿಮೆ ಮಾಡಲು, ಮಹಿಳೆಯರು ನಿರ್ಭಯದಿಂದ ಓಡಾಡುವಂತಹ ವಾತಾವರಣ ನಿರ್ಮಾಣ ಮಾಡಲು ಕಾಂಗ್ರೆಸ್ ಪಕ್ಷ ಬದ್ಧವಾಗಿದೆ.

ಎಐಸಿಸಿ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆ, ರಾಷ್ಟ್ರೀಯ ನಾಯಕರಾದ ಸೋನಿಯಾ ಗಾಂಧಿ, ರಾಹುಲ ಗಾಂಧಿ, ಪ್ರಿಯಾಂಕಾ ಗಾಂಧಿ ಸೇ-ರಿದಂತೆ ಎಲ್ಲ ಮುಖಂಡರ ಮಾರ್ಗದರ್ಶನದಲ್ಲಿ, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರ ನೇತೃತ್ವದಲ್ಲಿನ ನಮ್ಮ ಸರಕಾರಗಾಂಧಿ ಮಾರ್ಗದಲ್ಲಿ ಅಪಾರ ನಂಬಿಕೆ ಇಟ್ಟುಕೊಂಡು ಬಂದಿದೆ. ನಮ್ಮ ವಿವಿಧ ಗ್ಯಾರಂಟಿ ಯೋಜನೆಗಳ ಮೂಲಕ ಬಡವರು ಮತ್ತು ಶ್ರೀಮಂತರ ಮಧ್ಯೆ ಇರುವ ಅಂತರವನ್ನು ಕಡಿಮೆ ಮಾಡಲು ಪ್ರಯತ್ನಿಸಲಾಗುತ್ತಿದೆ. ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬುವ ಮೂಲಕ ಅವರ ಸಬಲೀಕರಣಕ್ಕೆ ಒತ್ತು ನೀಡಲಾಗುತ್ತಿದೆ.

ಇದರಿಂದಾಗಿ ಇಡೀ ರಾಜ್ಯದಲ್ಲಿ ಸಾಕಷ್ಟು ಬದಲಾವಣೆಯನ್ನು ಕಾಣುತ್ತಿದ್ದೇವೆ. ರಾಷ್ಟ್ರದ ಬೇರೆ ಬೇರೆ ರಾಜ್ಯಗಳಿಗೆ ಕೂಡ ನಮ್ಮ ಗ್ಯಾರಂಟಿ ಯೋಜನೆಗಳು ಮಾದರಿಯಾಗಿವೆ.

ಗಾಂಧೀಜಿಯವರ ತತ್ವ, ಸಂದೇಶಗಳು ಮುಂದಿನ ಪೀಳಿಗೆಗೆ ಮುಂದುವರಿಯಬೇಕೆನ್ನುವ ಸದುದ್ದೇಶದಿಂದ ಸುವರ್ಣ ವಿಧಾನಸೌಧದ ಎದುರು ಗಾಂಧಿ ಪ್ರತಿಮೆ ಸ್ಥಾಪಿಸಲಾಗಿದೆ. ವೀರಸೌಧದ ಆವರಣದಲ್ಲೂ ಈಗಾಗಲೆ ಪುತ್ಥಳಿ ಸ್ಥಾಪನೆಯಾಗಿದೆ. ಇಡೀ ರಾಷ್ಟ್ರದಲ್ಲಿ ಗಾಂಧೀ ತತ್ವ ಪ್ರಸಾರದ ಉದ್ದೇಶ ಇಟ್ಟುಕೊಂಡು ಎಐಸಿಸಿ ಅಧಿವೇಶನದ ಸ್ಮರಣಾರ್ಥ ಇಡೀ ವರ್ಷ ಗಾಂಧಿ ಭಾರತ ಕಾರ್ಯಕ್ರಮ ನಡೆಸಲು ತೀರ್ಮಾನಿಸಿ ಕಾರ್ಯೋನ್ಮುಖರಾಗಿದ್ದೇವೆ.

ಯುವ ಪೀಳಿಗೆಗೆ ಗಾಂಧಿ ಸಂದೇಶ ತಲುಪಿಸದಿದ್ದರೆ, ಹಸ್ತಾಂತರಿಸದಿದ್ದರೆ ಅದೊಂದು ದೊಡ್ಡ ಅಚಾತುರ್ಯವಾಗಲಿದೆ. ಹಾಗಾಗಿ ಆ ದಿಸೆಯಲ್ಲಿ ನಮ್ಮ ಪಕ್ಷ ಮತ್ತು ಸರಕಾರ ಮುಂದಡಿ ಇಟ್ಟಿದೆ. ಇದಕ್ಕೆ ಎಲ್ಲರ ಸಹಕಾರ, ಮಾರ್ಗದರ್ಶನವನ್ನು ಎದುರು ನೋಡುತ್ತಿದ್ದೇವೆ.

ನಮ್ಮ ಬೆಳಗಾವಿಯಲ್ಲಿ ಇಂತದ್ದೊಂದು ಕಾರ್ಯಕ್ರಮ ನಡೆಯುತ್ತಿರುವುದು, ನಾವು ಇದಕ್ಕೆಲ್ಲ ಸಾಕ್ಷಿಯಾಗುತ್ತಿರುವುದು ಬಹಳ ಹೆಮ್ಮೆಯ ಸಂಗತಿಯಾಗಿದೆ. ನಮ್ಮ ನಮ್ಮ ಜೀವನದಲ್ಲಿ ಗಾಂಧೀಜಿಯವರ ತತ್ವ, ಸಂದೇಶಗಳನ್ನು ಅಳವಡಿಸಿಕೊಳ್ಳುವ ಪ್ರತಿಜ್ಞೆ ಮಾಡೋಣ.



**ಲಕ್ಷ್ಮೀ ಹೆಬ್ಬಾಳಕರ್**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು

### ಪೊಲೀಸ್ ಠಾಣೆಯಲ್ಲಿ ಬ್ಯಾಂಕ್ ಅಧಿಕಾರಿಗಳ ಜತೆ ಸಭೆ

# ಸಂಶಾಸ್ಪದ ವ್ಯಕ್ತಿಗಳ ಮೇಲೆ ನಿಗಾ ಇಡಿ-ಸಿಪಿಐ

ತೇರದಾಳ-ಬ್ಯಾಂಕಿನಲ್ಲಿ ವ್ಯವಹಾರ ಇರದಿದ್ದರು ಕೆಲವರು ಬ್ಯಾಂಕಗಳ ಸುತ್ತಮುತ್ತ ಅಲೆದಾಡುವುದು ಬ್ಯಾಂಕಿಗೆ ಬರುವವರನ್ನು ಹೋಗುವವರನ್ನು ನೋಡುವ ಮೂಲಕ ಸಂಶಾಸ್ಪದವಾಗಿ ಅಲೆದಾಡುತ್ತಾರೆ. ಅಂತಹ ವ್ಯಕ್ತಿಗಳ ಮೇಲೆ ನಿಗಾ ವಹಿಸಿ. ಕಡ್ಡಾಯವಾಗಿ ಸಿಸಿಟಿವಿ ಸೆಕ್ಯೂರಿಟಿ ಗಾರ್ಡ್‌ಗಳನ್ನು ನೇಮಿಸಿಕೊಳ್ಳಿ ಎಂದು ಬನಹಟ್ಟಿ ಸಿಪಿಐ ಸಂಜೀವ ಬಳಗಾರ ಬ್ಯಾಂಕ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೀದರ, ಮಂಗಳೂರ ಹಾಗೂ ವಿಜಯಪುರಗಳಲ್ಲಿ ಬ್ಯಾಂಕಗಳಲ್ಲಿನ ಹಣ ದರೋಡೆ ನಡೆದ ಹಿನ್ನಲೆಯಲ್ಲಿ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಶನಿವಾರ ಬ್ಯಾಂಕ್ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದರು.

ಬ್ಯಾಂಕಿನಲ್ಲಿ ಹೆಚ್ಚಿಗೆ ಹಣ ಇಟ್ಟುಕೊಳ್ಳದೆ



ನಿಮ್ಮ ನಿಯಮಾನುಸಾರ ಹಣ ಇಟ್ಟುಕೊಳ್ಳಿ. ಸಹಕಾರಿ, ಸೌಹಾರ್ದ ಹಾಗೂ ಸಂಘ ಸಂಸ್ಥೆಗಳಲ್ಲಿ ಸೆಕ್ಯೂರಿಟಿ ಗಾರ್ಡ್ ನೇಮಿಸಿಕೊಳ್ಳಲು ಅವಕಾಶ ಇಲ್ಲದಿದ್ದರೆ ಸಿಪಾಯಿಗೆ ತರಬೇತಿ ನೀಡಿ. ಹಾಗೂ ಖಾರದ ಪುಡಿ ಹಾಗೂ ಪಪ್ಪರ ಸ್ಪ್ರೆ ಇಟ್ಟುಕೊಂಡರೆ ಒಳ್ಳೆಯದು. ಸಿಸಿಟಿವಿಗಳು ಹೆಸರಿಗಷ್ಟೇ ಅಳವಡಿಸಬೇಡಿ. ಗುಣಮಟ್ಟದ ಹಾಗೂ ಬ್ಯಾಂಕಿಗೆ ಬರುವ ದಾರಿ ಕಾಣುವ ಹಾಗೆ ಅಳವಡಿಸಿ. ಡಿವಿಆರ್ ಡಕಾಯಿತರ ಕೈಗೆ ಸಿಗದ ಹಾಗೆ ಇಡಿ. ಸೆನ್ಸರ್ ಅಳವಡಿಸುವ ಕ್ರಮ ಕೈಗೊಳ್ಳಿ ಎಂದು ಹೇಳಿದ ಸಿಪಿಐ, ತಾವು ಕೂಡ ಪ್ರತಿಯೊಂದು ಬ್ಯಾಂಕಿಗೆ ಬೇಟಿ ನೀಡಿ ಕೈಗೊಂಡಿರುವ ಕ್ರಮಗಳ ಕು-ರಿತು ಪರಿಶೀಲನೆ ನಡೆಸತ್ತೇವೆ. ಬ್ಯಾಂಕಿನಲ್ಲಿ ಪೊಲೀಸ್ ಸಹಾಯವಾಣಿ ಸಂಖ್ಯೆ 112 ಫಲಕ ಅಳವಡಿಸಿ ಎಂದು ಸಲಹೆ ನೀಡಿದರು. ಪಿಎಸ್‌ಐ ಅಪ್ಪಣ್ಣ ಐಗಳಿ ಎಟಿಂಗಳ ಕು-ರಿತು ಹಾಗೂ ಬ್ಯಾಂಕಿಗೆ ಬರುವ ಗ್ರಾಹಕರ ಕುರಿತು ಹಲವು ಸಲಹೆಗಳನ್ನು ನೀಡಿದರು. ಎಸ್‌ಬಿಐ, ಐಸಿಐಸಿಐ, ಪ್ರಭುಲಿಂಗೇಶ್ವರ ಸೇರಿದಂತೆ ವಿವಿಧ ಬ್ಯಾಂಕಿನ ಅಧಿಕಾ-ರಿಗಳು ಸಲಹೆಗಳನ್ನು ಹಾಗೂ ಮಾಹಿತಿಗಳನ್ನು ಪಡೆದುಕೊಂಡರು. ವಿವೇಕ ಸುವರ್ಣಖಂಡಿ, ಸಾಗರ ಇದ್ದರು.

# ದೇಶಕ್ಕಾಗಿ ತ್ಯಾಗ ಮತ್ತು ಸೇವೆಯ ಅವಶ್ಯಕತೆ ಇದೆ




ಮುದ್ದೇಬಿಹಾಳ. ದೇಶದ ಅಭಿವೃದ್ಧಿಯಲ್ಲಿ ವಿವೇಕಾನಂದರ ದೇಶಕ್ಕಾಗಿ ತ್ಯಾಗ ಮತ್ತು ಸೇವೆಯ ಪ್ರತಿಪಾದನೆ ಮಹತ್ವದ ಪಾತ್ರವನ್ನು ವಹಿಸುತ್ತಿದ್ದು ಯುವಕರು ಇವುಗಳನ್ನು ಸರಿಯಾಗಿ ಅರಿತು, ಅಳವಡಿಸಿಕೊಂಡರೆ ದೇಶ ಅಭಿವೃದ್ಧಿಯಾಗಲು ಸಾಧ್ಯವೆಂದು ರೈತ ಮುಖಂಡ ಅರವಿಂದ ಕೊಪ್ಪ ಹೇಳಿದರು. ಪಟ್ಟಣದ ನಾಲತವಾಡ ರಸ್ತೆಯಲ್ಲಿರುವ ಬಿಬಿಆರ್ ಹಾರ್ವರ್ಡ್ ಪಿಯು ವಿಜ್ಞಾನ ಕಾಲೇಜಿನಲ್ಲಿ ಹಮ್ಮಿಕೊಂಡ ಸ್ವಾಮಿ ವಿವೇಕಾನಂದರ 162ನೇ ಜಯಂತೋತ್ಸವದಲ್ಲಿ ಭಾಗವಹಿಸಿ ಮಾತನಾಡಿದರು. ಸ್ವಾಮಿ ವಿವೇಕಾನಂದರ ಆಶಯದಂತೆ ಸ್ವಾತಂತ್ರ ನಂತರದಲ್ಲಿ ನಮ್ಮ ಶಿಕ್ಷಣ ತಜ್ಞರು ಈ ತತ್ವಗಳನ್ನು ದೇಶದ ಶಿಕ್ಷಣ ವ್ಯವಸ್ಥೆಯಲ್ಲಿ ಸೇರಿಸಿ, ಯುವಕರಿಗೆ ಶಿಕ್ಷಣವನ್ನು ನೀಡಿದ್ದರೆ ಇಂದು ನಮ್ಮ ನೂರಾರು ಕೋಟಿಗಳ ಸಾಲವನ್ನು ದೇಶ ಹೊತ್ತುಕೊಳ್ಳುವ ಪರಿಸ್ಥಿತಿ ಬರುತ್ತಿರಲಿಲ್ಲವೆಂದು ಅವರು ಹೇಳಿದರು. ಮುಖ್ಯ ಅತಿಥಿ ಸರ್ಕಾರಿ ಪದವಿ ಕಾಲೇಜಿನ ಅರ್ಥಶಾಸ್ತ್ರ ಪ್ರಾಧ್ಯಾಪಕರಾದ ರವೀಂದ್ರ ನಂದೆಪ್ಪನವರ ಮಾತನಾಡಿ, ಸ್ವಾಮಿ ವಿವೇಕಾನಂದರು ಭಾರತೀಯರೆಲ್ಲರೂ ಒಂದೇ, ಯಾರೂ ಜಾತಿ, ಧರ್ಮಗಳ ಬಗ್ಗೆ ಅತಿಯಾಗಿ ತಲೆ ಕೆಡಿಸಿಕೊಳ್ಳಬಾರದು. ಹಲವು ಬಗೆಯ ಧಾರ್ಮಿಕ ಆಚಾರ, ವಿಚಾರ ಹೊಂದಿದ್ದರೂ ಭಾರತೀಯರಾದ ನಾವು ಎಲ್ಲರೂ ಒಂದೇ ಎನ್ನುವ ಮೂಲಕ ಏಕತ್ವವಾದವನ್ನು ಪ್ರತಿಪಾದಿಸಿದರೆಂದು ಹೇಳಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಎಸ್.ಎಂ.ನೆರಬೆಂಚಿ ಮಾತನಾಡುತ್ತ ಸ್ವಾಮಿ ವಿವೇಕಾನಂದರು ಯುವಕರಿಗಾಗಿ ಸಮಯದ ಸದ್ಬಳಿಕೆ ಹಾಗೂ ಧನಾತ್ಮಕ ಚಿಂತನೆ ಕು-ರಿತು ಹೇಳಿದ್ದು ವಿದ್ಯಾರ್ಥಿಗಳು ಅವುಗಳ ಮಹತ್ವ ಅರಿತು ಪ್ರಯತ್ನಶಾಲಿಯಾದರೆ ಯಶಸ್ಸು ಖಂಡಿತ ದೊರೆಯುತ್ತದೆಂದು ಹೇಳಿದರು.

ಇದೇ ಸಂದರ್ಭದಲ್ಲಿ ತಾಲ್ಲೂಕು ಪ್ರೌಢಶಾಲೆಗಳ 10ನೇ ತರಗತಿ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ವಿಜ್ಞಾನ ವಿಷಯದ ರಸಪ್ರಶ್ನೆ ಸ್ಪರ್ಧೆ ಫಲಿತಾಂಶ ಪ್ರಕಟಿಸಲಾಯಿತು. ಪ್ರಥಮ- ಶಾರದಾ ಕನ್ನಡ ಮಾಧ್ಯಮ ಪ್ರೌಢಶಾಲೆ, ಮುದ್ದೇಬಿಹಾಳ ವಿದ್ಯಾರ್ಥಿಗಳಾದ ರೇಖಾ ಬಾಚಿಹಾಳ, ಅನನ್ಯಾ ಲಮಾಣಿ, ದೇವಮ್ಮ ಅಮರಗೋಳ. ದ್ವಿತೀಯ- ವಿರೇಶ್ವರ ಪ್ರೌಢಶಾಲೆ, ನಾಲತ್ವಾಡ, ಸಾನಿಕಾ ಭಂಗಿ, ರೇಖಾ ಲೋಟಗೇರಿ, ಚೈತ್ರಾ. ತೃತೀಯ- ರೇವಣ ಸಿದ್ದೇಶ್ವರ ಪ್ರೌಢಶಾಲೆ ಸರೂರ, ಅಮಿತ ಇಂಗಳೇಶ್ವರ, ಸಾಗರ, ಸಂಗಮೇಶ ಆಲೂರ. ವಿಜೇತ ಶಾಲಾ ತಂಡಗಳ ವಿದ್ಯಾರ್ಥಿಗಳಿಗೆ ನಗದು ಬಹುಮಾನದೊಂದಿಗೆ ಪ್ರಮಾಣ ಪತ್ರವನ್ನು ಪ್ರದಾನ ಮಾಡಲಾಯಿತು. ಒಟ್ಟು 7 ಪ್ರೌಢಶಾಲೆಗಳ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಶಿಕ್ಷಕರಾದ ಗುರುರಾಜ ಚಟ್ಟೇರ ಪ್ರಾರ್ಥನೆ ಗೀತೆಯನ್ನು ಹಾಡಿದರು. ವೇದಿಕೆ ಮೇಲೆ ಪ್ರಾಂಶುಪಾಲರಾದ ಆರ್.ಬಿ.ರೂಡಗಿ, ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಉಪನ್ಯಾಸಕರಾದ ಬಿ.ಆರ್. ಬೆಳ್ಳಿಕಟ್ಟಿ ಕಾರ್ಯಕ್ರಮ ನಿರೂಪಿಸಿದರು. ವಿ. ಎಂ. ಕುರಿ ವಂದಿಸಿದರು.

# ಮನ ಪರಿವರ್ತನೆಗೊಂಡು ಮಹಾಯೋಗಿಯಾದ ವೇಮನ



ಬಾಗಲಕೋಟೆ: :ಜೀವನದಲ್ಲಿ ಬರುವ ಬೋಗ, ಭಾಗ್ಯಗಳು ಕ್ಷಣಿಕ ಸುಖದವುಎಂದರಿತು ಮನಪ-ರಿವರ್ತನೆಗೊಂಡ ಮಹಾಯೋಗಿ ವೇಮನ ಎಂದು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಹೇಳಿದರು.

ನವನಗರದಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಮಹಾಯೋಗಿ ವೇಮನನ 613ನೇ ಜಯಂತಿಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದಅವರು ವೇಮನರು ನಾಲ್ಕು ಸಾಲುಗಳ್ಳುಳ ಚೌಪದಿ ವಚನಕಾರರಾಗಿದ್ದು, ಲೋಕದಲ್ಲಿ ಜನಿಸಿದ ಪ್ರತಿಯೊಬ್ಬರುಜಾತಿ-ಮತ ಪಂಥಗಳನ್ನು ಬದಿಗಿರಿಸಿ ಸ್ನೇಹ ಸೌಹಾರ್ದತೆಯಿಂದ ಬದುಕಬೇಕೆಂದುಸಾರಿ ಸಾರಿ ಹೇಳಿದ್ದಾರೆ. ಪ್ರತಿಯೊಬ್ಬರುಜವಾಬ್ದಾರಿಯ ಬದುಕು ಕಟ್ಟಿಕೊಳ್ಳಬೇಕೆಂಬ ಸಂದೇಶ ನೀಡಿತಂದೆ-ತಾಯಿಯರಲ್ಲಿದಯೆತೋರದ ಪುತ್ರ ಹುಟ್ಟಿದರೇನು,ಸತ್ತರೇನು. ಹುತ್ತದಲ್ಲಿಗೆದ್ದಲು ಹುಟ್ಟವೇ? ಸಾಯವೇ?ಎಂದು ವಚನ ರಚಿಸಿದ್ದು, ಮಾತಾ-ಪಿತೃರ ಮೇಲಿರುವ ಭಕ್ತಿಎಂತಹದು-ಎಂದುತೋರುತ್ತದೆ.ಇಂತಹ ಮಹಾನ ಯೋಗಿಯ ತತ್ವಗಳನ್ನು ಮೈಗೂಡಿಸಿಕೊಂಡಾಗ ಜಯಂತಿಆಚರಣೆಅರ್ಥಪೂರ್ಣವಾಗುತ್ತದೆ-ಎಂದರು.ನವನಗರದಲ್ಲಿ ನಿರ್ಮಿಸಲಾಗುತ್ತಿರುವ ಹೇಮರಡ್ಡಿ ಮಲ್ಲಮ್ಮದೇವಸ್ಥಾನಕ್ಕೆತಮ್ಮಅನುದಾನದಲ್ಲಿ 5 ಲಕ್ಷ ರೂ.ಗಳನ್ನು ನೀಡುವದಾಗಿತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಬಿಟಿಡಿಎಅಧ್ಯಕ್ಷಎಚ್.ವೈ. ಮೇಟಿ ಮಾತನಾಡುತ್ತ ಮಹಾಯೋಗಿ ವೇಮನ ಮತ್ತು ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮಇಬ್ಬರುಒಂದೇಕುಟುಂಬದವರಾಗಿದ್ದು, ಸಾಮಾಜಿ-ಕಧಾರ್ಮಿಕಕ್ಷೇತ್ರಕ್ಕೆ ವಿಶಿಷ್ಟ ಕೊಡುಗೆ ನೀಡಿದ್ದಾರೆ. ಇವರು ಲೋಕಾರೂ ಡಿಯಂತೆಒಂದುಕುಲದಲ್ಲಿ ಜನಿಸಿದ್ದರೂ ಜಾತಿರಹಿತವಾದಜೀವನ ಸಾಗಿಸಿ ಮಾನವರೆಲ್ಲಒಂದೇ ಎಂಬ ಸಂದೇಶವನ್ನು ಸಾರಿದ್ದಾರೆ.

ನಾನು ಚಿಕ್ಕವನಿದ್ದಾಗ ನಮ್ಮಊರಲ್ಲಿ ಪ್ರದರ್ಶನಗೊಂಡ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ನಾಟಕ ನನ್ನಜೀವನದಲ್ಲಿ ಪರಿಣಾಮ ಬೀರಿತು. ಮಲ್ಲಮ್ಮ ಹಾಗೂ ವೇಮನರಂತಹವರತತ್ವ ಆದ-ರ್ಶಗಳು ಮುಂದಿನ ಜನಾಂಗಕ್ಕೆ ತಿಳಿಯಲೆಂದು ಇದನ್ನು ಸರಕಾರಿಕಾರ್ಯಕ್ರಮವಾಗಿಆಚ-ರಿಸಲಾಗುತ್ತಿದೆ.ನವನಗರದಲ್ಲಿ ನಿರ್ಮಾಣ ಹಂತದಲ್ಲಿರುವ ಹೇಮರಡ್ಡಿದೇವಸ್ಥಾನಕ್ಕೆ 10 ಲಕ್ಷ ರೂ.ಗಳನ್ನು ಶಾಸಕರ ಪ್ರದೇಶಾಭಿವೃದ್ಧಿಅನುದಾನದಲ್ಲಿ ನೀಡುವದಾಗಿ ಹೇಳಿದರು. ಮುಖ್ಯಅತಿಥಿಯಾ-ಗಿಆಗಮಿಸಿದ್ದ ನಗರಸಭೆಅಧ್ಯಕ್ಷೆ ಸವಿತಾ ಲೆಂಕೆನ್ನವರ ಮಾತನಾಡಿ ವೇಮನ ಹೆತ್ತವರಿಂದಒಡಹುಟ್ಟಿದವ-ರಿಂದ ಸಂಬಂಧಿಕರಿಂದಅನಾದರಕ್ಕೆಗು-ರಿಯಾಗಿ ದುಶ್ಚಟಗಳ ದಾಸನಾಗಿದ್ದಸಂದರ್ಭದಲ್ಲಿ ಪರಸ್ತ್ರೀ ಸಂಗದಲ್ಲಿತೊಡಗಿ ಸಂಪತ್ತನ್ನೆಲ್ಲ ಹಾಳು ಮಾಡುತ್ತಿರುವ ಸಮಯದಲ್ಲಿಇವನನ್ನು ಹೇಮರಡ್ಡಿ ಮಲ್ಲಮ್ಮ ಪರಿವರ್ತನೆ ಮಾಡುವಲ್ಲಿ ಸಫಲಳಾಗಿದ್ದಾಳೆ ವೇಮನರ ಹಲವಾರು ವಚನಗಳು ಲೌಕಿಕದ ಅಂಕು-ಡೊಂಕುಗಳನ್ನು ತಿದ್ದುವ ದಾರಿದೀಪಗಳಾಗಿದ್ದು ನಾವೆಲ್ಲರೂಅವರ ತತ್ವಗಳನ್ನು ಅಳವಡಿಸಿಕೊಳ್ಳೋಣ ಎಂದರು.ವಿಶೇಷ ಉಪನ್ಯಾಸಕರಾಗಿ ಆಗಮಿಸಿದ್ದ ಬಾಗಲಕೋಟೆಆಧ್ಯಾತ್ಮಿಕಚಿಂತಕ ಪ್ರದೀಪಗುರೂಜಿ ವೇಮನನ ಸಮಗ್ರಜೀವನದ ಬಗ್ಗೆ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಹೇಮ-ವೇಮ ಸಂಸ್ಥೆಯ ಅಧ್ಯಕ್ಷಆರ್.ಎಲ್.ಕಟಗೇರಿ, ನಾರಾಯಣ ಹಾದಿಮನಿ, ಎಚ್.ಎಸ್.ನಾಲತ್ವಾಡ, ಎಸ್.ಬಿ.ಮಾಚಾ, ಈಶ್ವರಕೋನಪ್ಪನವರ ಹಾಜರಿದ್ದರು. ಪ್ರಾರಂಭದಲ್ಲಿಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಕರ್ಣಕುಮಾರ ಸ್ವಾಗತಿಸಿದರು. ಕೊನೆಗೆ ರಡ್ಡಿ ಸಮಾಜದಅಧ್ಯಕ್ಷ ಮಹೇಶ ಕಕರಡ್ಡಿ ವಂದಿಸಿದರು.ಶಂಕರಲಿಂಗದೇಸಾಯಿ, ಉಮಾ ಕೆಳಗಿನಮನಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಆರಂಭದ ಮುನ್ನ ಜಿಲ್ಲಾಡಳಿತ ಭವನದಎದುರು ಬೀಳಗಿ ಶಾಸಕ ಜೆ.ಟಿ.ಪಾಟೀಲ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ವೇಮನರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮೆರವಣಿಗೆಗೆ ಚಾಲನೆ ನೀಡಿದರು. ಕುಂಭಹೊತ್ತ ಮುತ್ತೈದೆಯರು ಹಾಗೂ ವಿವಿಧ ಕಲಾತಂಡಗಳು ಮೆರವಣಿಗೆಯೊಂದಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಡಾ. ಅಂಬೇಡ್ಕರ ಭವನಕ್ಕೆ ಮುಕ್ತಾಯಗೊಂಡಿತು. ಅಪರ್‌ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಅಲ್ಪಸಂಖ್ಯಾತಇಲಾಖೆಯಜಿಲ್ಲಾಅಧಿಕಾರಿ ಶಿವಾನಂದ ಪಟ್ಟಣಶೆಟ್ಟಿಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

*****

# ಡಾ.ಅಂಬೇಡ್ಕರರ ಜೀವನ ಗಾಥೆ ಪ್ರತಿಯೊಬ್ಬರು ಓದಿ ಸಾಧನೆ ಮಾಡಿರಿ : ಜಾರಕಿಹೊಳಿ



ಬೈಲಹೊಂಗಲ-ಡಾ.ಬಿ.ಆರ್.ಅಂಬೇಡ್ಕರ ಅವರ ಹೋರಾಟ ಅವಿಸ್ಮರಣೀಯವಾಗಿದ್ದು, ಅವರು ಕೇವಲ ಮಿಸಲಾತಿಯ ಹರಿಕಾರನಲ್ಲ ಇದು ತಪ್ಪು ಕಲ್ಪನೆಯಾಗಿದೆ. ಎಲ್ಲ ಮಹಿಳೆಯರಿಗೂ ಸಮಾನ ಹಕ್ಕು ಕಾಯ್ದೆ, ಪ್ರತಿಯೊಬ್ಬರಿಗೂ ಶಿಕ್ಷಣ ಸಮಾತನೆ, ರಾಷ್ಟ್ರಕ್ಕೆ ನೀರಾವರಿ ಕೊಡುಗೆ, ರೀಜರ್ವ ಬ್ಯಾಂಕ್ ಸ್ಥಾಪನೆಗೆ ಸಲಹೆ ಸೇರಿದಂತೆ ಹಲವಾರು ಸಾಧನೆಗಳನ್ನು ಮಾಡಿದ್ದು ಸಮಾಜದಲ್ಲಿ ಪ್ರತಿಯೊಬ್ಬರು ಪೂಜಿಸುವಂತಾಗಬೇಕೆಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಅವರು ಸಮೀಪದ ಮಳಗಲಿ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ ಸಂಘಟಣೆಯ ಆಶ್ರಯದಲ್ಲಿ ಶನಿವಾರ ನಡೆದ ವಿಶ್ವ ರತ್ನ ಡಾ.ಬಿ.ಆರ್.ಅಂಬೇಡ್ಕರ ಅವರ ಮೂರ್ತಿ ಅನಾವರಣಗೊಳಿಸಿ, ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಅಂಬೇಡ್ಕರ ಅವರು ಕೇವಲ ದಲಿತರಿಗಷ್ಟೇ ಸಿಮೀತಗೊಳಿಸಲಾಗುತ್ತಿದ್ದು ಇದು ವ್ಯವಸ್ಥೆ ಸರಿಯಲ್ಲ, ಸಂವಿಧಾನದ ಪರಿಕಲ್ಪನೆಯಲ್ಲಿ ಎಲ್ಲರು ಸರಿ ಸಮಾನರು. ಈಗಾಗಿ ಇಡೀ ಮಾನವ ಜನಾಂಗವೇ ಉದ್ದಾರವಾಗುವಂತಹ ಸಾಧನೆಯನ್ನು ಅವರು ಮಾಡಿದ್ದಾರೆ. ಯುವಕರು ಇಂತಹ ಶ್ರಮಿಕರ ಜೀವನ ಚರಿತ್ರೆ ಅದ್ಯಯನ ಮಾಡಿ ಬದುಕು ಸಾಥ-ರ್ಕ ಮಾಡಿಕೊಳ್ಳಬೇಕು. ಕೇವಲ ಮೂರ್ತಿಗಷ್ಟೇ ಆಧ್ಯತೆ ನೀಡದೇ ಅವರ ಆದರ್ಶ, ಆಶಯಗಳನ್ನು ಪಾಲಿಸಿ ಅವರ ಸಾಧನೆಗಳನ್ನು ಮತ್ತಷ್ಟು ಬೆಳಕಿಗೆ ತರುವಲ್ಲಿ ಪ್ರಯತ್ನ ನಿತ್ಯವಾಗಬೇಕು.

ಶಾಸಕ ಮಹಾಂತೇಶ ಕೌಜಲಗಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಡೀ ವಿಶ್ವವೇ ಅನುಸರಿಸುವಂತಹ ಸಂವಿದಾನವನ್ನು ಡಾ.ಬಿ.ಆರ್. ಅಂಬೇಡ್ಕರ ಅವರು ನೀಡಿದ್ದು ಪ್ರತಿಯೊಬ್ಬರು ಎತ್ತರಕ್ಕೆ ಬೆಳೆಯಲು ಇದು ಸಹಕಾರಿಯಾಗಿದೆ. ಯಾವ ವ್ಯಕ್ತಿಯು ಇತಿಹಾಸವನ್ನು ತಿಳಿದುಕೊಳ್ಳತ್ತಾನೆಯೋ ಅಂಥಹ ವ್ಯಕ್ತಿ ಇತಿಹಾಸ ನಿರ್ಮಿಸಲು ಸಾದ್ಯವಾಗುತ್ತದೆ. ದೇಶವು ಸಮಗ್ರ ಅಭಿವೃದ್ಧಿಯಾಗಬೇಕಾದರೆ ಸಾಧಕರ, ಸಂತರ, ಮಹಾತ್ಮರ ಸಾಧನೆಗಳು ಇಂದಿನ ಜನಾಂಗಕ್ಕೆ ಸ್ಪೂರ್ತಿಯಾಗಬೇಕು. ಡಾ. ಅಂಬೇಡ್ಕರರ ಜೀವನ ಕ್ರಮ ಅವಲೋಕಿಸಿ ಸಾಗುತ್ತೇನೆಂದು ಪ್ರತಿಯೊಬ್ಬರು ಪ್ರತಿಜ್ಞೆ ಮಾಡಿದಾಗ ಮಾತ್ರ ನೆಮ್ಮದಿಯ ಜೀವನ ಸಾಧ್ಯವಾಗಲಿದೆ ಎಂದರು.

ಹಂಪಿಯ ಮಾತಂಗ ಪರ್ವತದ ಪೂರ್ಣಾನಂದ ಸ್ವಾಮೀಜಿ, ಗ್ರಾಮದ ಶ್ರೀ ಸಿದ್ದಾರೂಡ ಮಠದ ಕಲ್ಮೇಶ್ವರ ಅವಧೂತ ಮಹಾರಾಜ, ಯಲ್ಲಮ್ಮನ ಗುಡ್ಡದ ಲಗ್ಗೇಶ್ವರ ಸ್ವಾಮೀಜಿ, ರಾಜ್ಯ ಧಾರ್ಮಿಕ ದತ್ತಿ ಇಲಾಖೆಯ ನಿರ್ದೇಶಕ ಡಾ.ಮಹಾಂತಯ್ಯ ಶಾಸ್ತ್ರಿ ಆರಾದ್ರಿಮಠ, ವೇ.ಮೂ. ಚನ್ನಮಲ್ಲಯ್ಯ ಹಿರೇಮಠ, ಪಂಚ ಗ್ಯಾರಂಟಿಗಳ ಅನುಷ್ಠಾನ ಸಮೀತಿಯ ಬೈಲಹೊಂಗಲ ತಾಲೂಕಾಧ್ಯಕ್ಷ ಡಾ.ಮಹಾಂತೇಶ ಕಳ್ಳಿಬಡ್ಡಿ, ಬೈಲಹೊಂಗಲ ಎಸ್‌ಬಿಡಿಐ ಪಿಯು ಕಾಲೇಜಿನ ಉಪನ್ಯಾಸಕ ಜಿ.ಎ.ತಮ್ಮಣ್ಣವರ, ಕಾಂಗ್ರೆ ಯುವ ಮುಖಂಡ ಕಾರ್ತಿಕ ಪಾಟೀಲ, ಯರಗಟ್ಟಿ ಎಪಿಎಂಸಿ ಅಧ್ಯಕ್ಷ ನೀಲಕಂಠ ಸಿದ್ದಬಸಣ್ಣವರ, ಸಂಪಾದಕ ಡಾ. ಪ್ರಶಾಂತರಾವ್ ಐಹೊಳೆ, ಹಿರೇಬೂದನೂರ ಗ್ರಾ.ಪಂ.ಅಧ್ಯಕ್ಷ್ಯೆ ಮಂಜುಳಾ ನಾಯ್ಕರ, ಡಾ.ಬಿ.ಆರ್. ಅಂಬೇಡ್ಕರ ಸಂಘಟಣೆಯ ರಾಜ್ಯಾಧ್ಯಕ್ಷ, ಸಂಸ್ಥಾಪಕ ರಮೇಶ ಹರಿಜನ, ರಾಜ್ಯ ಉಪಾಧ್ಯಕ್ಷ ಮಲ್ಲಪ್ಪ ಹರಿಜನ, ಕಾರ್ಯದರ್ಶಿ ಪ್ರಕಾಶ ಹಂಚಿನಮನಿ, ಡಿಎಸ್‌ಎಸ್-ಅಂಬೇಡ್ಕರ ಧ್ವನಿ ರಾಜ್ಯಾಧ್ಯಕ್ಷ ಸುರೇಶ ರಾಯಪ್ಪಗೋಳ, ಅಹಿಂದ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಬಿ.ಡಿ.ತಮ್ಮಣ್ಣವರ, ಶಿಕ್ಷಕ ಚಂದ್ರಶೇಖರ ಭಜಂತ್ರಿ, ಮುಂತಾದವರು ವೇದಿಕೆ ಮೇಲಿದ್ದರು. ವಿವಿಧ ಸಂಘಟಣೆಗಳ ಸದಸ್ಯರು, ಗಣ್ಯರು, ಗ್ರಾಮಸ್ಥರು ಪಾಲ್ಗೊಂಡಿದ್ದರು.

ನಿವೃತ ಮುಖ್ಯೋಪಾಧ್ಯಾಯ ಶಂಕರ ಸಾಗರ ಸ್ವಾಗತಿಸಿದರು. ಶಿಕ್ಷಕ ಚನ್ನಗೌಡ ಪಾಟೀಲ ನಿರೂಪಿಸಿದರು. ಖಜಾಂಚಿ ಬಸಪ್ಪ ಹರಿಜನ ವಂದಿಸಿದರು. ಇದಕ್ಕೂ ಮುನ್ನ ಗ್ರಾಮದ ಮುಖ್ಯ ರಸ್ತೆಯಲ್ಲಿ ಪ್ರತಿಷ್ಠಾಪಿಸಿದ ಡಾ.ಬಿ.ಆರ್.ಅಂಬೇಡ್ಕರ ಅವರ ಮೂರ್ತಿಯ ಅನಾವರಣವನ್ನು ಗಣ್ಯರು ನೆರವೇರಿಸಿದರು.

# ಮಹಾಯೋಗಿ ಮೇವನ ಜಯಂತಿ

ವಿಜಯಪುರ : ಸಮಾಜದಲ್ಲಿರುವಂತಹ ತಪ್ಪು, ದೋಷಗಳನ್ನು ಕವಿತೆ ಹಾಗೂ ವಚನಗಳ ಮೂಲಕ ಅವರ ವಿಚಾರದಾರೆಗಳನ್ನು ಸಮಾಜಕ್ಕೆ ಕೊಟ್ಟಂತಹ ಅನೇಕ ಮಹಾ ಪುರುಷರುಗಳನ್ನು ಸ್ಮರಿಸುವುದು ನಮ್ಮ ನಿಮ್ಮೆಲ್ಲರ ಕರ್ತವ್ಯ ಎಂದು ನಗರ ಶಾಸಕರಾದ ಬಸನಗೌಡ ರಾ. ಪಾಟೀಲ(ಯತ್ನಾಳ) ಹೇಳಿದರು.

ಇಂದು ನಗರದ ಕಂದಗಲ್ಲ ಶ್ರೀ ಹನಮಂತರಾಯ ರಂಗಮಂದಿರಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜದಲ್ಲಿ ಜಾತಿಗಳನ್ನು ಮೀರಿ ಸಮಾಜದಲ್ಲಿ ಬದಲಾವಣೆಯನ್ನು ಮಾಡಿ, ಕ್ರಾಂತಿ ಮಾಡಿದಂತಹ ಸತ್ಪುರುಷರಾದ ನಮ್ಮ ಮಹಾಯೋಗಿ ವೇಮನರು ಹದಿನೈದನೇ ಶತಮಾನದಲ್ಲಿ ಸಮಾಜದ ಅಂಕುಡೊಂಕುಗಳನ್ನು ತಿದ್ದಿ ಸಮಾಜವನ್ನು ಸರಿದಾರಿಗೆ ತರಲು ಯತ್ನಿಸಿದ ಮಹಾಯೋಗಿ ವೇಮನರು. ಅವರ ವಚನಗಳು ಇಂದು ನಮಗೆ ದಾರಿದೀಪವಾಗಿವೆ. ಸುಮಾರು 15 ಸಾವಿರ ಪದ್ಯಗಳನ್ನು ಬರೆದು ಸಮಾಜಕ್ಕೆ ಒಂದು ಒಳ್ಳೆಯ ಕೊಡುಗೆಯನ್ನು ನಮಗೆ ನೀಡಿದ್ದಾರೆ. ಮಹಾಯೋಗಿಯ ಜೀವನ ಸಂದೇಶ ಎಲ್ಲ-ರಿಗೂ ಪ್ರೇರಣೆಯಾಗಲಿ. ಮಹನೀಯರ ಸಾರಿದ ತತ್ವ ಸಿದ್ದಾಂತಗಳನ್ನು ಅರ್ಥ ಮಾಡಿಕೊಂಡು ಅವರು ಹಾಕಿಕೊಟ್ಟ ಮಾರ್ಗದಲ್ಲಿ ಎಲ್ಲರೂ ನಡೆಯಬೇಕು. ಹುಟ್ಟಿನಿಂದಲೇ ಎಲ್ಲರೂ ಸಮಾನರು ಎಂದು ಸಾರಿದ ವೇಮನರ ಬದುಕು ನಮಗೆ ಸ್ಪೂರ್ತಿಯಾಗಬೇಕು. ನಮ್ಮ ದೇಶ ಸಿರಿ ಸಂಪತ್ತನ್ನು ಹೊಂದಿದ ದೇಶ ಅದರೊಂದಿಗ ಹೃದಯ ಸಂಪತ್ತನ್ನು ಹೊಂದಿದೆ. ಡಾ. ಅಂಬೇಡ್ಕರ ಅವರು ದೇಶದಲ್ಲಿ ಅಶ್ಪೃಶ್ಯತೆ ಕು-ರಿತು ತಮ್ಮ ಜೀವನದ ಉದ್ದಕ್ಕೂ ಹೋರಾಡಿ ಎಲ್ಲರೂ ಒಂದೇ ಎಂದು ಜಗತ್ತಿಗೆ ಸಾರಿ ಸಾರಿ ಹೇಳಿದ ಮಹಾನ ನಾಯಕರಾಗಿದ್ದರು. ಇಂತಹ ಮಹನೀಯರ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಅವರು ತಿಳಿಸಿದರು.

ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷರಾದ ಸಂಗಮೇಶ ಅಪ್ಪಾಸಿ ಬಬಲೇಶ್ವರ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿ ಶರಣರ, ಮಹಾಪುರುಷರ, ಸತ್ಪುರುಷರ ಮತ್ತು ದೇಶಕ್ಕಾಗಿ ಬದುಕನ್ನು ಸಮರ್ಪಿಸಿಕೊಂಡವರ ಜಯಂತಿಗಳು ಈ ದೇಶದಲ್ಲಿ ನಾಡಿನಲ್ಲಿ ಸಾಂಕೇತಿಕವಾಗದೆ ಹೃದಯಪೂರಕವಾಗಿ ಆಚರಿಸುವಂತಾಗಬೇಕು ಅಂದಾಗ ಮಾತ್ರ ಆ ಸಂದೇಶಗಳನ್ನು ಮನೆ ಮನಗಳಲ್ಲಿ ತಲುಪಿಸಲು ಸಾಧ್ಯ. ಎಲ್ಲ ಸಮುದಾಯದವರು ದೇವಾಲಯಗಳನ್ನು ಮಾತ್ರ ಕಟ್ಟದೆ ಧಾರ್ಮಿಕ ಭಾವನೆಗಳ ಜೊತೆಗೆ ಜೀವಂತ ದೇವಾಲಯವಾದ ಶಿಕ್ಷಣ ಸಂಸ್ಥೆಗಳನ್ನು ಕಟ್ಟಿದಲ್ಲಿ ಎಲ್ಲ ಸಮುದಾಯದ ನಿಜವಾದ ದೇವರುಗಳು ಎಲ್ಲ ಮಕ್ಕಳು ಓದಲಿಕ್ಕೆ ಸಾಧ್ಯ. ವೇಮನ ವಚನಗಳನ್ನು ಇಡೀ ರಾಜ್ಯಕ್ಕೆ ಪರಿಚಯಿಸಿದ ಹಾಗೂ ಅನುವಾದಿಸಿದ ಸಾಕಷ್ಟು ಸಮಯ ತೆಗೆದುಕೊಂಡ ದಿ.ಎಸ್.ಆರ್ ಪಾಟೀಲ್, ಹಾಗೂ ದಿ. ಕೆ.ಎಚ್ ಪಾಟೀಲ್ ಅವರು ವೇಮನರ ಕುರಿತು ಅಧ್ಯಯನ



ಹಾಗೂ ಸಂಶೋಧನೆ ಮಾಡಿ ಜನವರಿ 19 ಕ್ಕೆ ವೇಮನ ಜಯಂತಿ ಆಚರಿಸುವಂತೆ ಐತಿಹಾಸಿಕ ನಿರ್ಧಾರ ತೆಗೆದುಕೊಂಡು ಕಳೆ 5 ವರ್ಷಗಳಿಂದ ಸರ್ಕಾರಿ ಜಯಂತಿಯಾಗಿ ಆಚರಿಸಲು ಕ್ರಮ ವಹಿಸಲಾಗುತ್ತಿದೆ ಅವರನ್ನು ಇಂತಹ ಸಂದರ್ಭದಲ್ಲಿ ನಾವು ಸ್ಮರಿಸಬೇಕು ಎಂದು ಅವರು ಹೇಳಿದರು.

ಬೆಳಿಗ್ಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನ ಆವರಣದಲ್ಲಿ ನಗರ ಶಾಸಕರಾದ ಬಸನಗೌಡ ರಾ.ಪಾಟೀಲ (ಯತ್ನಾಳ) ಮಹಾಯೋಗಿ ವೇಮನರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸಾಹಿತಿಗಳಾದ ಶಿವಶರಣಪ್ಪ ಶಿರೂರು ವಿಶೇಷ ಉಪನ್ಯಾಸ ನೀಡಿದರು. ಹೇಮರಡ್ಡಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಸುರೇಶ ದೇಸಾಯಿ ಕಾರ್ಯಕ್ರಮದ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಗುರುನಾಥ ದಡ್ಡಿ, ತಹಶೀಲ್ದಾರ ಪ್ರಶಾಂತ ಚನಗೊಂಡ ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ ಸ್ವಾಗತಿಸಿದರು, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ ವಂದಿಸಿದರು. ಎಚ್.ಎ ಮಮದಾಪುರ ಕಾರ್ಯಕ್ರಮವನ್ನು ನಿರೂಪಿಸಿದರು.

ಸಮಾಜದ ಮುಖಂಡರುಗಳಾದ ವಿ.ಸಿ ನಾಗಠಾಣ, ಪಾಂಡು ಸಹುಕಾರ ದೊಡಮನಿ, ಬಸನಗೌಡ ಪಾಟೀಲ, ಎಸ್.ಎಚ್ ನಾಡಗೌಡ, ಕಂಠೀರವ ಕುಲ್ಲೊಳ್ಳಿ, ಶ್ರೀಮತಿ ಮಹಾದೇವಿ ತೆಲಗಿ, ಸರೋಜಿನಿ ಚೌಧರಿ, ಸಂಗು ಸಜ್ಜನ, ಭೀಮರಾಯ ಜಿಗಜಿಣಗಿ, ವಿದ್ಯಾವತಿ ಅಂಕಲಗಿ, ದೇವೇಂದ್ರ ಮೀರೇಕರ, ಸೋಮನಗೌಡ ಕಲ್ಲೂರ, ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸಂಸ್ಥೆಯ ನಿರ್ದೇಶಕರು, ಸದಸ್ಯರು ಹಾಗೂ ಇತರರು ಉಪಸ್ಥಿತರಿದ್ದರು.

# ಮಾಜಿ ಸೈನಿಕರು ಸಂಘಟಿತರಾದರೆ ಸಮಾಜ ಅಭಿವೃದ್ಧಿ ಸಾಧ್ಯ: ಪ್ರಭು ನೀಲಕಂಠ ಶ್ರೀ



ಬೈಲಹೊಂಗಲ-ದೇಶ ರಕ್ಷಣೆಗಾಗಿ ಗಡಿಯಲ್ಲಿ ಪ್ರಾಣ ತ್ಯಾಗಕ್ಕೂ ಸಿದ್ದರಿದ್ದು, ಉಗ್ರರ ವಿರುದ್ದ ಸದಾ ಕಣ್ಗಾವಲಾಗಿ ಚಳಿ, ಮಳೆ, ಬಿಸಿಲು ಎನ್ನದೇ ನಿರಂತರವಾಗಿ ಪ್ರತಿ ಸವಾಲು ಎದುರಿಸಿ ಸೇವೆಗೈಯುತ್ತಿರುವ ಯೋಧರ ಜೀವನ ಕ್ರಮವನ್ನು ಪ್ರತಿಯೊಬ್ಬರು ಗೌರವಿಸಬೇಕು ಎಂದು ಶಾಖಾ ಮೂರುಸಾವಿರ ಮಠದ ಪ್ರಭು ನೀಲಕಂಠ ಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಮುರಗೋಡ ರಸ್ತೆಯ ಪೃಥ್ವಿ ಉದ್ಯಾನದಲ್ಲಿ ಮಾಜಿ ಸೈನಿಕರ ಸಮನ್ವಯ ಸಮೀತಿಯ ಆಶ್ರಯದಲ್ಲಿ ರವಿವಾರ ಜರುಗಿದ ಸದಸ್ಯರ ವಾರ್ಷಿಕ ಸ್ನೇಹ ಸಮ್ಮೇಳನದ ಸಾನಿಧ್ಯ ವಹಿಸಿ ಮಾತನಾಡಿ, ಕುಟುಂಬ, ಊರು ಮರೆತು ರಾಷ್ಟ್ರ ಸೇವೆ ಮಾಡಲೇಬೇಕೆಂದು ಪಣ ತೊಟ್ಟು ಸುಮಾರು ವರ್ಷಗಳ ಕಾಲ ಪ್ರತಿ ಸವಾಲುಗಳನ್ನು ಎದುರಿಸಿ ಭಾರತಾಂಭೆಯ ರಕ್ಷಣೆ ಮಾಡಿ ನಿವೃತರಾಗಿರುವ ತಾವೆಲ್ಲರೂ ಪ್ರಸ್ತುತವೂ ಸಂಘಟಣೆಗಳ ಮೂಲಕ ವಿಧಾಯಕ ಕಾರ್ಯಗಳನ್ನು ನೆರವೇ-ರಿಸುತ್ತಿರುವದು ಇಡೀ ಸಮಾಜ ಹೆಮ್ಮೆ ಪಡುವಂತದ್ದು ಎಂದರು.

ಸೌತ್ ವೆಸ್ಟರ್ನ್ ರೈಲ್ವೆ ವಿಭಾಗದ ಡಿಆರ್‌ಯುಸಿಸಿ ಸಮಿತಿಯ ನಾಮನಿರ್ದೇಶಿತ ನೂತನ ಸದಸ್ಯ ಎಫ್. ಎಸ್.ಸಿದ್ದನಗೌಡರ ಮಾತನಾಡಿ, ಸೈನ್ಯ ಸೇರಿಬೇಕೆಂದು ಹಲವಾರು ಯುವಕರು ಕನಸ್ಸು ಕಂಡು ಯಶಸ್ವಿಯಾಗಿರುತ್ತಾರೆ. ಭಗವಂತ ಕೊಟ್ಟಂತ ಅಂಥಹ ಅವಕಾಶದ ಸೇವೆಯನ್ನು ಪ್ರಾಮಾಣಿಕವಾಗಿ ಮಾಡಿ ಉನ್ನತ ಹುದ್ದೆ ಪಡೆಯುವದರ ಜೊತೆಗೆ ನಾಡಿಗೆ, ದೇಶಕ್ಕೆ ಕೀರ್ತಿ ತರಬೇಕು. ನಿಯಮಾನುಸಾರ ನಿವೃತರಾದ ನಂತರ ಕ್ರೀಯಾಶೀಲ ಚಟುವಟಿಕೆಗಳಲ್ಲಿ ತೊಡಗಿ ಮಾದರಿಯಾಗಬೇಕೆಂದು ಸಲಹೆ ನೀಡಿದರು. ರಾಜ್ಯ ಧಾರ್ಮಿಕ ದತ್ತಿ ಇಲಾಖೆಯ ನಿರ್ದೇಶಕ, ವೇ.ಮೂ. ಡಾ.ಮಹಾಂತೇಶ ಶಾಸ್ತ್ರಿ ಆರಾದ್ರಿಮಠ ಸೈನಿಕರ ಜೀವನಗಾಥೆ ಬಗ್ಗೆ ಮಾತನಾಡಿದರು. ಮಾಜಿ ಸೈನಿಕರ ಸಮನ್ವಯ ಸಮೀತಿಯ ಅಧ್ಯಕ್ಷ ಬಿ.ಬಿ.ಬೋಗೂರ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ಜನ್ಮಟ್ಟಿ, ವಿಶ್ವ ಹಿಂದೂ ಪರಿಷತ್ತನ್ ಜಿಲ್ಲಾಧ್ಯಕ್ಷ ಪ್ರಮೋದಕುಮಾರ ವಕ್ಕುಂದಮಠ, ರಂಗಭೂಮಿ ಕಲಾವಿದ ಸಿ.ಕೆ.ಮೆಕ್ಕೇದ, ಶ್ರೀ ಸೋಮೇಶ್ವರ ಸಕ್ಕರೆ ಕಾರ್ಖಾನೆಯ ಉಪಾಧ್ಯಕ್ಷ ಮಹಾಂತೇಶ ಮತಿಕೊಪ್ಪ, ಕಿತ್ತೂರು ರಾಣಿ ಚನ್ನಮ್ಮ ಸ್ಮರಣೋತ್ಸವ ಸಮೀತಿಯ ಅಧ್ಯಕ್ಷ ಮುರಗೇಶ ಗುಂಡ್ಲೂರ, ಕೆಆರ್‌ಸಿಇಎಸ್ ಸಂಸ್ಥೆಯ ಪ್ರಾಚಾರ್ಯ ಎಂ.ಸಿ.ಬಿರಾದಾರ ಮುಂತಾದವರು ವೇದಿಕೆ ಮೇಲಿದ್ದರು. ಮಾಜಿ ಸೈನಿಕರ ಸಮನ್ವಯ ಸಮೀತಿಯ ವೀರ ನಾರಿಯರಿಂದ ಕಾರ್ಯಕ್ರಮ ಉದ್ಘಾಟಿಸಲಾಯಿತು.

ಇದಕ್ಕೂ ಮುನ್ನ ಮುರಕೀಭಾಂವಿ ರಸ್ತೆಯ ಡಾ.ಶಿವಾನಂದ ಭಾರತಿ ನಗರದಲ್ಲಿ ನೂತನವಾಗಿ ನಿರ್ಮಿಸಿದ ಸೈನಿಕ ಭವನವನ್ನು ಶಾಸಕ ಮಹಾಂತೇಶ ಕೌಜಲಗಿ ಹಾಗೂ ಧಾರ್ಮಿಕ ದತ್ತಿ ಇಲಾಖೆ ನಿರ್ದೇಶಕ ಡಾ.ಮಹಾಂತೇಶ ಶಾಸ್ತ್ರಿ ಆರಾದ್ರಿಮಠ ಉದ್ಘಾಟಿಸಿದರು. ಕಿತ್ತೂರು ರಾಣಿ ಚನ್ನಮ್ಮನ ಪುತ್ಥಳಿಗೆ ಪೂಜೆ ಸಲ್ಲಿಸಿ ನಗರದಲ್ಲಿ ಮಾಜಿ ಸೈನಿಕರಿಂದ ಬೈಕ್ ರ್‍ಯಾಲಿ ನಡೆಸಲಾಯಿತು. ಇದೇ ವೇಳೆ ವಿವಿಧ ಸಾಧಕರನ್ನು ಸತ್ಕರಿಸಲಾಯಿತು. ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಶಿಕ್ಷಕ ಪ್ರಕಾಶ ನಾಯ್ಕರ ಸ್ವಾಗತಿಸಿದರು. ಸಂಘದ ಉಪಾಧ್ಯಕ್ಷ ಚಂದ್ರಶೇಖರ ನೇಸರಗಿ ನಿರೂಪಿಸಿದರು. ನಿರ್ದೇಶಕ ಚಂದ್ರಶೇಖರ ಗೌಡರ ವಂದಿಸಿದರು. ಕಾರ್ಯದರ್ಶಿ ಶೇಖರ ನಾವಲಗಟ್ಟಿ, ಖಜಾಂಚಿ ದೇಮಪ್ಪ ಶಿರಗಾಂವಿ, ನಿರ್ದೇಶಕರಾದ ಸುರೇಶ ಕಮ್ಮಾರ, ಬಸವರಾಜ ವಕ್ಕುಂದ, ಬಸವರಾಜ ಹೊಳೆಪ್ಪನವರ, ಟಿ.ಬಿ.ಮಾವಿನಕಟ್ಟಿ, ಬಿ.ಎಸ್.ಹೊಂಗಲ, ಎಸ್.ಜಿ.ಹಡಪದ, ಶಂಖರ ಬೇವಿನ, ಯಲ್ಲಪ್ಪ ಗಡದವರ, ಎಲ್.ಎಸ್.ಪಾಟೀಲ, ಮಲ್ಲವ್ವ ಕಾಡನ್ನವರ ಮುಂತಾದವರು ಉಪಸ್ಥಿತರಿದ್ದರು. ನೂರಾರು ಸಂಖ್ಯೆಯಲ್ಲಿ ನಿವೃತ ಸೈನಿಕರ ಕುಟುಂಬಸ್ಥರು ಪಾಲ್ಗೊಂಡಿದ್ದರು.

## ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ ಎಲ್ಲರೂ ಮಾಡಿಸಿ- ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ



ಕೊಪ್ಪಳ : ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ ಹಾಗೂ ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆಗಳನ್ನು ಸರಕಾರಿ ನೌಕರರು ಕಡ್ಡಾಯವಾಗಿ ಎಲ್ಲರೂ ಮಾಡಿಸಬೇಕೆಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ಅವರು ಸೋಮವಾರ ಜಿಲ್ಲಾಧಿಕಾ-ರಿಗಳ ಕಛೇರಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ ಹಾಗೂ ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆಗಳ ಕುರಿತು ಮಾಹಿತಿ ನೀಡಲು ಅಧಿಕಾರಿಗಳಿಗೆ ಕರೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಈ ಯೋಜನೆಗಳನ್ನು ನಾನು ಮಾಡಿಕೊಂಡಿದ್ದು ನನ್ನ ಕುಟುಂಬದವರ ಹೆಸ-ರಿನಲ್ಲಿ ಮಾಡಿಸಿದ್ದೇನೆ. ತಾವುಗಳು ಇವುಗಳನ್ನು ಮಾಡಿಕೊಳ್ಳಬೇಕು ಮತ್ತು ತಮ್ಮ ಕಛೇರಿಯಲ್ಲಿರುವ ಸಿಬ್ಬಂದಿಗಳಿಗೂ ಈ ಮಾಹಿತಿ ನೀಡಿ. ಇದು ಸರಕಾರಿ ನೌಕರರು ಮಾತ್ರವಲ್ಲದೆ ಸಾರ್ವಜನಿಕರು ಈ ಪಾಲಿಸಿ ಮಾಡಿಕೊಂಡರೆ ಅವರಿಗೂ ತುಂಬಾ ಅನುಕೂಲವಾಗಲಿದ್ದು. ಸಾಮಾನ್ಯ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಇದನ್ನು ಜಾರಿಗೆ ತರಲಾಗಿದೆ ಎಂದು ಹೇಳಿದರು.

ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆಗೆ ವಾರ್ಷಿಕ ಕೇವಲ 20 ರೂ ಕಟ್ಟಿದರೆ 2 ಲಕ್ಷ ರೂಗಳ ದುರ್ಘಟನಾ ವಿಮೆ ಸಿಗಲಿದ್ದು 18 ರಿಂದ 70 ವರ್ಷದ ವರೆಗಿನ ಪ್ರಾಯದ ಎಲ್ಲಾ ಸೇವಿಂಗ್ಸ್ ಬ್ಯಾಂಕ್ ಖಾತೆದಾರರು ಈ ಪಾಲಿಸಿ ಮಾಡಬಹುದಾಗಿದೆ. ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ ವಾರ್ಷಿಕ ಪ್ರಿಮಿಯಮ್ 436 ಕಟ್ಟಿದರೆ 2 ಲಕ್ಷ ರೂ ಜೀವ ವಿಮೆ 18 ರಿಂದ 50 ವರ್ಷದ ಪ್ರಾಯದ ಎಲ್ಲಾ ಸೇವಿಂಗ್ ಬ್ಯಾಂಕ್ ಖಾತೆದಾರರು ಈ ಪಾಲಿಸಿಗಳನ್ನು ಮಾಡಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಎಸ್.ಬಿ. ಐ ಬ್ಯಾಂಕಿನ ಎಲ್.ಡಿ. ಎಮ್ ವಿರೇಂದ್ರ ಕುಮಾರ್ ಮಾತನಾಡಿ ನಮ್ಮನ್ನು ನಂಬಿದವರಿಗೆ ಸೆಕ್ಯುರಿಟಿ ಇಟ್ಟು

ಸಾಯಬೇಕು ವಿಶೇಷವಾಗಿ ಹಳ್ಳಿಗಾಡಿನ ಜನರಿಗೆ ಈ ಯೋಜನೆಗಳಿಂದ ತುಂಬಾ ಉಪಯೋಗವಾಗಲಿದೆ. ಕಡಿಮೆ ಪ್ರಿಮಿಯಂ ಕಟ್ಟಿದರೆ ಸಾಕು ಇದರ ಲಾಭ ಸಿಗಲಿದೆ. ಇದಕ್ಕೆ ಭಾರತ ದೇಶದ ಎಲ್ಲಾ ನಾಗರಿಕರು ಅರ್ಹರು. ಯಾವುದೇ ಬ್ಯಾಂಕಿನಲ್ಲಿ ತಮ್ಮ ಅಕೌಂಟ್ ಇದ್ದರೆ ಅಟೊ ಡೆಬಿಟ್ ಆಗುತ್ತದೆ. 18 ವರ್ಷ ಮೇಲ್ಪಟ್ಟ ಎಲ್ಲರೂ ಈ ಪಾಲಿಸಿ ಮಾಡಿಕೊಳ್ಳಲು ಹೇಳಬೇಕು ಈ ಕುರಿತು ತಮ್ಮ ಅಕ್ಕಪಕ್ಕದವರಿಗೂ ಮಾಹಿತಿ ನೀಡಿ. ಇದರ ರಾಜ್ಯದ ಗುರಿ 22 ಪ್ರತಿಶತ ಆಗಿದ್ದು ನಮ್ಮ ಜಿಲ್ಲೆಯಲ್ಲಿ 23 ಪ್ರತಿಶತ ಆಗಿದೆ ಬರುವ ದಿನಗಳಲ್ಲಿ ಇನ್ನೂ ಹೆಚ್ಚಿಗೆ ಆಗಬೇಕಿದೆ ಎಂದು ಹೇಳಿದರು.

ಈ ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್, ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಕೃಷ್ಣಮೂರ್ತಿ ದೇಸಾಯಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಳ್ಳಿ, ಪದವಿಪೂರ್ವ ಶಿಕ್ಷಣ ಇಲಾಖೆಯಿಂದ ಉಪನಿರ್ದೇಶಕರಾದ ಜಗದೀಶ,

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

*******

## 21ನೇ ಸತೀಶ ಶುಗರ್ಸ ಅವಾರ್ಡ್ಸನ ಅಂತಿಮ ಹಂತದ ಸ್ಪರ್ಧೆಗಳ ಫಲಿತಾಂಶ



ಗೋಕಾಕ: ನಗರದ ಶ್ರೀ ಮಹರ್ಷಿ ವಾಲ್ಮೀಕಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ 21ನೇ ಸತೀಶ ಶುಗರ್ಸ ಅವಾರ್ಡ್ಸನ ದಿ.19ರಂದು ಅಂತಿಮ ಹಂತದ ಸ್ಪರ್ಧೆಗಳ ಫಲಿತಾಂಶ.

ರಾಜ್ಯ ಮಟ್ಟದ ಮುಕ್ತ ಜಾನಪದ ಗಾಯನ ಸ್ಪರ್ಧೆಯಲ್ಲಿ ಮುನ್ಯಾಳ ಗ್ರಾಮದ ಐಶ್ವರ್ಯ ತಳವಾರ ಪ್ರಥಮ, ತುಕ್ಕಾನಟ್ಟಿ ಗ್ರಾಮದ ಜ್ಯೋತಿ ಶೆಟ್ಟಿ ದ್ವಿತೀಯ, ಅಥ-ಣಿಯ ಸುಷ್ಮಾ ನಂದಗಾಂವ ತೃತೀಯ ಸ್ಥಾನ ಪಡೆದಿದ್ದಾರೆ. ಮುಕ್ತ ಗಾಯನ ಸ್ಪರ್ಧೆಯಲ್ಲಿ ಸುನೀಲ ಚಾಳನ್ನವರ ಪ್ರಥಮ, ಹಾಲಪ್ಪ ಅಂಬಿನಾಯಕ ದ್ವಿತೀಯ, ಸುಷ್ಮಾ ನಂದಗಾಂವ ತೃತೀಯ ಸ್ಥಾನ ಪಡೆದಿದ್ದಾರೆ. ಪ್ರೌಢ ಶಾಲಾ ವಿಭಾಗದ ಗಾಯನ ಸ್ಪರ್ಧೆಯಲ್ಲಿ ನಗರದ ಶಫರ್ಡ ಮಿಷನ್ ಆಂಗ್ಲ ಮಾಧ್ಯಮ ಶಾಲೆಯ ರಾಘವೇಂದ್ರ ಖಾನಪ್ಪನವರ ಪ್ರಥ-ಮ, ಫೋರ್ರ್ಸ ಅಕಾಡೇಮಿ ಗೋಕಾಕ ಫಾಲ್ಸ್‌ನ ಅರುಣಾ ಕಲ್ಲೋಳಿ ದ್ವಿತೀಯ, ಜ್ಞಾನಗಂಗೋತ್ರಿ ಪ್ರೌಢ ಶಾಲೆಯ ನೇಹಾ ಸುಲದಾಳ ತೃತೀಯ ಸ್ಥಾನ ಪಡೆದಿದ್ದಾರೆ. ಪ್ರಥಮ 15ಸಾವಿರ, ದ್ವಿತೀಯ 10ಸಾವಿರ, ತೃತೀಯ 7ಸಾವಿರ ರೂಗಳ ನಗದು ಬಹುಮಾನ, ಟ್ರೋಫಿ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಪ್ರೌಢ ಶಾಲಾ ವಿಭಾಗದ ಸಮೂಹ ನೃತ್ಯ ಸ್ಪರ್ಧೆಯಲ್ಲಿ ಕಲ್ಲೋಳ್ಳಿಯ ಪಿಜಿಎನ್ ಪ್ರೌಢ ಶಾಲೆಯ ವಿಕಾಸ ಕಲಾಲ ತಂಡ ಪ್ರಥಮ, ಮರಡಿಮಠದ ಶ್ರೀ ಗುರು ಸಿದ್ದೇಶ್ವರ ಪ್ರೌಢಶಾಲೆಯ ಸೌಜನ್ಯ ಕುಂದರಿ ತಂಡ ದ್ವಿತೀಯ, ನಗರದ ಸರಕಾರಿ ಪ್ರೌಢಶಾಲೆಯ ಲಕ್ಷ್ಮೀ ಚಿಕ್ಕೋಡಿ ತಂಡ ತೃತೀಯ ಸ್ಥಾನ ಪಡೆದಿದ್ದಾರೆ. ಪ್ರಥ-ಮ 50ಸಾವಿರ, ದ್ವಿತೀಯ 30ಸಾವಿರ, ತೃತೀಯ 20ಸಾವಿರ ರೂಗಳ ನಗದು ಬಹುಮಾನ, ಟ್ರೋಫಿ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ರಾಜ್ಯ ಮಟ್ಟದ ಮುಕ್ತ ವಿಭಾಗದ ಸಮೂಹ ನೃತ್ಯ ಸ್ಪರ್ಧೆಯಲ್ಲಿ ಈಳಕಲ್ಲನ ವಿಜಯ ಡಾನ್ಸ್ ಕಂಪನಿ ಪ್ರಥಮ, ಬೆಳಗಾವಿಯ ಎಕ್ಸೆ ನಟ್ರಿಕ್ ಡ್ಯಾನ್ಸ್ ಗ್ರೂಪ ದ್ವಿತೀಯ, ಮಹಾಲಿಂಗಪೂರದ ವಿ ಕೆ ಸ್ಟೈಲ್ ಗ್ರೂಪ್ ತೃತೀಯ ಸ್ಥಾನ ಪಡೆದಿದ್ದಾರೆ. ಪ್ರಥಮ 60ಸಾವಿರ, ದ್ವಿತೀಯ 40ಸಾವಿರ, ತೃತೀಯ 30ಸಾವಿರ ರೂಗಳ ನಗದು ಬಹುಮಾನ, ಟ್ರೋಫಿ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ 15ಸಾವಿರ ರೂಗಳ ನಗದು ಹಾಗೂ ಟ್ರೋಫಿ ನೀಡಿ ಸಚಿವ ಸತೀಶ ಜಾರಕಿಹೊಳಿ ಸತ್ಕರಿಸಿದರು.

ಸಂಸದೆ ಪ್ರೀಯಾಂಕಾ ಜಾರಕಿಹೊಳಿ, ಯುವ ಕಾಂಗ್ರೇಸ್ ಪ್ರಧಾನ ಕಾರ್ಯದರ್ಶಿ ರಾಹುಲ ಜಾರಕಿಹೊಳಿ, ಅಬಕಾರಿ ಇಲಾಖೆ ಜಂಟಿ ಕಾರ್ಯದರ್ಶಿ ಡಾ. ವೈ ಮಂಜುನಾಥ, ತಹಶೀಲದಾರ ಡಾ.ಮೋಹನ ಭಸ್ಮೆ, ಹೆಚ್ಚುವರಿ ಎಸ್‌ಪಿ ಶೃತಿ, ಡಿವೈಎಸ್‌ಪಿ ಡಿ ಎಚ್ ಮುಲ್ಲಾ, ಕ್ಷೇತ್ರ ಶಿಕ್ಷಣಾಧಿಕಾರಿ ಅಜೀತ ಮನ್ನಿಕೇರಿ, ಮುಖ್ಯವೈದ್ಯಾಧಿಕಾರಿ ರವೀಂದ್ರ ಅಂಟಿ, ರಾಜ್ಯ ಎಸ್‌ಟಿ ಘಟಕ ಅಧ್ಯಕ್ಷ ಕೆ ಪಿ ಪಾಲಯ್ಯ, ಮುರಗೇಶ ಕರಗಣ್ಣಿ, ಮಲ್ಲಗೌಡ ಪಾಟೀಲ, ಮೋಶಿನ ಖೋಜಾ, ಅಶೋಕ ಪಾಟೀಲ, ತಿಮ್ಮಪ್ಪ ಬಾಗಲಕೋಟ, ರಮಜಾನ ಪೀರಜಾದೆ, ಎಮ್ ಎಮ್ ನದಾಫ, ದಸ್ತಗೀರ ಕಾಗವಾಡೆ, ಡಾ.ಉಮರಾಣಿ, ಸಂತೋಷ ಗುಡಸ ಅವರು ವಿಜೇತರಿಗೆ ಬಹುಮಾನ ವಿತರಿಸಿದರು.

## ರಾಜ್ಯ ಮಹಿಳಾ ಆಯೋಗ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಜಿಲ್ಲಾ ಪ್ರವಾಸ

ವಿಜಯಪುರ : ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ಜ. 21 ರಿಂದ 24ರ ವರೆಗೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

22ರ ಬೆಳಿಗ್ಗೆ 9.30ಕ್ಕೆ ಮುದ್ದೇಬಿಹಾಳ ತಾಲೂಕಿನ ಶಿರೋಳ್ ರಸ್ತೆಯಲ್ಲಿರುವ ಅಲೆಮಾರಿ ಜನಾಂಗದ ವಾಸಸ್ಥಾನಕ್ಕೆ ಭೇಟಿ ನೀಡಲಿದ್ದಾರೆ, ಮದ್ಯಾಹ್ನ 12 ಗಂಟೆಗೆ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮದ್ಯಾಹ್ನ 2.30ಕ್ಕೆ ಮುದ್ದೇಬಿಹಾಳ ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡುವರು. ಮದ್ಯಾಹ್ನ 3.30ಕ್ಕೆ ವಿಜಯಪುರ ಜಿಲ್ಲೆಯ ಡೊಂಕಮಡು ಗ್ರಾಮಕ್ಕೆ ಭೇಟಿ ನೀಡುವರು.

23ರ ಬೆಳಿಗ್ಗೆ 9.30ಕ್ಕೆ ರಾಷ್ಟ್ರೀಯ ಕಾನೂನು ಶಾಲೆಯ ಡಾ.ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆ, ಸಾಮಾಜಿಕ ಪ್ರತ್ಯೇಕತೆ ಮತ್ತು ಒಳಗೊಳ್ಳುವಿಕೆ ನೀತಿಯ ಅಧ್ಯಯನ ಕೇಂದ್ರ ಹಾಗೂ ಅಕ್ಕಮಹಾದೇವಿ ವಿಶ್ವವಿದ್ಯಾಲಯದ ಸಹಯೋಗದಲ್ಲಿ ವಿದ್ಯಾರ್ಥಿಗಳಿಗೆ ಮತ್ತು ಸಾಮಾಜಿಕ ಕಾರ್ಯಕರ್ತರಿಗೆ ಸಂವಿಧಾನ, ಸಾಮಾಜಿಕ ನ್ಯಾಯದ ಕಾನೂನುಗಳ ಕುರಿತು ಜಾಗೃತಿ ಮೂಡಿಸಲು ಹಮ್ಮಿಕೊಂಡಿರುವ ರಾಜ್ಯ ಮಟ್ಟದ ಕಾರ್ಯಾಗಾರವನ್ನು ಉದ್ಘಾಟಿಸುವರು. ಮದ್ಯಾಹ್ನ 1.30ಕ್ಕೆ ಬಬಲೇಶ್ವರ ತಾಲೂಕಿನ ಸಾರವಾಡ ಗ್ರಾಮಕ್ಕೆ ಭೇಟಿ ನೀಡುವರು. ಸಂಜೆ 5ಗಂಟೆಗೆ ವಿಜಯಪುರ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡುವರು.

ಜ.24ರ ಬೆಳಿಗ್ಗೆ 11ಗಂಟೆಗೆ ಜಿಲ್ಲಾಧಿಕಾರಿ ಕಛೇ-ರಿಯಲ್ಲಿ ಮಹಿಳಾ ಪ್ರಗತಿ ಪರಿಶೀಲನಾ ಸಭೆ, ಎಸ್. ಎಚ್.ಡಬ್ಲೂ ಜಿಲ್ಲೆಯಲ್ಲಿ ಜಾರಿಯಾದ ಬಗ್ಗೆ ಹಾಗೂ ಪ್ರಕರಣಗಳು ದಾಖಲಾದ ಬಗ್ಗೆ, ಅಂಕಿಅಂಶಗಳೊಂದಿಗೆ ಚರ್ಚೆ ಹಾಗೂ ಸರ್ಕಾರಿ, ಖಾಸಗಿ ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳದ ಕುರಿತು ದಾಖಲಾದ ಪ್ರಕರಣಗಳು, ಮಹಿಳಾ ದೌರ್ಜನ್ಯ ಪ್ರಕರಣ, ಮಹಿಳಾ ಮಿಸಲಾತಿ, ಕಾಲೇಜಿನ ವಿದ್ಯಾರ್ಥಿನಿಯರು ಮತ್ತು ಮಹಿಳೆಯರ ಸುರಕ್ಷತೆ ಕ್ಕುರಿತು ಸಭೆ ನಡೆಸಲಾಗುವದು.

ಮದ್ಯಾಹ್ನ 1ಗಂಟೆಗೆ ಪತ್ರಿಕಾ ಗೋಷ್ಠಿ ನಡೆಸುವರು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಡಗಿ ಕಟ್ಟಡ ಬೇಕಾಗಿದೆ

ವಿಜಯಪುರ,: 2024-25ನೇ ಸಾಲಿನಲ್ಲಿ ವಿಜಯಪುರದಲ್ಲಿ ಹೊಸದಾಗಿ ಪ್ರಾರಂಭವಾದ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ ವಸತಿ ನಿಲಯಕ್ಕೆ ಬಾಡಿಗೆ ಆಧಾರದ ಮೇಲೆ 100 ವಿದ್ಯಾರ್ಥಿಗಳಿಗೆ ವಾಸಿಸಲು ಯೋಗ್ಯವಾದಂತಹ ಬಾಡಿಗೆ ಆಧಾರದ ಕಟ್ಟಡ ಅವಶ್ಯಕತೆ ಇದ್ದು, ಲೋಕೊಪಯೋಗಿ ಇಲಾಖೆ ನಿಗದಿ ಪಡಿಸಿದ ಬಾಡಿಗೆ ಆಧಾರದ ಮೇಲೆ ಕಟ್ಟಡ ನೀಡಲು ಇಚ್ಛಯಿಸುವ ಕಟ್ಟಡ ಮಾಲೀಕರು ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿ ಇಲಾಹಿ ನಾಗರಾಳ ಮೊ.ಸಂ. 8970704986, ಮೆ.ನಂ.ಬಾಲಕರ ವಸತಿ ನಿಲಯದ ನಿಲಯಪಾಲಕ ಗವಿಸಿದ್ದಪ್ಪ ಸಜ್ಜನ ಮೊ.ಸಂ. 9972782693 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಜ.23ಕ್ಕೆ ರಾಷ್ಟ್ರೀಯ ಸುರಕ್ಷತಾ ಮಾಸಾಚರಣೆ 2025

ವಿಜಯಪುರ,:ಸಾರಿಗೆ ಇಲಾಖೆ ವತಿಯಿಂದ ರಾಷ್ಟ್ರೀಯ ಸುರಕ್ಷತಾ ಮಾಸಾಚರಣೆ-2025ರ ಅಂಗವಾಗಿ ಜ.23ರ ಬೆಳಿಗ್ಗೆ 10ಗಂಟೆಗೆ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಬೃಹತ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ವಿಜಯಪುರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನಪದ ಸಾಹಿತ್ಯದ ತಾಯಿ ಬೇರು: ಹಮೀದಾ ಬೇಗಂ ದೇಸಾಯಿ ಪೃಥ್ವಿ ಫೌಂಡೇಶನ್ ದಿಂದ ಜಾನಪದ ಸಂಭ್ರಮ ಕಾರ್ಯಕ್ರಮ



ಬೆಳಗಾವಿ: ಕನ್ನಡ ಸಾಹಿತ್ಯದಲ್ಲಿ ಜನಪದ ಸಾಹಿತ್ಯ ಅತ್ಯಂತ ಪುರಾತನವಾಗಿದ್ದು, ಜನಪದ ಸಾಹಿತ್ಯ ಜನಪದ ಸಾಹಿತ್ಯ ಶಿಷ್ಟ ಸಾಹಿತ್ಯದ ತಾಯಿ ಬೇರಾಗಿದೆ. ಅದನ್ನು ಯುವ ಪೀಳಿಗೆಗೆ ಪರಿಚಯಿಸುವ, ಉಳಿಸಿ ಬೆಳೆಸುವ ಕೆಲಸ ಆಗಬೇಕಿದೆ ಎಂದು ಬಸವರಾಜ ಕಟ್ಟಿಮನಿ ಪ್ರತಿಷ್ಠಾನದ ಸದಸ್ಯರಾದ ಹಮೀದಾ ಬೇಗಂ ದೇಸಾಯಿ ಅಭಿಪ್ರಾಯ ಪಟ್ಟರು

ಇಲ್ಲಿನ ಕನ್ನಡ ಸಾಹಿತ್ಯ ಭವನದಲ್ಲಿ ಶನಿವಾರ ಪೃಥ್ವಿ ಫೌಂಡೇಶನ್ ವತಿಯಿಂದ ಆಯೋಜಿಸಲಾದ "ಜಾನಪದ ಸಂಭ್ರಮ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಜಾನಪದ ನಮ್ಮ ನಾಡಿನ ಜೀವಾಳ, ಹೀಗಾಗಿ ನಮ್ಮ ನಾಡಿನ ಜನಪದ ಸಂಸ್ಕೃತಿಯನ್ನು ಉಳಿಸಿ-ಬೆಳೆಸುವ ಪ್ರಯತ್ನ ನಿರಂತರವಾಗಿ ನಡೆಯಬೇಕಿದೆ. ಜನರ ಬಾಯಿಂದ ಬಾಯಿಗೆ ಹರಡುವ ಜನಪದ ಅತ್ಯಂತ ಸರಳ ಶೈಲಿಯಲ್ಲಿ ಎಲ್ಲರ ಮನಮುಟ್ಟುತ್ತವೆ ಎಂದು ಹೇಳಿದರು. ಜನಪದ ತ್ರಿಪದಿಗಳನ್ನು ಹಾಡುತ್ತಾಅವುಗಳ ವಿಶಿಷ್ಠ ರೀತಿಯಲ್ಲಿ ನೀತಿ-ತತ್ವಗಳನ್ನು ಭೋಧಿಸುತ್ತಾ ಸ್ವಾಸ್ಥ್ಯ ಸಮಾಜವನ್ನು ವಿಲೀನಸುವಲ್ಲಿ ಜಾನಪದ ಮಹತ್ವದ ಪಾತ್ರವನ್ನು ನಿರ್ವಹಿಸುತ್ತವೆ ಎಂದರು.

ಜಯಶೀಲಾ ಬ್ಯಾಕೋಡ್ ಅವರು ಮಾತನಾಡಿ, ಪೃಥ್ವಿ ಫೌಂಡೇಶನ್ ದಿಂದ ಸಾಮಾಜಿ-ಕ ಪ್ರಗತಿ-ಪರ ಕಾರ್ಯಗಳನ್ನು ಆಯೋಜಿಸುತ್ತಿರುವುದು ಸಂತಸವಾಗಿದೆ. ನಮ್ಮ ಸಂಸ್ಕೃತಿಯನ್ನು ಬೆಳೆಸುವುದು ನಮ್ಮ ಹೊಣೆಯಾಗಿದೆ. ಮುಂದಿನ ದಿನಗಳಲ್ಲಿ ಪೃಥ್ವಿ ಫೌಂಡೇಶನ್ ಅಭಿವೃದ್ಧಿಯತ್ತ, ಹೆಮ್ಮರವಾಗಿ ಬೆಳೆಯಲ್ಲಿ ಎಂದು ಶುಭ ಹಾರೈಸಿದರು.

ಪೃಥ್ವಿ ಫೌಂಡೇಶನ್ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಗೈದಿರುವ ಜಯಶೀಲಾ ಬ್ಯಾಕೋಡ್, ಗಿರಿಜಾ ಮುಳಗುಂದ, ಬಾಳಗೌಡ ದೊಡಬಂಗಿ, ಗುರುಗೌಡ ಮಲಗೌಡ ಪಾಟೀಲ ಅವರಿಗೆ ಅನುಪಮ ಸೇವಾರತ್ನ ಹಾಗೂ ಡಾ. ಬಸನಗೌಡ ಬಿ. ಪಾಟೀಲ ಅವರಿಗೆ ಅನುಪಮ ಜ್ಞಾನ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪೃಥ್ವಿ ಫೌಂಡೇಶನ್ ಸದಸ್ಯರಿಂದ ಸಾಂಸ್ಕೃತಿ-ಕ ಕಾರ್ಯಕ್ರಮಗಳು ಜರುಗಿದವು. ಡಾ. ಹೇಮಾವತಿ ಸೊನೊಳ್ಳಿ ಅಧ್ಯಕ್ಷತೆ ವಹಿಸಿದರು. ರತ್ನಪ್ರಭಾ ಬೆಲ್ಲದ , ಜ್ಯೋತಿ ಮಾಳಿ ,ವಾಸಂತಿ ಮೇಳೆದ, ದ್ರಾಕ್ಷಾಯಿಣಿ ಕಾಪಸೆ, ಸುನಂದಾ ಎಮ್ಮಿ, ಲಲಿತಾ ಪರ್ವತರಾವ, ಶಾಲಿನಿ ಬೆನಿವಾರ, ಸುನೀತಾ ನಂದೆಣ್ಣವರ, ಅನ್ನಪೂರ್ಣಾ ಹಿರೇಮಠ, ದಾನಮ್ಮ ಅಂಗಡಿ, ಸುನೀತಾ ಸೊಲ್ಲಾಪುರೆ, ಮಹಾನಂದಾ ಪರಶೆಟ್ಟಿ , ಅಕ್ಕಮಹಾದೇವಿ ಹುಲಗಬಾಳಿ, ಭಾರತಿ ಮಠದ , ರೇಖಾ ಶ್ರೀನಿವಾಸ , ಪ್ರೇಮಾ ಪಾನಶೆಟ್ಟಿ, ರಂಜನಾ ಪಾಟೀಲ , ಅನಿತಾ ಮಾಲಗತ್ತಿ, ಅಂಜನಾ, ಸ. ರಾ. ಸುಳಕುಡೆ, ಬನಶಂಕರಿ, ಬಾಳಪ್ಪಾ ಪಾಟೀಲ, ಸಂಘದ ಕಾರ್ಯದರ್ಶಿ ಶೈಲಜಾ ಹಿರೇಮಠ ಸ್ವಾಗತಿಸಿದರು. ಮಹಾದೇವಿ ಹಿರೇಮಠ, ಪಾರ್ವತಿ ಹಿರೇಮಠ ಗಣ್ಯರನ್ನು ಸ್ವಾಗತಿಸಿದರು. ಇಂದಿರಾ ಮೋಟೆಬೆನ್ನೂರ ಪರಿಚಯಿಸಿದರು. ಮೀನಾಕ್ಷಿ ಸೂಡಿ ಪ್ರಾರ್ಥಿಸಿದರು. ಆಶಾ ಯಮಕನಮರಡಿ ನಿರೂಪಿಸಿದರು. ಭವನೇಶ್ವರಿ ಪೂಜೇರಿ ವಂದಿಸಿದರು.

## ಮಕ್ಕಳಿಗೆ ಉತ್ತಮ ಸಂಸ್ಕಾರ, ಸಂಸ್ಕೃತಿ ನೀಡಿ




ರಬಕವಿ-ಬನಹಟ್ಟಿ,ಜ20: ಮಕ್ಕಳಿಗೆ ಪಾಲಕರು ಬಾಲ್ಯದಲ್ಲಿಯೇ ಉತ್ತಮ ಸಂಸ್ಕಾರ, ಸಂಸ್ಕೃತಿ ನೀಡಬೇಕು. ಧಾರ್ಮಕ, ಸಾಂಸ್ಕೃತಿಕ ಮತ್ತು ವೈಚಾರಿಕ ಪ್ರಜ್ಞೆ ಮೂಡಿಸುವದು ಅವಶ್ಯವಿದೆಯೆಂದು ಹಿರೇಮಠದ ಶರಣಬಸವ ಶಿವಾಚಾರ್ಯರು ಹೇಳಿದರು.

ಬನಹಟ್ಟಿಯ ಕಾಡಸಿದ್ಧೇಶ್ವರ ದೇವಸ್ಥಾನ ಆವರಣದಲ್ಲಿ ಜರುಗಿದ 'ಸಂವರ್ಧನ' ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಇತರೆ ದೇಶಗಳ ಸಂಸ್ಕೃತಿಗಿಂತ ಭಾರತೀಯ ಸಂಸ್ಕೃತಿ ಹಿರಿಯದು, ಮಾನವೀಯ ಸಂಬಂಧಿಗಳಿಗೆ ಅತೀ ಹೆಚ್ಚಿನ ಒತ್ತು ನೀಡಿದ ದೇಶ ನಮ್ಮದು. ಸೌಹಾರ್ದತೆ, ಸಹಬಾಳ್ವೆ, ಧಾರ್ಮಿಕತೆಯ ಹಿರಿಮೆಯುಳ್ಳ ಪರಂಪರೆ ಭಾರತ. ಇಂತಹ ಐತಿಹಾಸಿಕ ಹಿನ್ನಲೆಯುಳ್ಳ ದೇಶವಿಂದು ಎಲ್ಲ ರಂಗದಲ್ಲಿಯೂ ಮುನ್ನಡೆ ಸಾಧಿಸುತ್ತಿದೆ. ಈ ಪರಿಕಲ್ಪನೆಯಿಂದ ದೇಶ ಸಂಪತ್ತು ಎಂದೇ ಬಣ್ಣಿಸಲಾಗುವ ಮಕ್ಕಳನ್ನು ಸುಸಂಸ್ಕೃತ ಹಾಗು ಸಚ್ಚಾರಿತ್ರ್ಯವುಳ್ಳ ಪ್ರಜೆಗಳನ್ನಾಗಿಸುವ ಮೂಲಕ ಮಕ್ಕಳ ಭವಿಷ್ಯ ಉಜ್ವಲಗೊಳಿಸುವಲ್ಲಿ ಪೂರಕ ಕಾರ್ಯ ಪಾಲಕ-ಪೋಷಕರದ್ದರೆಂದರು.

ಸಾಹಿತಿ ಯಶವಂತ ವಾಜಂತ್ರಿ ಮಾತನಾಡಿ, ಧರ್ಮದ ಸನ್ಮಾರ್ಗದಲ್ಲಿ ಬದುಕು ನಿರ್ಮಿಸುವ ವಯಕ್ತಿಗೆ ಯಶಸ್ಸು ನಿಶ್ಚಿತ. ಅನ್ಯಾಯ, ಶೋಷಣೆ, ಅನೀತಿ, ಅಧರ್ಮಕ್ಕೆ ಎಂದಿಗೂ ಜಯವಿಲ್ಲ. ದೈವಭಕ್ತಿ ಶ್ರದ್ಧೆಯಿಂದ ಸುಖ, ಶಾಂತಿ, ನೆಮ್ಮದಿ, ಶ್ರೇಯ್ಸ ಲಭಿಸಲಿದೆ ಎಂದರು.

ಆಧುನಿಕತೆ ಸೌಲಭ್ಯ ಹೆಚ್ಚಾದಂತೆ ಧಾರ್ಮಿಕ ಭಾವನೆಗಳು ಇಳಿಮುಖವಾಗುತ್ತಿದೆ. ದಾನ-ಧರ್ಮದ ಕಾರ್ಯಗಳಿಂದ ಮನಸ್ಸು ಸಿರಿವಂತಿ-ಕೆಗೆ ಕಾರಣವೆಂದರು.ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಯಿತು.

ವೇದಿಕೆ ಮೇಲೆ ಬಸವರಾಜ ಕೊಣ್ಣೂರ, ಜಗದೀಶ ಮೈತ್ರಿ, ಸಾಗರ ಚವಜ, ಸದಾಶಿವ ಗೋಂದಕರ, ಸಂಗಪ್ಪ ಉದಗಟ್ಟಿ, ಡಾ.ಇಂದುಮತಿ ಯಂಡೋಳಿ, ಮಲ್ಲಿಕಾರ್ಜುನ ತುಂಗಳ, ಅಜಯ ಬಾಣಕಾರ, ಕುಳ್ಳೋಳ್ಳಿ, ಸರೋಜಿನಿ ಬಳ್ಳಾರಿ, ದುಂಡಪ್ಪ ಗಾಣಿಗೇರ, ದುಂಡಪ್ಪ

# ಕೆರೆ ತುಂಬುವ ಯೋಜನೆಗೆ ಪ್ರಾಯೋಗಿಕವಾಗಿ ಚಾಲನೆ

## 8 ಕೆರೆಯನ್ನು ಇನ್ನೂ ಕೆಲವೇ ದಿನಗಳಲ್ಲಿ ಲೋಕಾರ್ಪಣೆಗೊಳಿಸಿ ರೈತರ ಮುಖದಲ್ಲಿ ಮಂದಹಾಸ ಮುಡಬೇಕು ಅನ್ನುವ ಕಲ್ಪನೆ ನನ್ನದಾಗಿದ್ದೆ: ಶಾಸಕ ಲಕ್ಷ್ಮಣ ಸವದಿ



ಮೋಳೆ ;-ಅಥ-ಣಿತಾಲೂಕಿನಫ ಪೂರ್ವಭಾಗದ 8 ಕೆರೆಗಳನ್ನು ತುಂಬುವ ಮಹತ್ವದ ಯೋಜನೆಯನ್ನು ಶೀಘ್ರದಲ್ಲಿ ಲೋಕಾರ್ಪಣೆ ಮಾಡಲಿದ್ದು, ಸದ್ಯ ಪ್ರಾಯೋಗಿಕವಾಗಿ ಕೆರೆಗಳನ್ನು ತುಂಬು ಕಾಮಗಾರಿಯನ್ನು ಪರೀಕ್ಷಿಸಲಾಗಿದ್ದು, ಇದರಿಂದ ಕೆರೆಯಲ್ಲಿ ನೀರು ತುಂಬುವದರಿಂದ ಭೂಮಿಯಲ್ಲಿ ಅಂರ್ತಜಲಮಟ್ಟ ಹೆಚ್ಚಾಗಿ ಬಾವಿ, ಬೋರ್‌ವೇಲ್‌ಗಳಲ್ಲಿ ನೀರು ಹೆಚ್ಚಾಗಿ ಒಣ ಪ್ರದೇಶ ರೈತ-ರಿಗೆ ಬೆಳೆಗಳನ್ನು ಬೆಳಯಲು ಹಾಗೂ ಜನ ಜಾನುವಾರುಗಳ ನೀರಿನ ದಾಹವನ್ನು ನೀಗಿಸಲು ಇದರಿಂದ ಸಾದ್ಯವಾಗಲಿದೆ ಎಂದು ಮಾಜಿ ಉಪಮುಖ್ಯಮಂತ್ರಿ, ಶಾಸಕ ಲಕ್ಷ್ಮಣ ಸವದಿ ಹೇಳಿದರು

ತಾಲೂಕಿನ ಕೊಕಟನೂರು ಗ್ರಾಮದ ಪೂರ್ವ ಭಾಗದ ಸಣ್ಣ ನೀರಾವರಿ ಇಲಾಖೆ ವತಿಯಿಂದ ಕೆರೆ ತುಂಬಿಸುವ ಯೋಜನೆಗೆ ನೀನೆ ಪ್ರಾಯೋಗಿಕವಾಗಿ ಚಾಲನೆ ನೀಡಿದ ಹಿನ್ನಲೆಯಲ್ಲಿ ರವಿವಾರ ಶಾಸಕ ಲಕ್ಷ್ಮಣ ಸವದಿ ಯಲ್ಲಮ್ಮವಾಡಿಯ ಕೆರೆಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಹಲವು ಸೂಚನೆಗಳನ್ನು ನೀಡಿದರು

ಈ ವೇಳೆ ಮಾತನಾಡಿದ ಶಾಸಕ ಲಕ್ಷ್ಮಣ ಸವದಿ ಅವರು ಉತ್ತರ ಭಾಗದಲ್ಲಿ ಭೀಕರ ಬರಗಾಲ ಪ್ರದೇಶವಿದ್ದು ಕೃಷ್ಣಾ ನದಿಯಿಂದ ಈ ಭಾಗದ 8 ಕ್ಕೂ ಹೆಚ್ಚು ಕೆರೆಗಳನ್ನು ತುಂಬುವ ಮಹತ್ವಾಕಾಂಕ್ಷಿ ಯೋಜನೆಯನ್ನು ಇನ್ನು ಕೆಲವೇ ದಿನಗಳಲ್ಲಿ ಲೋಕಾರ್ಪಣೆಗೊಳಿಸಿ ರೈತರ ಮುಖದಲ್ಲಿ ಮಂದಹಾಸ ಮುಡಬೇಕು ಅನ್ನುವ ಕಲ್ಪನೆ ನನ್ನದಾಗಿದ್ದು, ಜಾಕವೇಲ್, ಪೈಪ್ ಲೈನ್, ಹಾಗೂ ವಿತರಣಾ ಘಟಕಗಳು ಸಿದ್ದವಾಗಿದ್ದು ಶನಿವಾರ ಅಧಿಕಾರಿಗಳು ಪ್ರಾಯೋಗಿಕವಾಗಿ ಪರೀಕ್ಷೆ ನಡೆಸಿದ್ದು ಯೋಜನೆ ಯಶಸ್ವಿಯಾಗಿ ಕಾರ್ಯನಿರ್ವಹನೆ ಮಾಡಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗುತ್ತಿಗೆದಾರ ಸಂತೋಷ ಗಾಣಿಗೇರ, ಮುಖಂಡರಾದ ಮಲ್ಲು ಕುಳ್ಳೋಳಿ, ವಿನಾಯಕ ಬಾಗಡಿ, ಶ್ರೀಕಾಂತ ಮಾಕಾಣಿ ಹಾಗೂ ತಾಲೂಕಾ ಮಟ್ಟದ ಚಿಕ್ಕ ನೀರಾವರಿ ಇಲಾಖೆ ಅಧಿಕಾರಿ ಪ್ರವೀಣ ಪಾಟೀಲ. ಮುಖಂಡರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

*****


**ಕರ್ನಾಟಕ ನೀರಾವರಿ ನಿಗಮ ನಿಯಮಿತ**
**(ಕರ್ನಾಟಕ ಸರ್ಕಾರದ ಒಂದು ಉದ್ಯಮ)**
**ಕಾರ್ಯನಿರ್ವಾಹಕ ಅಭಿಯಂತರರು ಕನೀನಿನಿ ಘಟಕಾನಿ ವಿಭಾಗ ನಂ.5 ಕೌಜಲಗಿ**

ಕ್ರ.ಸಂ:ಕನೀನಿನಿ/ಘಬಕಾನಿ/ವಿ-5/ಡಿಬಿ/ಟೆಂಡರ್/2024-25/1428 ದಿನಾಂಕ:20/01/2025

**ಅಲ್ಪಾವಧಿ ಶೇಕಡಾವಾರು ಟೆಂಡರ್ ಪ್ರಕಟಣೆ**
**(ಕೆ.ಪಿ.ಪಿ-ಪ್ರೊಕ್ಯೂರಮೆಂಟ್ ಪೋರ್ಟರ್ಲನಲ್ಲಿ)**

ಕಾರ್ಯನಿರ್ವಾಹಕ ಅಭಿಯಂತರರು ಕನೀನಿನಿ ಘಬಕಾನಿ ವಿಭಾಗ ನಂ.5 ಕೌಜಲಗಿ ವಿಭಾಗ ಅಡಿಯಲ್ಲಿ ಅಲ್ಪಾವಧಿ ಶೇಕಡಾವಾರು ಟೆಂಡರ್‌ನ್ನು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ (ದ್ವಿಲಕೋಟೆಯಲ್ಲಿ) ಸ್ಟ್ಯಾಂಡರ್ಡ ಟೆಂಡರ ಡಾಕ್ಯೂಮೆಂಟ್ ಲೆಕ್ಕ ಶೀರ್ಷಿಕೆ 2701 ರ ಅಡಿಯಲ್ಲಿ 5 ಕಾಮಗಾರಿಗಳಿಗೆ ಗುತ್ತಿಗೆಯನ್ನು ಕರೆಯಲಾಗಿದ್ದು ಗುತ್ತಿಗೆಗೆ ಇಟ್ಟ ಅಂದಾಜು ಮೊತ್ತವು 6.78 ರಿಂದ 16.94 ಲಕ್ಷಗಳು ಇದ್ದು ಮುಂಗಡ ಠೇವಣಿ ಮೊತ್ತವು 13,000.00 ರಿಂದ 42,500.00 ರೂ ಗಳು ಇರುತ್ತದೆ ಟೆಂಡರನ್ನು ಸ್ವೀಕರಿಸುವ ದಿನಾಂಕ:- 21-01-2025 ರಿಂದ 29-01-2025 ರ ಸಂಜೆ 16.00 ಘಂಟೆಯವರೆಗೆ ಮತ್ತು ಟೆಂಡರಗಳನ್ನು ತೆರೆಯುವ ದಿನಾಂಕ:-30-01-2025 ರ ಮುಂಜಾನೆ 17.00 ಘಂಟೆ ನಂತರ. ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದವರ ಕಚೇರಿಯಲ್ಲಿ ಹಾಗೂ ಅಂತರ್‌ಜಾಲದ ಮೂಲಕ ವೆಬ್‌ಸೈಟ್ ವಿಳಾಸ:- www.kppp.karnataka.gov.in ರಲ್ಲಿ ದಿನಾಂಕ:-21-01-2025 ರ ನಂತರ ಪಡೆಯಬಹುದು.

ಸಹಿ/-ಕಾರ್ಯನಿರ್ವಾಹಕ ಅಭಿಯಂತರರು
ಕನೀನಿನಿ ಘಬಕಾನಿ ವಿಭಾಗ ನಂ.5 ಕೌಜಲಗಿ.

DIPR/BGM/RO-NO-1501/KSMCA/2024-25


BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 293 , Postal Reg No. PMG/KA/NK/BM/135/25-26 / POST AT Vantamury Colony Post Office

ವಾರ್ತಾ ಮತ್ತು ಸಾರ್ವಜನಿಕ
ಸಂಪರ್ಕ ಇಲಾಖೆ

1924-2024
ಬೆಳಗಾವಿ, ಕರ್ನಾಟಕ

ಗಾಂಧಿ ಭಾರತ





# ಗಾಂಧಿ ಭಾರತ ಮರು ನಿರ್ಮಾಣ...

ಮಹಿಳೆಯರನ್ನು ಸಮಾನವಾಗಿ ಕಾಣುವ, ಎಲ್ಲ ಜಾತಿ-ಧರ್ಮಗಳನ್ನು ಸಮನಾಗಿ ನೋಡುವ, ಉಳ್ಳವರು ಮತ್ತು ಬಡವರನ್ನು ಸಮನಾಗಿ ನಡೆಸಿಕೊಳ್ಳುವ, ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನೂ ಸಬಲಗೊಳಿಸುವ ಭಾರತದ ಬಗ್ಗೆ **ಮಹಾತ್ಮ ಗಾಂಧಿ ಅವರು** ಕನಸು ಕಂಡಿದ್ದರು.

ಇವತ್ತು, ಗಾಂಧಿಯವರ ಕನಸಿನ ಭಾರತ ನಿಧಾನವಾಗಿ ಕಣ್ಮರೆಯಾಗುತ್ತಿದೆ. **1924ರಲ್ಲಿ ಮಹಾತ್ಮ ಗಾಂಧಿ ಅವರ ಅಧ್ಯಕ್ಷತೆಯಲ್ಲಿ ನಡೆದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಐತಿಹಾಸಿಕ ಬೆಳಗಾವಿ ಅಧಿವೇಶನದ ಶತಮಾನೋತ್ಸವ** ಆಚರಿಸುತ್ತಿರುವ ಈ ಸಂದರ್ಭದಲ್ಲಿ, ವಿಭಜನಕಾರಿ ಮತ್ತು ಫ್ಯಾಸಿಸ್ಟ್ ಶಕ್ತಿಗಳಿಂದ ಗಾಂಧಿ ಭಾರತವನ್ನು ಮರಳಿ ಪಡೆದು ಗಾಂಧಿ ಭಾರತದ ಮರು ನಿರ್ಮಾಣ ಮಾಡುವ ಸಮಯ ಬಂದೊದಗಿದೆ.

**ನಮ್ಮ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಗಾಂಧಿ ಭಾರತದ ಕನಸನ್ನು ನನಸು ಮಾಡುವ ಪ್ರಾಮಾಣಿಕ ಪ್ರಯತ್ನವಾಗಿದೆ.**



ಕರ್ನಾಟಕ ಮಾದರಿ ಆಡಳಿತವು ಗ್ಯಾರಂಟಿ ಯೋಜನೆಗಳನ್ನು ನೂರಕ್ಕೆ ನೂರರಷ್ಟು ಅನುಷ್ಠಾನಗೊಳಿಸುವ ಮೂಲಕ ಮಹಿಳೆಯರು, ಬಡವರು ಮತ್ತು ಶೋಷಿತ ವರ್ಗದವರನ್ನು ಸಬಲೀಕರಣಗೊಳಿಸುತ್ತಾ 'ಗಾಂಧಿ ಭಾರತ'ವನ್ನು ನಿರ್ಮಿಸುವ ಕನಸನ್ನು ನನಸಾಗಿಸುವತ್ತ ಮುನ್ನಡೆಯುತ್ತಿದೆ.

**ದಿನಾಂಕ : 21.01.2025 • ಸಮಯ : ಬೆಳಗ್ಗೆ 10:30 • ಸ್ಥಳ : ಸುವರ್ಣ ವಿಧಾನಸೌಧ, ಬೆಳಗಾವಿ**

ಐತಿಹಾಸಿಕ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಸಮಾರಂಭ

## ರಾಷ್ಟ್ರಪಿತ ಮಹಾತ್ಮ ಗಾಂಧಿಯವರ ಪುತ್ಥಳಿ ಅನಾವರಣ

ನಮ್ಮ ಕರ್ನಾಟಕ
ಗ್ಯಾರಂಟಿ ಕರ್ನಾಟಕ

ಶಕ್ತಿ ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ
ಅನ್ನಭಾಗ್ಯ ಬಡವರಿಗೆ ಪ್ರತಿ ತಿಂಗಳು 10 kg
ಗೃಹ ಜ್ಯೋತಿ ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ
ಗೃಹಲಕ್ಷ್ಮಿ ₹2000
ಯುವನಿಧಿ ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ₹3000 | ₹1500

"ಸ್ವಾತಂತ್ರ್ಯ ಹೋರಾಟಕ್ಕೆ ಸ್ಫೂರ್ತಿಕೊಟ್ಟವರ ಆದರ್ಶಗಳನ್ನು ಗೌರವಿಸುವುದು ಮತ್ತು ಪಾಲಿಸುವುದು - ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತಕರ್ತವ್ಯ"

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು